ಲಿಖಿತ ಮೂಲಕ
ಉತ್ತರಿಸುವ ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೧೨

**ಪಟ್ಟಿ – ೨೨**

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತನೆಯ ಅಧಿವೇಶನ

(ಮುಂದುವರೆದ ಉಪವೇಶನ)

ಸೋಮವಾರ, ದಿನಾಂಕ : ೧೮ನೇ ಜುಲೈ, ೨೦೧೬

---

## ಸಮೂಹ – I

೧. ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು.

೨. ಮಾನ್ಯ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು.

೩. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.

೪. ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

೫. ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು.

೬. ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು.

೭. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು.

---

# "ರಾಷ್ಟ್ರೀಯ ಆರೋಗ್ಯ ಮಿಷನ್" (ಎನ್.ಎಚ್.ಎಂ.) ಯೋಜನೆಯ ಬಗ್ಗೆ

**ಶ್ರೀ ಅಮರನಾಥ ಪಾಟೀಲ್(ಪದವೀಧರರ ಕ್ಷೇತ್ರ):–**

೨೪೭೨(೨೭೩೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) "ರಾಷ್ಟ್ರೀಯ ಆರೋಗ್ಯ ಮಿಷನ್" (ಎನ್.ಎಚ್.ಎಂ.) ಯೋಜನೆಯಡಿಯಲ್ಲಿ ಔಷಧ ಖರೀದಿಯಲ್ಲಿ ಅಕ್ರಮ ನಡೆದಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ಸಂಬಂಧಪಟ್ಟ ಸಂಸ್ಥೆ ಅಥವಾ ಸಂಬಂಧಪಟ್ಟ ಅಧಿಕಾರಿಗಳ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ಔಷಧ ಖರೀದಿ ಅವ್ಯವಹಾರ ತನಿಖೆ ನಡೆಸಲು ಸರ್ಕಾರ ಸಮಿತಿ ರಚಿಸಲಾಗಿದೆಯೇ ; ಹಾಗಿದ್ದಲ್ಲಿ ಸಂಪೂರ್ಣ ಮಾಹಿತಿ ನೀಡುವುದು;

(ಇ) "ರಾಷ್ಟ್ರೀಯ ಆರೋಗ್ಯ ಮಿಷನ್" (ಎನ್.ಎಚ್.ಎಂ.) ಯೋಜನೆಯಡಿಯಲ್ಲಿ ಕಳೆದ ಮೂರು ವರ್ಷಗಳಲ್ಲಿ ರಾಜ್ಯಕ್ಕೆ ಬಿಡುಗಡೆಯಾಗಿರುವ ಅನುದಾನವೆಷ್ಟು ; ಖರ್ಚಾಗಿರುವ ಮೊತ್ತವೆಷ್ಟು ; ಖರ್ಚಾಗದೇ ಉಳಿದಿರುವ ಮೊತ್ತವೆಷ್ಟು ; (ಸಂಪೂರ್ಣ ವಿವರ ನೀಡುವುದು)

(ಈ) ವಿಶೇಷವಾಗಿ ಕಳೆದ ಮೂರು ವರ್ಷಗಳಲ್ಲಿ ಹೈದ್ರಾಬಾದ್–ಕರ್ನಾಟಕ ಭಾಗದ ೬ ಜಿಲ್ಲೆಗಳಲ್ಲಿ ಬಿಡುಗಡೆಯಾಗಿರುವ ಅನುದಾನವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

## ರಾಜ್ಯದಲ್ಲಿ ಮಹಾಮಾರಿ ಡೆಂಘೀ, ಹಕ್ಕಿಜ್ವರ ಮತ್ತು ಚಿಕ್ಕನ್‌ಗುನ್ಯ ಜ್ವರಗಳ ಪ್ರಕರಣಗಳ ಕುರಿತು

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೨೪೭೩ (೨೭೪೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ಎರಡು ತಿಂಗಳಿನಿಂದ ಮಹಾಮಾರಿ ಡೆಂಘೀ ಜ್ವರ, ಹಕ್ಕಿಜ್ವರ ಹಾಗೂ ಚಿಕನ್‌ಗುನ್ಯ ಜ್ವರಗಳು ಪತ್ತೆಯಾಗಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದರೆ, ರಾಜ್ಯದಲ್ಲಿ ಯಾವ ಯಾವ ಜಿಲ್ಲೆಗಳಲ್ಲಿ ಈ ಪ್ರಕರಣಗಳು ಬೆಳಕಿಗೆ ಬಂದಿವೆ ; ಈ ಖಾಯಿಲೆಯಿಂದ ಬಳಲುತ್ತಿರುವ ಜನರ ಸಂಖ್ಯೆ ಎಷ್ಟು ; ರಾಜ್ಯ ಸರ್ಕಾರ ಈ ರೋಗ ತಡೆಗಟ್ಟಲು ಮೀಸಲಿಟ್ಟ ಅನುದಾನವೆಷ್ಟು ; (ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರ, ತಾಲ್ಲೂಕು ಆಸ್ಪತ್ರೆಗಳು ಹಾಗೂ ಜಿಲ್ಲಾಸ್ಪತ್ರೆಗಳು ಜನರಿಗೆ ಡೆಂಘೀ ಜ್ವರ, ಹಕ್ಕಿ ಜ್ವರ ಹಾಗೂ ಚಿಕನ್ ಗುನ್ಯ ಜ್ವರ ರೋಗದ ಬಗ್ಗೆ ಯಾವ ರೀತಿ ಜಾಗೃತಿ ಮೂಡಿಸುತ್ತಿವೆ ;

(ಈ) ಈ ರೋಗವನ್ನು ಪತ್ತೆ ಹಚ್ಚಲು ಪ್ರಯೋಗಾಲಯಗಳು ಹಾಗೂ ಸಂಶೋಧನಾ ಕೇಂದ್ರಗಳನ್ನು ತೆರೆಯಲಾಗಿದೆಯೇ ; ಹಾಗೂ ಡೆಂಘೀ ಜ್ವರ, ಹಕ್ಕಿಜ್ವರ ಹಾಗೂ ಚಿಕನ್‌ಗುನ್ಯ ಜ್ವರವನ್ನು ಪತ್ತೆ ಹಚ್ಚಿ ಸಂಪೂರ್ಣ ನಿರ್ಮೂಲನೆ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ಸಂಪೂರ್ಣ ವಿವರ ನೀಡುವುದು)

# “ಹರೀಶ್ ಸ್ವಾಂತನ” (ಮುಖ್ಯಮಂತ್ರಿಗಳ ಸ್ವಾಂತನ) ಯೋಜನೆಯ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೨೪೭೪ (೨೭೩೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ರಸ್ತೆ ಅಪಘಾತಕ್ಕೆ ಒಳಗಾದ ಸಂದರ್ಭದಲ್ಲಿ ತುರ್ತು ಚಿಕಿತ್ಸೆ ಹಾಗೂ ತಕ್ಷಣ ವೈದ್ಯಕೀಯ ಚಿಕಿತ್ಸೆ ನೀಡಲು ಹೊಸದಾಗಿ “ಹರೀಶ್ ಸ್ವಾಂತನ” (ಮುಖ್ಯಮಂತ್ರಿಗಳ ಸ್ವಾಂತನ) ಯೋಜನೆಯನ್ನು ಯಾವಾಗಿನಿಂದ ಜಾರಿಗೆ ತರಲಾಗಿದೆ ;

(ಆ) ಸದರಿ ಯೋಜನೆಯು ಜಾರಿಗೆ ಬಂದಾಗಿನಿಂದಲೂ ರಾಜ್ಯದಲ್ಲಿ ಅಪಘಾತಕ್ಕೊಳಗಾದವರ ಸಂಖ್ಯೆ ಎಷ್ಟು ; ಸರ್ಕಾರ ಅಪಘಾತಕ್ಕೆ ಒಳಗಾದ ವ್ಯಕ್ತಿಗೆ ತಕ್ಷಣವೇ ಬಿಡುಗಡೆ ಮಾಡುವ ಹಣವೆಷ್ಟು ;

(ಇ) ರಾಜ್ಯ ಸರ್ಕಾರ ೨೦೧೫–೧೬ನೇ ಸಾಲಿನಲ್ಲಿ ಈ ಯೋಜನೆಗೆ ಆಯವ್ಯಯದಲ್ಲಿ ಬಿಡುಗಡೆ ಮಾಡಿರುವ ಅನುದಾನವೆಷ್ಟು ; ಈ ಸಾಲಿನಲ್ಲಿ ಬಿಡುಗಡೆ ಮಾಡಿರುವ ಅನುದಾನದಲ್ಲಿ ಖರ್ಚಾಗಿರುವ ಮೊತ್ತವೆಷ್ಟು ; ಉಳಿದ ಮೊತ್ತವೆಷ್ಟು ;

(ಈ) ಈ ಮಹತ್ವದ ಯೋಜನೆಯ ರೂಪು–ರೇಷೆಗಳನ್ನು ಹಣಕಾಸಿನ ವ್ಯವಸ್ಥೆ ಯಾವ ರೀತಿ ಅಪಘಾತಕ್ಕೆ ಒಳಗಾದ ವ್ಯಕ್ತಿಗೆ ತಲುಪಿಸಲಾಗುವುದು ಹಾಗೂ ಈ ಯೋಜನೆ ರಾಜ್ಯ ವ್ಯಾಪ್ತಿಯೊಳಗೆ ಒಳಪಟ್ಟಿದೆಯೋ ಅಥವಾ ರಾಜ್ಯದ ವ್ಯಕ್ತಿಯು ಇತರೆ ರಾಜ್ಯದಲ್ಲಿ ಅಪಘಾತಕ್ಕೆ ಒಳಗಾಗಿ ರಾಜ್ಯದಲ್ಲಿ ಚಿಕಿತ್ಸೆ ಪಡೆಯಲು ಅರ್ಹರೆ ಎಂಬ ಸಂಪೂರ್ಣ ಮಾಹಿತಿ ನೀಡುವುದು ?

## ಹೆಚ್.ಕೆ.ಆರ್.ಡಿ.ಬಿ. ವತಿಯಿಂದ ಶಾಲಾ ಕಾಲೇಜುಗಳ ಮೂಲ ಸೌಕರ್ಯ ಅಭಿವೃದ್ಧಿಗೆ ಅನುದಾನದ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೨೪೭೫ (೨೭೩೯) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೆಚ್.ಕೆ.ಆರ್.ಡಿ.ಬಿ. ವತಿಯಿಂದ ಶಾಲೆ, ಕಾಲೇಜುಗಳ ಮೂಲ ಸೌಕರ್ಯ ಅಭಿವೃದ್ಧಿಗಾಗಿ ಅನುದಾನ ಒದಗಿಸಲಾಗುತ್ತಿದೆಯೇ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಹೈದರಾಬಾದ್–ಕರ್ನಾಟಕ ಪ್ರದೇಶದ ಕಾಲೇಜುಗಳು, ಪ್ರಥಮ ದರ್ಜೆ ಕಾಲೇಜು ಹಾಗೂ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಿಗೆ ಅನುದಾನ ಒದಗಿಸಲಾಗಿದೆಯೇ ; (ಕಾಲೇಜುವಾರು, ಯೋಜನೆವಾರು ಅನುದಾನವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಹೆಚ್.ಕೆ.ಆರ್.ಡಿ.ಬಿ. ಯಿಂದ ಮಾಹಿತಿ ತಂತ್ರಜ್ಞಾನ ಅಭಿವೃದ್ಧಿಗಾಗಿ ಕೈಗೊಂಡ ಕಾರ್ಯಕ್ರಮಗಳೇನು ? (ಯೋಜನೆವಾರು, ಕಾಲೇಜುವಾರು ಮಾಹಿತಿ ನೀಡುವುದು)

## ಸಂಸ್ಕೃತಿ ಉತ್ಸವಕ್ಕೆ ಸಹಾಯಧನ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೪೭೬ (೨೬೭೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯುಗಳನ್ನು ದಯುವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸಂಸ್ಕೃತಿ ಉತ್ಸವ ಹಾಗೂ ಬೃಹತ್ ಜಾತ್ರೆಗಳಿಗೆ ಸರ್ಕಾರದಿಂದ ಎಷ್ಟು ಸಹಾಯಧನವನ್ನು ನೀಡಲಾಗಿದೆ, ನೀಡಿದ್ದರೆ, ಸಂಪೂರ್ಣ ವಿವರ ನೀಡುವುದು ;

(ಆ) ಹಿಂದಿನ ಸರ್ಕಾರದ ಅವಧಿಯಲ್ಲಿ ವಿಜಯಪುರದ ಶ್ರೀ ಸಿದ್ದೇಶ್ವರ ಸಂಸ್ಥೆಯ ಜಾತ್ರೆ ಮಹೋತ್ಸವಕ್ಕೆ ಸಹಾಯಧನ ರೂಪದಲ್ಲಿ ನೀಡಿದ ಮೇಲೆ ಈಗ ಸ್ಥಗಿತಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದರೆ, ಯಾವ ಕಾರಣಕ್ಕೆ ಸ್ಥಗಿತಗೊಳಿಸಲಾಗಿದೆ ; ಮತ್ತು ಮುಂದುವರೆಸುವ ಕುರಿತು ಸರ್ಕಾರದ ಚಿಂತನೆಯೇನು ; (ವಿವರ ನೀಡುವುದು)

(ಈ) ಸರ್ಕಾರಕ್ಕೆ ಜಾತ್ರೆ ಉತ್ಸವವನ್ನು ಪ್ರೋತ್ಸಾಹಿಸುವ ಉದ್ದೇಶವಿದೆಯೇ; ಇದ್ದಲ್ಲಿ, ಸರ್ಕಾರದ ಮುಂದಿನ ಕ್ರಮವೇನು ? (ವಿವರವಾದ ಮಾಹಿತಿ ನೀಡುವುದು

## ಮಕ್ಕಳಿಗೆ ಪೌಷ್ಠಿಕ ಆಹಾರದ ಕೊರತೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೪೭೭ (೨೬೭೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಹಿಳಾ ಮತ್ತು ಮಕ್ಕಳ ಕಲ್ಯಾಣ ಅಭಿವೃದ್ಧಿ ಇಲಾಖೆ, ಅಂಗನವಾಡಿ ಕೇಂದ್ರಗಳ ಮಕ್ಕಳಿಗೆ ನೀಡುವ ಪೌಷ್ಠಿಕ ಆಹಾರ ಪದಾರ್ಥಗಳನ್ನು ಖರೀದಿಸುವಾಗ ಯಾವ ಆಧಾರದ ಮೇಲೆ ದರಗಳು ನಿಗದಿಯಾಗಿರುತ್ತವೆ ; (ವಿವರ ನೀಡುವುದು)

(ಆ) ದರಗಳು ಹಾಗೂ ಮಕ್ಕಳಿಗೆ ಒದಗಿಸುವ ಪೌಷ್ಠಿಕ ಆಹಾರದ ಪ್ರಮಾಣ ಹೆಚ್ಚು ಮತ್ತು ಕಡಿಮೆ ಆದಾಗ ಈ ವ್ಯತ್ಯಾಸದ ಹಣವನ್ನು ಯಾವ ರೀತಿಯಾಗಿ ಭರಿಸಲಾಗುತ್ತದೆ ; (ಮಾಹಿತಿ ನೀಡುವುದು)

(ಇ) ದರಗಳು ಹೆಚ್ಚಾದಾಗ ಮಕ್ಕಳಿಗೆ ಒದಗಿಸುವ ಪೌಷ್ಠಿಕ ಆಹಾರದ ಪ್ರಮಾಣ ಕಡಿಮೆಯಾಗುವುದಿಲ್ಲವೇ ? (ವಿವರ ನೀಡುವುದು)

## ವೈದ್ಯಕೀಯ ಮಹಾವಿದ್ಯಾಲಯ ಸ್ಥಾಪನೆ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೪೭೮ (೨೬೭೭) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಯಲ್ಲಿ ಜನರಿಗೆ ಅಪಘಾತಗಳು, ಹೃದಯಾಘಾತಗಳಾದಾಗ ಹೆಚಿನ ಚಿಕಿತ್ಸೆ ಸಿಗದೆ ನೆರೆಯ ಮಹಾರಾಷ್ಟ್ರದ ಮೀರಜ್, ಸಾಂಗ್ಲಿ, ಸೊಲ್ಲಾಪುರಕ್ಕೆ ಹೋಗಿ ಚಿಕಿತ್ಸೆ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಇದಕ್ಕೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳು ಯಾವುವು ; (ಮಾಹಿತಿ ನೀಡುವುದು)

(ಆ) ರಾಜ್ಯದ ಪ್ರತಿ ಜಿಲ್ಲೆಯಲ್ಲಿ ಸರ್ಕಾರಿ ವೈದ್ಯಕೀಯ ಮಹಾವಿದ್ಯಾಲಯಗಳನ್ನು ತೆರೆಯುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದಕ್ಕೆ ಸರ್ಕಾರವು ತೆಗೆದುಕೊಂಡಿರುವ ಕ್ರಮಗಳು ಯಾವುವು ; (ಮಾಹಿತಿ ಒದಗಿಸುವುದು)

(ಇ) ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಪ್ರಸ್ತುತ ವೈದ್ಯಕೀಯ ಮಹಾವಿದ್ಯಾಲಯಗಳನ್ನು ಪ್ರಾರಂಭಿಸಲಾಗಿದೆ ; (ವಿವರ ನೀಡುವುದು)

(ಈ) ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲೂ ವೈದ್ಯಕೀಯ ಮಹಾವಿದ್ಯಾಲಯಗಳಿಗೆ ಮಂಜೂರಾತಿ ನೀಡಲಾಗಿದೆಯೇ ; ನೀಡಿದ್ದಲ್ಲಿ, ಇವುಗಳ ಪ್ರಾರಂಭಕ್ಕೆ ವಿಳಂಬವಾಗಲು ಕಾರಣಗಳೇನು;

(ಉ) ಈ ಎರಡೂ ಜಿಲ್ಲೆಗಳಲ್ಲಿ ವೈದ್ಯಕೀಯ ಮಹಾವಿದ್ಯಾಲಯಗಳನ್ನು ಯಾವಾಗ ಸ್ಥಾಪನೆ ಮಾಡಲಾಗುವುದು ? (ಸಂಪೂರ್ಣ ವಿವರ ನೀಡುವುದು)

## ವೈದ್ಯರು ಹಾಗೂ ಅರೆ ವೈದ್ಯಕೀಯ ಸಿಬ್ಬಂದಿಯ ಕೊರತೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೪೭೯ (೨೬೭೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಹಾಗೂ ಬಾಗಲಕೋಟೆಯಲ್ಲಿರುವ ಜಿಲ್ಲಾ ಆಸ್ಪತ್ರೆಗಳಲ್ಲಿ ವೈದ್ಯರು ಹಾಗೂ ಅರೆ ವೈದ್ಯಕೀಯ ಸಿಬ್ಬಂದಿ ಹಾಗೂ 'ಡಿ' ವರ್ಗದ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಯಾವ ಕ್ರಮ ಕೈಗೊಳ್ಳಲಾಗಿದೆ ; ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಎಷ್ಟು ಸಮಯ ಬೇಕು; (ಸಂಪೂರ್ಣವಾದ ಮಾಹಿತಿ ನೀಡುವುದು)

(ಆ) ವಿಜಯಪುರ ಹಾಗೂ ಬಾಗಲಕೋಟೆಯಲ್ಲಿ ಕ್ಷಯ ಹಾಗೂ ಎದೆ ರೋಗಗಳ ಆಸ್ಪತ್ರೆ ಚಾಲ್ತಿಯಲ್ಲಿವೆಯೇ ; ಇದ್ದಲ್ಲಿ, ಅಧೀಕ್ಷಕರು ಹಾಗೂ ವೈದ್ಯರು ಕಾರ್ಯ ನಿರ್ವಹಿಸುತ್ತಿರುವರೆ ; ನಿರ್ವಹಿಸದೇ ಇದ್ದಲ್ಲಿ, ಇದಕ್ಕೆ ಕಾರಣಗಳೇನು ; (ಮಾಹಿತಿ ನೀಡುವುದು)

(ಇ) ವಿಜಯಪುರ ಹಾಗೂ ಬಾಗಲಕೋಟೆಯಲ್ಲಿ ಕ್ಷಯ ಹಾಗೂ ಎದೆರೋಗಗಳ ಆಸ್ಪತ್ರೆಯಲ್ಲಿ ಕಳೆದ ೧೦ ವರ್ಷಗಳಲ್ಲಿ ಉಪಚರಿಸಿದ

ರೋಗಿಗಳ ಸಂಖ್ಯೆ ಎಷ್ಟು ; ಈ ಆಸ್ಪತ್ರೆ ನಡೆಸಲು ಸರ್ಕಾರಕ್ಕೆ ಎಷ್ಟು ಹಣ ಖರ್ಚಾಗಿದೆ ; (ಅಂಕಿ ಅಂಶಗಳ ಸಮೇತ ಮಾಹಿತಿ ನೀಡುವುದು)

(ಈ) ವಿಜಯಪುರ ಹಾಗೂ ಬಾಗಲಕೋಟೆಯಲ್ಲಿ ಜಿಲ್ಲಾ ಉಪಕರಣಗಳ ನಿರ್ವಹಣಾ ಘಟಕಗಳು ಕಾರ್ಯ ನಿರ್ವಹಿಸುತ್ತಿವೆಯೇ ; ನಿರ್ವಹಿಸುತ್ತಿದ್ದಲ್ಲಿ, ಇದರಿಂದ ಆಸ್ಪತ್ರೆಗಳಿಗೆ ಆದ ಅನುಕೂಲಗಳು ಎಷ್ಟು ; ಈ ಘಟಕದಿಂದ ಕಳೆದ ೧೦ ವರ್ಷಗಳಲ್ಲಿ ಜಿಲ್ಲೆಯ ಆಸ್ಪತ್ರೆಗಳ ನಿರ್ವಹಣೆ ಮಾಡಿದ ಉಪಕರಣಗಳ ಸಂಖ್ಯೆ ಎಷ್ಟು; (ಮಾಹಿತಿ ಒದಗಿಸುವುದು)

(ಉ) ಕಳೆದ ೧೦ ವರ್ಷಗಳಲ್ಲಿ ಜಿಲ್ಲೆಯ ಎಲ್ಲಾ ಆಸ್ಪತ್ರೆಗಳಲ್ಲಿ ನಿರುಪಯುಕ್ತಗೊಳಿಸಿದ ಸಾಧನ ಹಾಗೂ ಉಪಕರಣಗಳು ಮತ್ತು ಸಲಕರಣೆಗಳ ಸಂಖ್ಯೆ ಹಾಗೂ ಮೊತ್ತ ಎಷ್ಟು ? (ಅಂಕಿ ಅಂಶಗಳ ಸಮೇತ ಮಾಹಿತಿ ನೀಡುವುದು)

## ಮಾನ್ವಿ ಪಟ್ಟಣದಲ್ಲಿರುವ ಸುವರ್ಣ ಕನ್ನಡ ಭವನದ ಬಗ್ಗೆ

**ಶ್ರೀ ಎನ್.ಎಸ್. ಬೋಸ್ ರಾಜು (ವಿಧಾನಸಭೆಯಿಂದ ಚುನಾಯಿತರಾದವರು):-**

೨೪೮೦(೨೭೨೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:-

ಮಾನ್ವಿ ಮಹಿಳಾ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ನಿರ್ಮಿಸಿರುವ ಸುವರ್ಣ ಕನ್ನಡ ಭವನ ಕಟ್ಟಡ ಅಭಿವೃದ್ಧಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಹೈದ್ರಾಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ ಸರ್ಕಾರದಿಂದ ಸಿಕ್ಕಿರುವ ಅನುದಾನದ ಕುರಿತು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೨೪೮೧ (೨೭೨೪) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಡಾ॥ ಡಿ.ಎಂ. ನಂಜುಂಡಪ್ಪ ವರದಿ ಆಧಾರದ ಮೇಲೆ ರಾಯಚೂರು ಜಿಲ್ಲೆಯ ಕ್ಷೇತ್ರವಾರು ಹಾಗೂ ಇಲಾಖೆವಾರು ೨೦೦೭ ರಿಂದ ೨೦೧೬ರವರೆವಿಗೂ ವಿವಿಧ ಯೋಜನೆಗಳಿಗೆ ಖರ್ಚು ಮಾಡಿರುವ ವೆಚ್ಚ ಎಷ್ಟು; (ಯೋಜನೆಗಳ ವಿವರ ನೀಡುವುದು)

(ಆ) ೨೦೧೫–೧೬ರಲ್ಲಿ ಹೈದ್ರಾಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ (HKARDB) ಸರ್ಕಾರದಿಂದ ಸಿಕ್ಕಿರುವ ಅನುದಾನವೆಷ್ಟು ; ಖರ್ಚಾಗಿರುವ ಅನುದಾನ ಎಷ್ಟು ;

(ಇ) (HKARDB)ಯಿಂದ ೨೦೧೪–೧೫ ಹಾಗೂ ೨೦೧೬–೧೭ರಲ್ಲಿ ಮಂಜೂರಾತಿಯಾಗಿರುವ ಅನುದಾನ ಎಷ್ಟು? (ಜಿಲ್ಲಾವಾರು ವಿವರ ನೀಡುವುದು)

## ರಾಯಚೂರು ಜಿಲ್ಲೆಯ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ವಸತಿ ಶಾಲೆಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೨೪೮೨ (೨೭೨೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಾನ್ವಿ ತಾಲ್ಲೂಕಿನ ಕಲುತಾಳ ಮೊರಾರ್ಜಿ ದೇಸಾಯಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ವಸತಿ ಶಾಲೆ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ೨೦೧೫-೧೬ರಲ್ಲಿ ರಾಯಚೂರು ಜಿಲ್ಲೆಗೆ ಮಂಜೂರಾತಿಯಾಗಿರುವ ವಸತಿ ಶಾಲೆಗಳ ಸಂಖ್ಯೆ ಎಷ್ಟು ; ಜಿಲ್ಲೆಗೆ ಹೊಸದಾಗಿ ವಸತಿ ಶಾಲೆಗಳನ್ನು ಪ್ರಾರಂಭಿಸುವ ಬೇಡಿಕೆಗಳ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ರಾಯಚೂರು ನಗರದಲ್ಲಿ ಡಾ॥ ಬಿ.ಆರ್. ಅಂಬೇಡ್ಕರ್ ಮತ್ತು ಬಾಬುಜಗಜೀವನರಾಂ ರವರ ಭವನ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಈ) ರಾಯಚೂರು ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಜನಾಂಗಕ್ಕೆ ವಸತಿ ಗೃಹಗಳ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಉ) ಮಾನ್ವಿ ತಾಲ್ಲೂಕಿನ ಕುರ್ಡಿ ಗ್ರಾಮದಲ್ಲಿ ಹೊಸ ಮೊರಾರ್ಜಿ ದೇಸಾಯಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಸತಿ ಶಾಲೆ ಪ್ರಾರಂಭಿಸಲು ಸರ್ಕಾರ ತೆಗದುಕೊಂಡ ಕ್ರಮಗಳೇನು?

## ಪ್ರವಾಸೋದ್ಯಮ ಇಲಾಖೆಯಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಟ್ಯಾಕ್ಸಿ ನೀಡುತ್ತಿರುವ ವಿಚಾರ

**ಶ್ರೀ ಭಾನುಪ್ರಕಾಶ್ (ವಿಧಾನ ಸಭೆಯಿಂದ ಚುನಾಯಿತರಾದವರು):–**

೨೪೮೩ (೨೭೪೭) ಮಾನ್ಯ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ಸಚಿವರು. ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ೨೦೧೩ ರಿಂದ ೨೦೧೬ನೇ ಸಾಲಿನವರೆಗೆ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಯುವ ನಿರುದ್ಯೋಗಿಗಳಿಗೆ ಟ್ಯಾಕ್ಸಿ ಕೊಳ್ಳಲು ಸರ್ಕಾರದ ಯೋಜನೆಯಂತೆ ಎಷ್ಟು ಜನರಿಗೆ ನೀಡಲಾಗಿದೆ; ಇದರಲ್ಲಿ ಯುವತಿಯರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವರ್ಷವಾರು ಮಾಹಿತಿ ನೀಡುವುದು)

(ಆ) ಟ್ಯಾಕ್ಸಿಯನ್ನು ಸರ್ಕಾರದಿಂದ ಪಡೆದವರು ಅದರ ಉಪಯೋಗ ಮಾಡುವಂತೆ ಮಾಡಲು ಮತ್ತು ಅದನ್ನು ಪಡೆದ ನಿರುದ್ಯೋಗಿಗಳೇ ಉಪಯೋಗಿಸಲು ಸರ್ಕಾರ ವಿಧಿಸಿರುವ ಷರತ್ತುಗಳೇನು ; ಅದನ್ನು ಪಾಲಿಸದೇ ಇರುವವರ ಬಗ್ಗೆ ಸರ್ಕಾರದ ಕ್ರಮವೇನು ; (ವಿವರ ನೀಡುವುದು)

(ಇ) ಪ್ರವಾಸೋದ್ಯಮ ಇಲಾಖೆಗೆ ಈ ಯೋಜನೆಯಿಂದ ಆಗಿರುವ ಪ್ರಯೋಜನದ ಬಗ್ಗೆ ಸರ್ಕಾರ ವಿಮರ್ಶೆ ನಡೆಸಿದೆಯೇ ? (ವಿವರ ನೀಡುವುದು)

## ಪ್ರವಾಸಿ ಮಾರ್ಗದರ್ಶಿಗಳ ವಿಚಾರ

**ಶ್ರೀ ಭಾನುಪ್ರಕಾಶ್ (ವಿಧಾನ ಸಭೆಯಿಂದ ಚುನಾಯಿತರಾದವರು):–**

೨೪೮೪ (೨೭೪೮) ಮಾನ್ಯ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು. ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರವಾಸಿ ಮಾರ್ಗದರ್ಶಿಗಳ ಕೌಶಲ್ಯ ಅಭಿವೃದ್ಧಿ ಪಡಿಸಲು ಸರ್ಕಾರ ಪ್ರಸಕ್ತ ಸಾಲಿನಲ್ಲಿ ಎಷ್ಟು ಮಾರ್ಗದರ್ಶಿಗಳಿಗೆ ತರಬೇತಿ ನೀಡಿದೆ; (ಜಿಲ್ಲಾವಾರು ವರ್ಷವಾರು ಮಾಹಿತಿ ನೀಡುವುದು)

(ಆ) ಕೌಶಲ್ಯ ಅಭಿವೃದ್ಧಿ ಪಡಿಸಲು ಸರ್ಕಾರ ಮಾಡಿದ ವೆಚ್ಚ ಎಷ್ಟು ;

(ಇ) ಹೋಟೆಲ್ ಮ್ಯಾನೇಜ್‌ಮೆಂಟ್ ಸಂಸ್ಥೆಗಳನ್ನು ರಾಜ್ಯದಲ್ಲಿ ಯಾವ ಜಿಲ್ಲೆಯಲ್ಲಿ ಸ್ಥಾಪಿಸಲಾಗಿದೆ ; ಅದಕ್ಕಾಗಿ ಸರ್ಕಾರ ನೀಡಿರುವ ಅನುದಾನ ಎಷ್ಟು ;

(ಈ) ಜೋಗ ಜಲಪಾತದಲ್ಲಿ ನೀರಿನ ಮರು ಬಳಕೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿಯಿರುವ ಕಿರಿಯ ಫಾರ್ಮಸಿಸ್ಟ್ ಹುದ್ದೆಗಳ ಬಗ್ಗೆ

**ಶ್ರೀ ಭಾನುಪ್ರಕಾಶ್ (ವಿಧಾನ ಸಭೆಯಿಂದ ಚುನಾಯಿತರಾದವರು):–**

೨೪೮೫ (೨೭೪೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಒಟ್ಟು ಮಂಜೂರಾಗಿರುವ ಕಿರಿಯ ಫಾರ್ಮಾಸಿಸ್ಟ್ ಹುದ್ದೆಗಳ ಸಂಖ್ಯೆ ಎಷ್ಟು ; ಮತ್ತು ಹಾಲಿ ಇರುವ ಕಿರಿಯ ಫಾರ್ಮಾಸಿಸ್ಟ್ ಹುದ್ದೆಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವರ್ಷವಾರು ಮಾಹಿತಿ ನೀಡುವುದು)

(ಆ) ದಿನಾಂಕ: ೦೧.೦೩.೨೦೧೫ ರಿಂದ ೩೦.೦೬.೨೦೧೬ವರೆಗಿನ ಅವಧಿಯಲ್ಲಿ ಬೆಂಗಳೂರು ನಗರಕ್ಕೆ ವರ್ಗಾವಣೆ ಮತ್ತು ನಿಯೋಜನೆಗೊಂಡಿರುವ ಫಾರ್ಮಾಸಿಸ್ಟ್ ಗಳ ವಿವರ ನೀಡುವುದು;

(ಇ) ಬೆಂಗಳೂರು ನಗರದಲ್ಲಿ ಕಾರ್ಯನಿರ್ವಹಿಸುತ್ತಿರುವ ಫಾರ್ಮಾಸಿಸ್ಟ್‌ಗಳು ಎಷ್ಟು ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿದ್ದಾರೆ ? (ವ್ಯಕ್ತಿವಾರು ಮತ್ತು ಕಾರ್ಯನಿರ್ವಹಿಸಿದ ವಿವಿಧ ಸ್ಥಳಗಳು ಸೇರಿದಂತೆ ಮಾಹಿತಿ ನೀಡುವುದು)

## ಕೆ.ಎಸ್.ಟಿ.ಡಿ.ಸಿ. ಕಾಲ್ ಸೆಂಟರ್‌ನಿಂದ ಆದ ನಷ್ಟದ ಬಗ್ಗೆ.

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೨೪೮೬ (೨೭೩೩) ಮಾನ್ಯ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು. ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ (ಕೆ.ಎಸ್.ಟಿ.ಡಿ.ಸಿ) ಟ್ಯಾಕ್ಸಿ , ಕಾಲ್ ಸೆಂಟರ್ ಕಾರ್ಯವೈಖರಿಯ ಬಗ್ಗೆ ಭಾರತ ಲೆಕ್ಕಪಾಲಕರು ೨೦೧೫–೧೬ನೇ ಸಾಲಿನ ಲೆಕ್ಕಪರಿಶೀಲನಾ ವರದಿಯಲ್ಲಿ ಆಕ್ಷೇಪಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ಸರ್ಕಾರ ಈ ಕುರಿತು ಯಾವ ಕ್ರಮ ಕೈಗೊಂಡಿದೆ;

(ಇ) ಯಾವುದೇ ಪ್ರಯೋಜನ ಪಡೆಯದೇ ರೂ. ೧.೪ ಕೋಟಿಗಳನ್ನು ಕಾಲ್ ಸೆಂಟರ್‌ಗೆ ಪಾವತಿಸಲು ಕಾರಣಗಳೇನು ;

(ಈ) ಇದರ ಸಂಬಂಧ ಸರ್ಕಾರ ಯಾವ ಕಾರ್ಯಕ್ರಮ ಹಾಕಿಕೊಂಡಿದೆ? (ವಿವರವಾದ ಮಾಹಿತಿಯನ್ನು ನೀಡುವುದು)

## ಕಿಯೋನಿಕ್ಸ್ ನಿಗಮದ ಕೇಂದ್ರ ಕಚೇರಿ ಸ್ಥಳಾಂತರಿಸುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೨೪೮೭ (೨೭೩೪) ಮಾನ್ಯ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು. ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಿಯೋನಿಕ್ಸ್ ನಿಗಮದ ಕೇಂದ್ರ ಕಚೇರಿಯನ್ನು ಕಸ್ತೂರಿ ಬಾ ರಸ್ತೆಯಲ್ಲಿನ ಸ್ವಂತ ಕಟ್ಟಡದಿಂದ ಶಾಂತಿ ನಗರದ ಬಾಡಿಗೆ ಕಟ್ಟಡಕ್ಕೆ ಸ್ಥಳಾಂತರಿಸಲು ಕಾರಣಗಳೇನು ;

(ಆ) ಬಾಡಿಗೆ ಕಟ್ಟಡದ ಒಳಾಂಗಣ ವಿನ್ಯಾಸಕ್ಕೆ ಮಾಡಿದ ಖರ್ಚು ಎಷ್ಟು ;

(ಇ) ಈ ಹಣದಲ್ಲಿ ಸ್ವಂತ ಜಾಗದ ಕಸ್ತೂರಿ ಬಾ ರಸ್ತೆಯಲ್ಲಿನ ಕಚೇರಿಯನ್ನು ವಿನ್ಯಾಸಗೊಳಿಸಿದ್ದರೆ ಈಗ ಪಾವತಿಸುವ ಬಾಡಿಗೆ ಹಣ ನಿಗಮಕ್ಕೆ ಉಳಿತಾಯವಾಗುತ್ತಿರಲಿಲ್ಲವೇ ;

(ಈ) ಕಸ್ತೂರಿ ಬಾ ರಸ್ತೆಯ ಸ್ವಂತ ಕಟ್ಟಡದಿಂದ ನಿಗಮಕ್ಕೆ ತಿಂಗಳಿಗೆ ಎಷ್ಟು ಬಾಡಿಗೆ ಬರುತ್ತಿದೆ ;

(ಉ) ನಿಗಮದ ಆಸ್ತಿಗಳ ಕಟ್ಟಡಗಳು ಎಷ್ಟಿವೆ ; ಎಲ್ಲಿವೆ; ಆದರಿಂದ ತಿಂಗಳಿಗೆ ಬರುವ ಬಾಡಿಗೆ ಎಷ್ಟು ? (ವಿವರವಾದ ವಿಳಾಸ ಸಮೇತ ಮಾಹಿತಿ ನೀಡುವುದು)

## ಕ್ರೈಸ್ ಶಿಕ್ಷಕರಿಗೆ ನೇಮಕಾತಿ ಆದೇಶ ಹೊರಡಿಸುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೨೪೮೮ (೨೨೩೫) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಿಂದುಳಿದ ವರ್ಗಗಳ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಮೊರಾರ್ಜಿ ದೇಸಾಯಿ ಹಾಗೂ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳಿಗೆ ಆಯ್ಕೆಯಾದ ಶಿಕ್ಷಕರಿಗೆ ನೇಮಕಾತಿ ಆದೇಶ ನೀಡದಿರುವುದು ನಿಜವೇ ;

(ಆ) ವಿಳಂಬವಾಗಲು ಕಾರಣಗಳೇನು ;

(ಇ) ಎಲ್ಲಾ ಅಭ್ಯರ್ಥಿಗಳ ಸಿಂಧುತ್ವ ಪ್ರಮಾಣ ಪತ್ರಗಳು ಬಂದಿದ್ದರೂ, ನೇಮಕಾತಿ ಆದೇಶ ಹೊರಡಿಸದಿರಲು ಕಾರಣಗಳೇನು ;

(ಈ) ಎಲ್ಲರಿಗೂ ಯಾವಾಗ ನೇಮಕಾತಿ ಆದೇಶ ಹೊರಡಿಸಲಾಗುವುದು?

## ಸ್ತ್ರೀ ಸ್ವ ಸಹಾಯ ಸಂಘದ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೨೪೮೯ (೨೭೩೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಇರುವ ಸ್ತ್ರೀ ಸ್ವ ಸಹಾಯ ಸಂಘಗಳು ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಇವುಗಳಿಗೆ ಸರ್ಕಾರದಿಂದ ದೊರೆಯಬಹುದಾದ ಸೌಲಭ್ಯಗಳೇನು; (ಸಂಪೂರ್ಣ ವಿವರ ನೀಡುವುದು)

(ಇ) ತುಮಕೂರು ಜಿಲ್ಲೆ ಗುಬ್ಬಿ ತಾಲ್ಲೂಕಿನಲ್ಲಿ ಎಷ್ಟು ಸ್ತ್ರೀ ಸ್ವ ಸಹಾಯ ಸಂಘಗಳು ಇವೆ ; (ಪಂಚಾಯಿತಿವಾರು ಸಂಘದ ಹೆಸರು ಪೂರ್ಣ ವಿಳಾಸದೊಂದಿಗೆ ಮಾಹಿತಿ ನೀಡುವುದು)

(ಈ) ೨೦೧೫–೧೬ನೇ ಸಾಲಿಗೆ ಇವುಗಳ ಅಭಿವೃದ್ಧಿಗಾಗಿ ಮೀಸಲಿಟ್ಟ ಹಣ ಎಷ್ಟು ; ಖರ್ಚಾಗಿರುವುದು ಎಷ್ಟು ; ಉಳಿಕೆ ಎಷ್ಟು? (ವಿವರ ನೀಡುವುದು)

## ಅಂಗವಿಕಲರಿಗೆ ಸೌಲಭ್ಯಗಳು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೪೦ (೨೬೫೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅಂಗವಿಕಲರಿಗೆ ಸರ್ಕಾರದಿಂದ ನೀಡುತ್ತಿರುವ ಸೌಲಭ್ಯಗಳಾವುವು ; (ವಿವರ ನೀಡುವುದು)

(ಆ) ಸರ್ಕಾರದ ಸೌಲಭ್ಯಗಳು ಅಂಗವಿಕಲರಿಗೆ ಸರಿಯಾಗಿ ಸಿಗುತ್ತಿಲ್ಲದಿರುವ ಬಗ್ಗೆ ಸರ್ಕಾರಕ್ಕೆ ದೂರುಗಳು ಬಂದಿವೆಯೇ ;

(ಇ) ಬಂದಿದ್ದರೆ, ಅದರ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಈ) ಅಂಗವಿಕಲತೆ ನಿರ್ಧರಿಸುವಲ್ಲಿ ಅನುಸರಿಸುವ ಮಾನದಂಡಗಳೇನು?

## ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಅಭಿವೃದ್ಧಿ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೯೧ (೨೭೭೯) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಸಮಾಜ ಕಲ್ಯಾಣ ಇಲಾಖೆ ಮತ್ತು ಬೇರೆ ಬೇರೆ ಇಲಾಖೆಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭಿವೃದ್ಧಿಗಾಗಿ ಮೀಸಲಿಟ್ಟ ಅನುದಾನ ಎಷ್ಟು; ಅದರಲ್ಲಿ ಮಂಜೂರಾದ ಮತ್ತು ಬಳಕೆಯಾದ ಅನುದಾನ ಎಷ್ಟು ; (ವರ್ಷಾವಾರು ಮಾಹಿತಿ ನೀಡುವುದು)

(ಆ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗೋಸ್ಕರ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರದ ಯೋಜನೆಗಳು ಯಾವುವು ;

(ಇ) ಕಳೆದ ೩ ವರ್ಷಗಳಲ್ಲಿ ಕೇಂದ್ರದಿಂದ ಬಂದಿರುವ ಅನುದಾನಗಳೆಷ್ಟು; ಅದರಲ್ಲಿ ಖರ್ಚಾಗಿರುವ ಅನುದಾನ ಎಷ್ಟು ? (ವರ್ಷವಾರು ವಿವರ ನೀಡುವುದು)

## ಸರ್ಕಾರಿ ಆಸ್ಪತ್ರೆಗಳಲ್ಲಿ ಸೌಲಭ್ಯಗಳು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೯೨ (೨೭೧೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಸರ್ಕಾರಿ ಆಸ್ಪತ್ರೆಗಳಲ್ಲಿ ಖಾಲಿ ಇರುವ ವೈದ್ಯರುಗಳ ಸಂಖ್ಯೆ ಎಷ್ಟು; ಪ್ಯಾರಾ ಮೆಡಿಕಲ್ ಸಿಬ್ಬಂದಿಗಳ ಸಂಖ್ಯೆ ಎಷ್ಟು ;

(ಆ) ಖಾಲಿ ಹುದ್ದೆಗಳನ್ನು ತುಂಬದಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೆ ;

(ಇ) ಬಂದಿದ್ದಲ್ಲಿ, ಎಷ್ಟು ದಿನಗಳಲ್ಲಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡುತ್ತೀರಿ;

(ಈ) ತಾಲ್ಲೂಕು ಮತ್ತು ಜಿಲ್ಲಾ ಆಸ್ಪತ್ರೆಗಳಲ್ಲಿ ಎಲ್ಲ ವಿಭಾಗಗಳಲ್ಲೂ ತಜ್ಞ ವೈದ್ಯರುಗಳಿದ್ದಾರೆಯೇ ; (ಸಾಮಾನ್ಯ, ಚರ್ಮ, ಮೂಳೆ, ಕಣ್ಣು, ಮನೋರೋಗ, ನರರೋಗ ಇತ್ಯಾದಿ ವಿಭಾಗಗಳು)

(ಉ) ಇಲ್ಲದಿದ್ದಲ್ಲಿ, ಎಲ್ಲ ತಜ್ಞ ವೈದ್ಯರುಗಳ ಸೌಕರ್ಯಗಳು ತಾಲ್ಲೂಕು ಮತ್ತು ಜಿಲ್ಲಾ ಆಸ್ಪತ್ರೆಗಳಲ್ಲಿ ಸಿಗುವಂತೆ ವ್ಯವಸ್ಥೆಯನ್ನು ಎಷ್ಟು ದಿವಸಗಳಲ್ಲಿ ಮಾಡಲಾಗುವುದು ?

## ಕಬ್ಬನ್ ಪಾರ್ಕಿನಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ರೆಸ್ಟೋರೆಂಟ್ ಮಾಡುವ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೯೩ (೨೭೧೧) ಮಾನ್ಯ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಮೂಲೆ ಮೂಲೆಗಳಿಂದ ಬೆಂಗಳೂರಿನ ಕಬ್ಬನ್ ಪಾರ್ಕ್‌ಗೆ ಜನರು ಬರುತ್ತಿದ್ದು, ಅಲ್ಲಿ ಒಳ್ಳೆಯ ರೆಸ್ಟೋರೆಂಟ್ ಇಲ್ಲದೆ ಬವಣೆ ಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸಚಿವಾಲಯ ಕ್ಲಬ್ ಪಕ್ಕದಲ್ಲಿ ಇಂದಿರಾ ಪ್ರಿಯದರ್ಶಿನಿ ಮಕ್ಕಳ ಗ್ರಂಥಾಲಯವಿದ್ದು, ಆ ಸ್ಥಳದಲ್ಲಿ ಪ್ರವಾಸೋದ್ಯಮ ಇಲಾಖೆ

ವತಿಯಿಂದ ರೆಸ್ಟೋರೆಂಟ್ ನಡೆಸಲಾಗುತ್ತಿತ್ತು. ಅದು ಸೂಕ್ತ ಸ್ಥಳವಾಗಿದ್ದು, ಅಲ್ಲಿ ಮತ್ತೆ ರೆಸ್ಟೋರೆಂಟ್ ಮಾಡುವ ಬಗ್ಗೆ ಪರಿಶೀಲನೆ ನಡೆಸುತ್ತೀರಾ ;

(ಇ) ಈ ಜಾಗದಲ್ಲಾಗಲಿ ಅಥವಾ ಕಬ್ಬನ್ ಪಾರ್ಕಿನ ಬೇರೆ ಜಾಗದಲ್ಲಾಗಲಿ ಒಂದು ಒಳ್ಳೆಯ ಊಟ ಮತ್ತು ಉಪಹಾರ ಮಂದಿರವನ್ನು ಪ್ರವಾಸೋದ್ಯಮ ಇಲಾಖೆ ವತಿಯಿಂದ ನಿರ್ಮಿಸಲು ಪರಿಶೀಲನೆ ಮಾಡುತ್ತೀರಾ, ಅಥವಾ ಖಾಸಗಿಯವರಿಗೆ ಅವಕಾಶ ಮಾಡಿಕೊಡುತ್ತೀರಾ?

## ಬಿ.ಪಿ.ಎಲ್ ಕಾರ್ಡ್‌ಗಳ ವಿತರಣೆ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೯೪ (೨೬೬೬) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಮಕೂರು ಜಿಲ್ಲೆಯಾದ್ಯಂತ ೨೦೧೫–೧೬ನೇ ಸಾಲಿನಲ್ಲಿ ಬಡವರ್ಗದವರಿಂದ ಬಿ.ಪಿ.ಎಲ್ ಕಾರ್ಡಿಗೋಸ್ಕರ ಬಂದ ಅರ್ಜಿಗಳ ಸಂಖ್ಯೆ ಎಷ್ಟು ;

(ಆ) ಬಂದ ಅರ್ಜಿಗಳಲ್ಲಿ ಎಷ್ಟು ಜನರಿಗೆ ಬಿ.ಪಿ.ಎಲ್ ಕಾರ್ಡ್‌ಗಳನ್ನು ವಿತರಿಸಲಾಗಿದೆ ; ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು ; ಸದರಿ ಅರ್ಜಿದಾರರಿಗೆ ವಿತರಿಸದಿರಲು ಕಾರಣವೇನು ; (ವಿವರ ನೀಡುವುದು)

(ಇ) ಬಡ ವರ್ಗದವರಿಂದ ಅರ್ಜಿ ಪಡೆದ ಎಷ್ಟು ದಿವಸಗಳಲ್ಲಿ ಬಿ.ಪಿ.ಎಲ್ ಕಾರ್ಡ್ ನೀಡಬೇಕೆಂದು ನಿಯಮ ರೂಪಿಸಿ, ಸಮಯವನ್ನು ನಿಗಧಿ ಮಾಡಲಾಗಿದೆ ; ಈ ನಿಯಮವನ್ನು ಚಾಚು ತಪ್ಪದೆ ಪಾಲಿಸಲಾಗುತ್ತಿದೆಯೇ ; (ವಿವರ ನೀಡುವುದು)

(ಈ) ಹಾಗೆಯೇ ೨೦೧೬–೧೭ನೇ ಸಾಲಿನಲ್ಲಿ ಬಿ.ಪಿ.ಎಲ್ ಕಾರ್ಡ್ ಅನ್ನು ಪಡೆಯಲು ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು; ಬಂದಿರುವ ಅರ್ಜಿಗಳಲ್ಲಿ ಇದುವರೆವಿಗೂ ನೀಡಿರುವ ಬಿ.ಪಿ.ಎಲ್ ಕಾರ್ಡ್‌ಗಳ ಸಂಖ್ಯೆ ಎಷ್ಟು ;

(ಉ) ಉಳಿದ ಅರ್ಜಿದಾರರಿಗೆ ಹಾಗೂ ಒಟ್ಟಾರೆಯಾಗಿ ಬಾಕಿ ಇರುವ ಅರ್ಜಿದಾರರಿಗೆ ಎಷ್ಟು ದಿವಸಗಳಲ್ಲಿ ಬಿ.ಪಿ.ಎಲ್ ಕಾರ್ಡ್‌ನ್ನು ವಿತರಿಸಲಾಗುವುದು ? (ತಾಲ್ಲೂಕುವಾರು ವಿವರಣೆ ನೀಡುವುದು)

## ಶಿಶು ಅಭಿವೃದ್ಧಿ ಇಲಾಖೆ ಅಡಿ ಬರುವ ಎಮ್.ಎಸ್.ಪಿ.ಟಿ.ಸಿ ಸಂಸ್ಥೆಯಲ್ಲಿ ಆಹಾರ ಪೂರೈಕೆಯಲ್ಲಿ ಆಗಿರುವ ಅವ್ಯವಹಾರಗಳ ಬಗ್ಗೆ

**ಶ್ರೀ ಘೋಟ್ನೇಕರ ಶ್ರೀಕಾಂತ್ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೯೫ (೨೬೫೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯ ಕುಮಟಾ, ಹೊನ್ನಾವರ, ಅಂಕೋಲಾ, ಕಾರವಾರ, ಯಲ್ಲಾಪುರ ಶಿಶು ಅಭಿವೃದ್ಧಿ ಅಧಿಕಾರಿಗಳು ತಮ್ಮ ಅಧೀನದಲ್ಲಿರುವ ಎಮ್.ಎಸ್.ಪಿ.ಟಿ.ಸಿ. (ಸಂಸ್ಥೆ) ಗಳಿಗೆ ಆಹಾರ ಪೂರೈಕೆ ಮಾಡಲು ಯಾರಿಗೆ ಟೆಂಡರ್ ನೀಡಿರುತ್ತಾರೆ ; ಅವರು ೨೦೧೪–೧೫ನೇ ಸಾಲಿನಿಂದ ಇಲ್ಲಿಯವರೆಗೆ ಆಹಾರ ಪೂರೈಕೆ ಮಾಡಿದ ವಿವರ ಅವರು ನೀಡಿದ ಬೇಡಿಕೆ ಪತ್ರ ಹಾಗೂ ಇದಕ್ಕೆ ಎಮ್.ಎಸ್.ಪಿ.ಟಿ.ಸಿ.(ಸಂಸ್ಥೆ) ಆಹಾರ ಪೂರೈಕೆ ಮಾಡಿದ ವಿವರ ಹಾಗೂ ಪ್ರತಿ ತಾಲ್ಲೂಕಿನ ಅಂಗನವಾಡಿಗಳಿಗೆ ಶಿಶು ಅಭಿವೃದ್ಧಿ ಅಧಿಕಾರಿಗಳಿಂದ ಆಹಾರ ಪೂರೈಕೆಯಾದ ವಿವರ ನೀಡುವುದು; (ತಾಲ್ಲೂಕುವಾರು, ತಿಂಗಳವಾರು ವಿವರ ನೀಡುವುದು)

(ಆ) ಸದರಿ ಎಮ್.ಎಸ್.ಪಿ.ಟಿ.ಸಿ. ಯಲ್ಲಿ ಕೆಲಸ ನಿರ್ವಹಿಸುತ್ತಿರುವವರು ಯಾರು ಯಾರು ; (ಹೆಸರು, ಮತ್ತು ವಿವರದೊಂದಿಗೆ ಮಾಹಿತಿ ನೀಡುವುದು)

(ಇ) ಸದರಿ ಸಂಸ್ಥೆಯಲ್ಲಿ ಪಿ.ಎಫ್ ಆಗಿ ಕರ್ತವ್ಯ ನಿರ್ವಹಿಸುತ್ತಿರುವವರು ಯಾರು ಯಾರು ? (ವಿವರ ನೀಡುವುದು)

## ಕುಣಬಿ ಜನಾಂಗದವರನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸುವ ಬಗ್ಗೆ

**ಶ್ರೀ ಘೋಟ್ನೇಕರ ಶ್ರೀಕಾಂತ್ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೯೬ (೨೬೪೯) (೨೬೫೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ಉತ್ತರ ಕನ್ನಡ ಜಿಲ್ಲೆಯ ದಟ್ಟ ಕಾಡುಗಳಲ್ಲಿ ವಾಸಿಸುವ ಕುಣಬಿ ಜನಾಂಗ ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಆರ್ಥಿಕವಾಗಿ ಮತ್ತು ರಾಜಕೀಯವಾಗಿ ಅತ್ಯಂತ ಹಿಂದುಳಿದವರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ತನ್ನದೇ ಆದ ಸಂಸ್ಕೃತಿ ಹೊಂದಿದವರಾಗಿದ್ದು, ಬುಡಕಟ್ಟು ಸಂಸ್ಕೃತಿಯ ಎಲ್ಲಾ ಗುಣ ಲಕ್ಷಣಗಳನ್ನು ಹೊಂದಿದ್ದು, ಕಳೆದ ಹಲವಾರು ವರ್ಷಗಳಿಂದ ಕುಣಬಿ ಸಮಾಜ ಪರಿಶಿಷ್ಟ ಪಂಗಡಕ್ಕೆ ಸೇರಿಸಲು ಒತ್ತಾಯಿಸುತ್ತಾ ಬಂದರು ಯಾವುದೇ ಪ್ರಯೋಜನವಾಗಿಲ್ಲದಿರುವುದು ನಿಜವೇ; ಈ ಕುರಿತು ಈ ಹಿಂದಿನ ಅಧಿವೇಶನದಲ್ಲಿ ದಿನಾಂಕ: ೨೧.೦೭.೨೦೧೪ ರಂದು ಉತ್ತರ ನೀಡಿದ್ದು ಅದರಲ್ಲಿ ಸರ್ಕಾರಿ ಆದೇಶ ಸಂಖ್ಯೆ ಸಕಿ: ೧೮೫:ಎಸ್ ಡಿ: ೨೦೧೨ ದಿ:೨೨/೦೫/೨೦೧೪ ರಲ್ಲಿ ಕುಣಬಿ ಜನಾಂಗದ ಕುಲಶಾಸ್ತ್ರೀಯ ಅಧ್ಯಯನವನ್ನು ಕುಲಸಚಿವರು, ಮೈಸೂರು ವಿಶ್ವವಿದ್ಯಾಲಯ, ಮೈಸೂರು, ಇವರಿಂದ ಕೈಗೊಳ್ಳಲು ಆದೇಶಿಸಿದ್ದ, ಕುಲಶಾಸ್ತ್ರೀಯ ಅಧ್ಯಯನ ವರದಿಯು ಸರ್ಕಾರದಲ್ಲಿ ಸ್ವೀಕೃತವಾದ ನಂತರ ಪರಿಶೀಲಿಸುವುದಾಗಿ ತಿಳಿಸಿದ್ದು, ವರದಿ ಸ್ವೀಕೃತವಾಗಿದೆಯೇ ? (ವಿವರ ನೀಡುವುದು)

## ವೃದ್ಯಾಪ್ಯ ವೇತನ, ಅಂಗವಿಕಲಚೇತನ, ವಿಧವೆ ಮನಸ್ವಿ ಇನ್ನಿತರ ಯೋಜನೆಗೆ ಪಿಂಚಣಿ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮ ನಿರ್ದೇಶನ ಹೊಂದಿದವರು) :–**

೨೪೯೭ (೨೭೫೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರತಿಯೊಬ್ಬ ವಿಕಲಚೇತನರ ಮತ್ತು ಬುದ್ಧಿಮಾಂದ್ಯ, ಅಂಗವಿಕಲ ಶಾಲಾ ಮಕ್ಕಳಿಗೆ ನೀಡುವ ಅನುದಾನ ಎಷ್ಟು ;

(ಆ) ರಾಜ್ಯದಲ್ಲಿ ಅಂಗವಿಕಲ ಮತ್ತು ಬುದ್ಧಿಮಾಂದ್ಯ, ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

## ೨೦೧೫–೧೬ ಮತ್ತು ೨೦೧೬–೧೭ರಲ್ಲಿ ಮಲೆನಾಡು ಅಭಿವೃದ್ಧಿ ಮಂಡಳಿಗೆ ಬಿಡುಗಡೆ ಮಾಡಿದ ಅನುದಾನ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮ ನಿರ್ದೇಶನ ಹೊಂದಿದವರು) :–**

೨೪೯೮ (೨೭೬೩) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೧೬ ಮತ್ತು ೨೦೧೬–೧೭ರಲ್ಲಿ ಮಲೆನಾಡು ಅಭಿವೃದ್ಧಿ ಮಂಡಳಿಗೆ ಬಿಡುಗಡೆ ಮಾಡಿದ ಅನುದಾನ ಎಷ್ಟು ; ಯಾವ ಯಾವ ಕ್ಷೇತ್ರಗಳಿಗೆ ಅನುದಾನವನ್ನು ನೀಡಲಾಗಿದೆ ; ಸದಸ್ಯರೊಬ್ಬರಿಗೆ ಎಷ್ಟು ಅನುದಾನ ನೀಡಲಾಗಿದೆ ; (ಕ್ಷೇತ್ರವಾರು ವಿವರ ನೀಡುವುದು)

(ಆ) ಮಲೆನಾಡು ಅಭಿವೃದ್ಧಿ ಮಂಡಳಿ ವ್ಯಾಪ್ತಿಯಲ್ಲಿ ಬರುವ ವಿಧಾನ ಪರಿಷತ್ ಸದಸ್ಯರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ನಾಮನಿರ್ದೇಶನ ಹೊಂದಿದ ವಿಧಾನ ಪರಿಷತ್ ಸದಸ್ಯರು ತಮ್ಮ ಕೆಲಸಕ್ಕೆ ಕ್ಷೇತ್ರ ಆಯ್ಕೆ ಮಾಡುವುದರ ಜೊತೆಗೆ ನೋಡಲ್ ಜಿಲ್ಲೆಯಾಗಿ ಆಯ್ಕೆ ಮಾಡಿರುವುದರಿಂದ ನಾಮನಿರ್ದೇಶಿತ ಸದಸ್ಯರಿಗೆ ಸಭೆಗೆ ಆಹ್ವಾನ ನೀಡದೇ ಅನುದಾನ ನೀಡದೇ ಇರಲು ಕಾರಣವೇನು ; (ವಿವರ ನೀಡುವುದು)

(ಈ) ನಾಮನಿರ್ದೇಶನ ಹೊಂದಿದ ಸದಸ್ಯರು ವಿಧಾನ ಪರಿಷತ್ ಸದಸ್ಯರು ಅಲ್ಲವೆ; ವಿವರ ನೀಡುವುದು ಈ ಬಗ್ಗೆ ಮಲೆನಾಡು ಅಭಿವೃದ್ಧಿ ಮಂಡಳಿಯಿಂದ ಸ್ಪಷ್ಟನೆ ಕೇಳಿ ಸರ್ಕಾರಕ್ಕೆ ಪತ್ರ ಬಂದಿದ್ದು ಈ ಬಗ್ಗೆ ಸರ್ಕಾರ ಕೈಗೊಂಡ ನಿರ್ಧಾರವೇನು ?

## ರಾಜ್ಯದಲ್ಲಿರುವ ಒಟ್ಟು ಬಿ.ಪಿ.ಎಲ್ ಮತ್ತು ಎ.ಪಿ.ಎಲ್ ಅಂತ್ಯೋದಯ ಕಾರ್ಡ್‌ದಾರರ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮ ನಿರ್ದೇಶನ ಹೊಂದಿದವರು) :–**

೨೪೯ (೨೭೫೫) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಒಟ್ಟು ಕುಟುಂಬಗಳ ಸಂಖ್ಯೆ ಎಷ್ಟು ; ಅದರಲ್ಲಿ ಬಿ.ಪಿ.ಎಲ್ ಎ.ಪಿ.ಎಲ್ ಕಾರ್ಡ್ ಅಂತ್ಯೋದಯ ಕಾರ್ಡ್‌ದಾರರು ಎಷ್ಟು ; (ವಿವರ ನೀಡುವುದು)

(ಆ) ೨೦೧೪–೧೫ ಮತ್ತು ೨೦೧೫–೧೬ ರಲ್ಲಿ ರಾಜ್ಯಾದಾದ್ಯಂತ ರದ್ದುಪಡಿಸಿದ ಬಿ.ಪಿ.ಎಲ್ ಕಾರ್ಡ್‌ದಾರರ ಸಂಖ್ಯೆ ಎಷ್ಟು ;

(ಇ) ಬಿ.ಪಿ.ಎಲ್ ಕಾರ್ಡ್‌ದಾರರಿಗೆ ವಿದ್ಯುಚ್ಛಕ್ತಿ ಬಿಲ್ಲುಗಳನ್ನು ಏರಿಕೆ ಮಾಡಬೇಕೆಂಬ ಪ್ರಸ್ತಾವನೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಈ) ಬಿ.ಪಿ.ಎಲ್ ಕಾರ್ಡ್‌ದಾರರಿಗೆ ನೀಡುವ ಅನ್ನಭಾಗ್ಯ ಯೋಜನೆಯಲ್ಲಿ ಕೆ.ಜಿ.ಯೊಂದಕ್ಕೆ ತಗಲುವ ವೆಚ್ಚ ಎಷ್ಟು ; ತಿಂಗಳೊಂದಕ್ಕೆ ರಾಜ್ಯ ಸರ್ಕಾರ ಅನ್ನಭಾಗ್ಯ ಯೋಜನೆಗೆ ಖರ್ಚು ಮಾಡುವ ಅನುದಾನ ಎಷ್ಟು ; (ವಿವರ ನೀಡುವುದು)

(ಉ) ರಾಜ್ಯದಲ್ಲಿ ಇಲಾಖೆ ವತಿಯಿಂದ ಕ್ಯಾಂಟೀನ್ ವ್ಯವಸ್ಥೆಯನ್ನು ಜಾರಿಗೆ ತರುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದರೆ ವಿವರ ನೀಡುವುದು?

## ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಆಸ್ಪತ್ರೆಗಳಲ್ಲಿ ಖಾಲಿ ಇರುವ ವೈದ್ಯರ ಸಂಖ್ಯೆ

**ಶ್ರೀ ಐವನ್ ಡಿ' ಸೋಜಾ (ನಾಮ ನಿರ್ದೇಶನ ಹೊಂದಿದವರು) :–**

೨೫೦೦ (೨೭೫೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಆಸ್ಪತ್ರೆಗಳಲ್ಲಿ ಖಾಲಿ ಇರುವ ವೈದ್ಯರುಗಳ ಸಂಖ್ಯೆ ಎಷ್ಟು ; ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ವೈದ್ಯರುಗಳ ನೇಮಕಕ್ಕೆ ಇರುವ ಮಾನದಂಡಗಳೇನು ;

(ಇ) ಆರೋಗ್ಯ ಕೇಂದ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಆಯುರ್ವೇದಿಕ್ ವೈದ್ಯರಿಗೆ ನೀಡುವ ಸಂಬಳ ಎಷ್ಟು ; ಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ವೈದ್ಯರುಗಳನ್ನು ಖಾಯಂಗೊಳಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ; (ವಿವರ ನೀಡುವುದು)

(ಈ) ಆರೋಗ್ಯ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ನರ್ಸ್‌ಗಳ ಸಂಖ್ಯೆ ಎಷ್ಟು ; ಖಾಲಿ ಇರುವ ನರ್ಸ್‌ಗಳ ಹುದ್ದೆ ಎಷ್ಟು ; ಭರ್ತಿ ಮಾಡಲು ಕೈಗೊಂಡ ಕ್ರಮವೇನು ; (ವಿವರ ನೀಡುವುದು)

(ಉ) ೨೦೧೪-೧೫ ಮತ್ತು ೨೦೧೫-೧೬ನೇ ಸಾಲಿನಲ್ಲಿ ಆರೋಗ್ಯ ಇಲಾಖೆಯಲ್ಲಿ ಕೈಗೊಂಡ ಯೋಜನೆಗಳಾವುವು ; ಅವುಗಳ ಅನುಷ್ಠಾನಕ್ಕೆ ಇಲಾಖೆ ಕೈಗೊಂಡ ಕ್ರಮಗಳೇನು ; ಈ ಯೋಜನೆಗಳ ಫಲಾನುಭವಿಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

## ವಿದೇಶದಲ್ಲಿರುವ ಉದ್ದಿಮೆದಾರರಿಗೆ (NRI'S) ಬಂಡವಾಳ ಹಣ ಹೂಡುವ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು):-**

೨೫೦೧ (೨೭೫೩) ಮಾನ್ಯ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ವಿದೇಶದಲ್ಲಿರುವ ಉದ್ದಿಮೆದಾರರಿಗೆ (NRI'S) ಪ್ರವಾಸೋದ್ಯಮದಲ್ಲಿ ಬಂಡವಾಳ ಹೂಡಲು ಪ್ರವಾಸೋದ್ಯಮ ಇಲಾಖೆ ಕೈಗೊಂಡ ಕ್ರಮಗಳೇನು ;

(ಆ) ಪ್ರವಾಸೋದ್ಯಮ ಪ್ರೋತ್ಸಾಹಿಸಲು 'ವಿದೇಶದಿಂದ' ಕರ್ನಾಟಕದಲ್ಲಿ ಬಂಡವಾಳ ಹೂಡಲು ಸಮಗ್ರ ನೀತಿಯೊಂದನ್ನು ಜಾರಿಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಇ) ೨೦೧೫-೧೬ಮತ್ತು ೨೦೧೬-೧೭ರಲ್ಲಿ ಪ್ರವಾಸೋದ್ಯಮ ಪ್ರೋತ್ಸಾಹಿಸಲು ಮತ್ತು ಪ್ರವಾಸಿಗರಿಗೆ ಮೂಲ ಸವಲತ್ತುಗಳನ್ನು ಒದಗಿಸಲು ಸರ್ಕಾರ ಕೈಗೊಂಡ ಕಾರ್ಯಕ್ರಮಗಳೇನು ;

(ಈ) ೨೦೧೬-೧೭ರಲ್ಲಿ ಪ್ರವಾಸಿಗರನ್ನು ಆಕರ್ಷಿಸಲು ಸರ್ಕಾರದ ಮುಂದಿರುವ ವಿಶೇಷ ಯೋಜನೆಗಳಾವುವು? (ವಿವರ ನೀಡುವುದು)

## ಪ್ರವಾಸೋದ್ಯಮ ತಾಣಗಳನ್ನು ಗುರುತಿಸುವ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು):–**

೨೫೦೨ (೨೬೭೩) ಮಾನ್ಯ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿತ್ರದುರ್ಗ ಜಿಲ್ಲೆ ಮೊಳಕಾಲ್ಮೂರು ತಾಲ್ಲೂಕಿನಲ್ಲಿ ಹಾಗೂ ವಿಧಾನ ಸಭಾ ಕ್ಷೇತ್ರದಲ್ಲಿ ಇರುವ ಪ್ರವಾಸೋದ್ಯಮ ತಾಣಗಳ ಸಂಖ್ಯೆ ಎಷ್ಟು ;

(ಆ) ಈ ಭಾಗದ ಪ್ರವಾಸೋದ್ಯಮ ತಾಣಗಳನ್ನು ಅಭಿವೃದ್ಧಿಪಡಿಸಲು ಸರ್ಕಾರ ಈವರೆಗೆ ಕೈಗೊಂಡಿರುವ ಕ್ರಮಗಳೇನು ?

## ಗಡಿ ಅಭಿವೃದ್ಧಿ ಪ್ರಾಧಿಕಾರದಿಂದ ಅನುದಾನ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು):–**

೨೫೦೩ (೨೬೭೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗಡಿ ಅಭಿವೃದ್ಧಿ ಪ್ರಾಧಿಕಾರದಿಂದ ಅನುದಾನ ಪಡೆಯಲು ಇರುವ ಮಾನದಂಡಗಳೇನು ;

(ಆ) ಕರ್ನಾಟಕ ರಾಜ್ಯದಾದ್ಯಂತ ೨೦೧೫–೧೬ನೇ ಸಾಲಿನಲ್ಲಿ ವಿಧಾನಸಭಾವಾರು ನೀಡಲಾದ ಅನುದಾನ ಎಷ್ಟು;

(ಇ) ೨೦೧೫–೧೬ನೇ ಸಾಲಿನಲ್ಲಿ ಯಾವ ಯಾವ ಕಾಮಗಾರಿಗಳಿಗೆ ಎಷ್ಟೆಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಈ) ಈಗಾಗಲೇ ನೀಡಲಾದ ಅನುದಾನದಲ್ಲಿ ಎಷ್ಟು ಕಾಮಗಾರಿಗಳು ಪೂರ್ಣಗೊಂಡಿವೆ? (ವಿವರ ನೀಡುವುದು)

# ಆರೋಗ್ಯ ಇಲಾಖೆಯಲ್ಲಿನ ಆಹಾರ ಸುರಕ್ಷತಾ ವಿಭಾಗದಲ್ಲಿ ಅಂಕಿತಾಧಿಕಾರಿಗಳ ನೇಮಕದ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೫೦೪ (೨೭೨೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆರೋಗ್ಯ ಇಲಾಖೆಯಲ್ಲಿನ ಆಹಾರ ಸುರಕ್ಷತಾ ವಿಭಾಗದಲ್ಲಿ ನಿಯಮಾವಳಿಗಳು ಹಾಗೂ ಕಾನೂನಿಗೆ ವಿರುದ್ಧವಾಗಿ ೧೮ ಮಂದಿ ಕೀಟ ಶಾಸ್ತ್ರಜ್ಞರು, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳು, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳು ಹಾಗೂ ಇನ್ನಿತರರನ್ನು ಅಂಕಿತಾಧಿಕಾರಿಗಳನ್ನಾಗಿ/ ಆಹಾರ ಸುರಕ್ಷತಾ ಅಧಿಕಾರಿಗಳನ್ನಾಗಿ ನೇಮಕ ಮಾಡುವ ಪ್ರಸ್ತಾವನೆಯನ್ನು ತಿರಸ್ಕರಿಸಲಾಗುವುದೆ; (ವಿವರ ಒದಗಿಸುವುದು)

(ಆ) ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ ನೂರಾರು ಮಂದಿ ಎಂಎಸ್ಸಿ ಪದವಿಯನ್ನು ಹೊಂದಿರುವವರು ಅಂಕಿತಾಧಿಕಾರಿಗಳ /ಆಹಾರ ಸುರಕ್ಷೆ ಅಧಿಕಾರಿಗಳ ನೇಮಕಾತಿ ಕೋರಿ ಮನವಿ ಸಲ್ಲಿಸಿದ್ದರೂ ಕೇವಲ ಈ ೧೮ ಮಂದಿಯನ್ನು ಯಾವ ಮಾನದಂಡದಡಿಯಲ್ಲಿ, ಯಾವ ನಿಯಮಾವಳಿಗಳನ್ವಯ ನೇಮಕಾತಿ ಮಾಡಲಾಗುವುದು ;

(ಇ) ಈ ನೇಮಕಾತಿ ಪ್ರಸ್ತಾವನೆಯಲ್ಲಿ ಪಾರದರ್ಶಕ ಕೊರತೆ ಕಂಡು ಬಂದಿದ್ದು, ಅಕ್ರಮ ಅವ್ಯವಹಾರಗಳು ನಡೆದಿರುವ ಸಾಧ್ಯತೆ ಇರುವುದರಿಂದ ಉನ್ನತ ಮಟ್ಟದ ತನಿಖೆ ನಡೆಸಿ ಹಗರಣಕ್ಕೆ ಕಾರಣರಾದ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗುವುದು ;

(ಈ) ಅಂಕಿತ ಅಧಿಕಾರಿಗಳಾಗಿ ಮುಂದುವರಿಸುವ ಸಂಬಂಧ ಹಾಲಿ ಪ್ರಭಾರ ಅಂಕಿತ ಆಧಿಕಾರಿಗಳು ಸಲ್ಲಿಸಿರುವ ಮನವಿಗಳಲ್ಲಿನ ಪ್ರತಿಯೊಂದು ಅಂಶಗಳನ್ನು ಪರಿಶೀಲಿಸಿ ಸದರಿಯವರನ್ನು ವೃಂದ ಮತ್ತು ನೇಮಕಾತಿ ನಿಯಮಗಳ ರಚನೆ ಪ್ರಕ್ರಿಯೆಯೂ ಪೂರ್ಣಗೊಳ್ಳುವವರೆಗೆ ಮುಂದುವರಿಸಲು ಸರ್ಕಾರಕ್ಕಿರುವ ತೊಂದರೆ ಏನು?

## ಕುಂದಾಪುರ ತಾಲ್ಲೂಕು ಬಬ್ಬುಕುದ್ರು ಪ್ರವಾಸಿತಾಣದ ತೂಗು ಸೇತುವೆ ನಿರ್ಮಾಣದ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೦೫ (೨೭೫೬) ಮಾನ್ಯ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಜಿಲ್ಲೆ ಕುಂದಾಪುರ ತಾಲ್ಲೂಕಿನ 'ಬಬ್ಬುಕುದ್ರು' ಸೇತುವೆ ನಿರ್ಮಾಣದ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಕುಂದಾಪುರ ತಾಲ್ಲೂಕಿನ ಪ್ರವಾಸಿ ತಾಣ "ಬಬ್ಬುಕುದ್ರು" ದ್ವೀಪಕ್ಕೆ ಸೇತುವೆ ನಿರ್ಮಾಣದ ಬಗ್ಗೆ ಜಿಲ್ಲಾಡಳಿತದಿಂದ ಪ್ರಸ್ತಾವನೆ ಯೋಜನಾ ವರದಿ ಸಲ್ಲಿಕೆಯಾಗಿದೆಯೇ; ಸದರಿ ಪ್ರಸ್ತಾವನೆ ಯಾವ ಹಂತದಲ್ಲಿದೆ ;

(ಇ) ಉಡುಪಿ ಜಿಲ್ಲೆಯ ಕುಂದಾಪುರ ಬಬ್ಬುಕುದ್ರವಿಗೆ ಸಂಪರ್ಕ ಕಲ್ಪಿಸುವ ತೂಗು ಸೇತುವೆ ನಿರ್ಮಾಣದಿಂದ ಪ್ರವಾಸೋದ್ಯಮ ಅಭಿವೃದ್ಧಿಗೆ ಪೂರಕ ಅವಕಾಶ ಕಲ್ಪಿಸುವ ಬಗ್ಗೆ ಸರ್ಕಾರದ ನಿಲುವೇನು ;

(ಈ) ಈ ಬಗ್ಗೆ ಸರ್ಕಾರ ಯಾವ ಹಂತದಲ್ಲಿ ಯಾವ ಕ್ರಮ ಕೈಗೊಳ್ಳಲಿದೆ ?

## H1N1, ಡೆಂಗ್ಯೂ, ಚಿಕನ್‌ಗುನ್ಯ, ಸಾಂಕ್ರಾಮಿಕ ರೋಗ ಹೆಚ್ಚಳವಾಗಿರುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೦೬ (೨೭೫೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಈ ವರ್ಷ ರಾಜ್ಯದಲ್ಲಿ ಪತ್ತೆಯಾದ H1N1(ಹಂದಿಜ್ವರ), ಡೆಂಗ್ಯೂ, ಚಿಕನ್‌ಗುನ್ಯ, ಮಲೇರಿಯಾ ಜ್ವರದ ಪ್ರಕರಣಗಳೆಷ್ಟು; (ಜಿಲ್ಲಾವಾರು ವಿವರದೊಂದಿಗೆ ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯ ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ಕಳೆದ ವರ್ಷಕ್ಕಿಂತ ಈ ಬಾರಿ ಪ್ರಕರಣಗಳು ಹೆಚ್ಚಾಗಿರುವುದರಿಂದ ಸರ್ಕಾರ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳದೇ ವಿಫಲವಾಗಿದೆ ಎಂದು ಅನ್ನಿಸುವುದಿಲ್ಲವೇ ;

(ಇ) ಡೆಂಗ್ಯೂ, ಚಿಕನ್ನಗುನ್ಯ, ಮತ್ತು ಮಲೇರಿಯಾ ತಡೆಗಟ್ಟಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; (ಸಂಪೂರ್ಣ ವಿವರ ಒದಗಿಸುವುದು) ರಾಷ್ಟ್ರೀಯ ಆರೋಗ್ಯ ಮಿಷನ್ ಯೋಜನೆಯಡಿ ಸದರಿ ಉದ್ದೇಶಕ್ಕಾಗಿ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ; (ವಿವರ ಒದಗಿಸುವುದು)

(ಈ) H1N1ಪ್ರಕರಣಗಳಲ್ಲಿ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುವ ರೋಗಿಗಳ ವೈದ್ಯಕೀಯ ವೆಚ್ಚ ಮರುಪಾವತಿ ಬಗ್ಗೆ ಸರ್ಕಾರದ ನಿಲುವೇನು; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ಆರೋಗ್ಯ ಇಲಾಖೆಯಲ್ಲಿ ಆಹಾರ ಸುರಕ್ಷಿತಾ ಕಾಯ್ದೆ ಅನುಷ್ಠಾನ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೦೭ (೨೬೭೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆರೋಗ್ಯ ಇಲಾಖೆಯಲ್ಲಿನ ಆಹಾರ ಸಂರಕ್ಷತಾ ಕಾಯಿದೆ ಅನ್ವಯ ನಿಯಮಗಳಡಿಯಲ್ಲಿ ಅವಕಾಶ ಇಲ್ಲದಾಗ್ಯೂ ಕೀಟ ಶಾಸ್ತ್ರಜ್ಞರು, ಜಿಲ್ಲಾ ಮತ್ತು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳು ಸೇರಿದಂತೆ ಇನ್ನಿತರರನ್ನು ಅಂಕಿತ ಅಧಿಕಾರಿ ಹುದ್ದೆಗಳಿಗೆ ನೇಮಕ ಮಾಡಲಾಗಿದೆಯೇ ;

(ಆ) ಯಾವ ನಿಯಮಾವಳಿ, ಯಾವ ಮಾನದಂಡ ಹಾಗೂ ಹೇಗೆ ನೇಮಕಾತಿ ಪ್ರಕ್ರಿಯೆ ಮಾಡಲಾಗಿದೆ; (ವಿವರ ನೀಡುವುದು)

(ಇ) M.Sc. ಪದವೀಧರರು, ಇಲಾಖೆಯಲ್ಲಿ ಸೇವಾನಿರತ ನೂರಾರು ಮಂದಿ ಅರ್ಜಿ ಸಲ್ಲಿಸಿದ್ದು, ಕೇವಲ ೧೮ ಮಂದಿಯನ್ನು ಯಾವ ಆಧಾರದ ಮೇಲೆ ಆಯ್ಕೆ ಮಾಡಲಾಗಿದೆ, ಈ ಸಂಬಂಧ ಯಾವ–ಯಾವ ದೂರುಗಳು ಬಂದಿವೆ, ಈ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಈ) ವೃಂದ ಮತ್ತು ನೇಮಕಾತಿ ನಿಯುಮಾವಳಿ ರಚನೆ ಅಂತಿಮವಾಗುವವರೆಗೆ ಈ ಮೊದಲಿನಂತೆ ಆಹಾರ ಸುರಕ್ಷತಾ ಅಧಿಕಾರಿಗಳನ್ನೇ ಅಂಕಿತ ಅಧಿಕಾರಿಗಳ ಹೆಚ್ಚುವರಿ ಪ್ರಭಾರದಲ್ಲಿ ಮುಂದುವರಿಸುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ; ಸರ್ಕಾರದ ನಿಲುವನ್ನು ಸ್ಪಷ್ಟಪಡಿಸುವುದು?

## ರಾಜ್ಯದ ಮೆಡಿಕಲ್ ಕಾಲೇಜುಗಳಲ್ಲಿ ಲಭ್ಯವಿರುವ ಪ್ರವೇಶಾತಿ ಕುರಿತು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೨೫೦೮ (೨೬೮೨) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಮೆಡಿಕಲ್ ಕಾಲೇಜುಗಳಲ್ಲಿ ಲಭ್ಯವಿರುವ ಪ್ರವೇಶಾತಿ ಸಂಖ್ಯೆ ಎಷ್ಟು; (ಖಾಸಗಿ ಹಾಗೂ ಸರ್ಕಾರಿ ಕಾಲೇಜುಗಳವಾರು ವಿವರವನ್ನು ನೀಡುವುದು)

(ಆ) ಮುಂಬರುವ ವರ್ಷದಿಂದ ಸರ್ಕಾರಿ ಮತ್ತು ಖಾಸಗಿ ಮೆಡಿಕಲ್ ಕಾಲೇಜುಗಳಲ್ಲಿ ಪ್ರವೇಶಾತಿಗಾಗಿ ಕೇಂದ್ರ ಸರ್ಕಾರವು NEET ಪರೀಕ್ಷೆ ನಡೆಸುವ ಕುರಿತು ಸರ್ಕಾರದ ಅಭಿಪ್ರಾಯವೇನು ?

## ಸಬಲ ಕಾರ್ಯಕ್ರಮದ ಅನುಷ್ಠಾನ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೨೫೮೯ (೨೬೮೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೇಂದ್ರ ಸರ್ಕಾರದ ಯೋಜನೆಯಾದ ಸಬಲ ಕಾರ್ಯಕ್ರಮವನ್ನು ರಾಜ್ಯ ಸರ್ಕಾರವು ಅನುಷ್ಠಾನಗೊಳಿಸುತ್ತಿದೆಯೇ ;

(ಆ) ಸಖಿ ಸಹೇಲಿ ತರಬೇತಿ ನೀಡಲು ದಿನವೊಂದಕ್ಕೆ ಎಷ್ಟು ಹಣವನ್ನು ಖರ್ಚು ಮಾಡಲಾಗುತ್ತದೆ ;

(ಇ) ಈ ಹಂತದಲ್ಲಿ "ಸಖಿ ಸಹೇಲಿ" ಅವರ ಊಟ, ಸಾರಿಗೆ, ತರಬೇತಿ ಸಲಕರಣೆಗಳು, ಸಂಪನ್ಮೂಲ ಹಾಗೂ ವ್ಯಕ್ತಿಯ (Trainer) ಗೌರವ ಧನ ಒಳಗೊಂಡಿದ್ದು, ಈ ಹಣ ತೀರ ಕಡಿಮೆಯಾಗಿದ್ದು, ಇದರಿಂದ ಈ ಯೋಜನೆಯು ಸಂಪೂರ್ಣ ಕಾರ್ಯಗತಗೊಳ್ಳುವುದು ಕಷ್ಟಸಾಧ್ಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ರಾಜ್ಯದಲ್ಲಿ ಕೇಂದ್ರ ಸರ್ಕಾರದ "ಜನೌಷಧಿ" ಯೋಜನೆ ಅನುಷ್ಠಾನ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೨೫೧೦ (೨೬೮೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೇಂದ್ರ ಸರ್ಕಾರದ "ಜನೌಷಧಿ" ಯೋಜನೆಯನ್ವಯ ಎಷ್ಟು ಔಷಧಿ ಮಳಿಗೆಗಳನ್ನು ತೆರೆಯಲಾಗಿದೆ ;

(ಆ) ಈ ಯೋಜನೆಯ ರೂಪು–ರೇಷೆಗಳೇನು; (ವಿವರ ನೀಡುವುದು)

(ಇ) ಈ ಯೋಜನೆಗಾಗಿ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಹಣವೆಷ್ಟು ?

## ಸಮಾಜ ಕಲ್ಯಾಣ ಇಲಾಖೆಯ ವಸತಿ ಶಾಲೆಗಳ ಸೌಲಭ್ಯದ ಕುರಿತು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೨೫೧೧ (೨೬೮೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯವಾರು ಸಮಾಜ ಕಲ್ಯಾಣ ಇಲಾಖೆ ಅಧೀನದಲ್ಲಿರುವ ವಸತಿ ಶಾಲೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು, ಶಾಲಾವಾರು, ವಿದ್ಯಾರ್ಥಿಗಳ ಸಂಖ್ಯೆ, ಶಾಲೆಯ ಕಟ್ಟಡ, ವಸತಿ ಗೃಹ ಲಭ್ಯತೆ ಸ್ವಂತ ಅಥವಾ ಬಾಡಿಗೆ ಕಟ್ಟಡ, ಶಿಕ್ಷಕರ ಸಂಖ್ಯೆ ಹಾಗೂ ಹೊರಗುತ್ತಿಗೆ ಶಿಕ್ಷಕರ ಸಂಖ್ಯೆಯನ್ನು ಒಳಗೊಂಡಂತೆ ವಿವರ ನೀಡುವುದು)

(ಆ) ಈ ಶಾಲೆಗಳನ್ನು ಪ್ರಾರಂಭಿಸಿ ಅನೇಕ ವರ್ಷಗಳಾಗಿದ್ದರೂ, ಪೂರ್ಣ ಪ್ರಮಾಣದ ಸೌಲಭ್ಯವನ್ನು ಒದಗಿಸುವಲ್ಲಿ ಆಗಿರುವ ವೈಫಲ್ಯತೆಗೆ ಕಾರಣಗಳೇನು;

(ಇ) ಈ ಸೌಲಭ್ಯಗಳನ್ನು ಪೂರ್ಣ ಪ್ರಮಾಣದಲ್ಲಿ ಯಾವ ಕಾಲಮಿತಿಯೊಳಗೆ ಒದಗಿಸಲಾಗುವುದು ?

## ವಸತಿ ಶಾಲೆಗಳ ಶೈಕ್ಷಣಿಕ ಆಡಳಿತ ವ್ಯವಸ್ಥೆ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೨೫೧೨ (೨೬೮೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿ ನಡೆಯುತ್ತಿರುವ ವಸತಿ ಶಾಲೆಗಳ ಶೈಕ್ಷಣಿಕ ಆಡಳಿತವನ್ನು ಗಮನಿಸಲು ಸರ್ಕಾರ ಯಾವ ವ್ಯವಸ್ಥೆಯನ್ನು ಮಾಡಲಾಗಿದೆ ;

(ಆ) ಶೈಕ್ಷಣಿಕ ವ್ಯವಸ್ಥೆಯ ಗುಣಮಟ್ಟ ಕಾಪಾಡಲು, ಶಿಕ್ಷಕರಿಗೆ ತರಬೇತಿ ಹಾಗೂ ಮಾರ್ಗದರ್ಶನ ನೀಡಲು ಇಲಾಖೆಯಲ್ಲಿ ಏನು ವ್ಯವಸ್ಥೆ ಮಾಡಲಾಗಿದೆ ;

(ಇ) ಶೈಕ್ಷಣಿಕ ಸುಗಮ ಆಡಳಿತಕ್ಕಾಗಿ ಅನುಭವವಿರುವ ಅಧಿಕಾರಿಗಳನ್ನು ಶಿಕ್ಷಣ ಇಲಾಖೆಯಿಂದ ನಿಯೋಜಿಸಲು ಸರ್ಕಾರ ಆಲೋಚಿಸುತ್ತಿದೆಯೇ ?

## ತುರ್ತು ಆರೋಗ್ಯ ಸೇವೆಯ ಆಂಬ್ಯುಲೆನ್ಸ್‌ಗಳ ನಿರ್ವಹಣೆ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೧೩ (೨೭೨೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಆರೋಗ್ಯ ಇಲಾಖೆಯಲ್ಲಿ ತುರ್ತು ಆರೋಗ್ಯ ಸೇವೆಗೆಂದು ಇರುವ ೧೦೮ ಆಂಬ್ಯುಲೆನ್ಸ್ ವಾಹನಗಳು ಸಿಬ್ಬಂದಿಗಳ, ಸಲಕರಣೆಗಳ ಮತ್ತು ವಾಹನಗಳ ನಿರ್ವಹಣೆಗಳ ಕೊರತೆಯಂತಹ ನೂರೆಂಟು ಸಮಸ್ಯೆಗಳಿಂದ ಬಳಲುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸಲಕರಣೆಗಳಲ್ಲಿದೆ ೧೦೮ ವಾಹನಗಳಿಗೆ ಸೂಕ್ತ ಸಲಕರಣೆಗಳನ್ನು ಒದಗಿಸಲು ಮತ್ತು ವಾಹನಗಳ ಸರ್ವೀಸ್ ಮಾಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ೨೦೧೩-೧೪, ೨೦೧೪-೧೫ ಹಾಗೂ ೨೦೧೫-೧೬ರ ಸಾಲಿನಲ್ಲಿ ಇವುಗಳ ನಿರ್ವಹಣೆಗೆ ಖರ್ಚಾದ ಅನುದಾನವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ೨೦೧೩-೧೪, ೨೦೧೪-೧೫ ಹಾಗೂ ೨೦೧೫-೧೬ರ ಸಾಲಿನಲ್ಲಿ ಇವುಗಳ ನಿರ್ವಹಣೆಗೆ ಸರ್ಕಾರ ನಿಗಧಿಪಡಿಸಿದ್ದ ಅನುದಾನವೆಷ್ಟು; ಉಳಿದ ಅನುದಾನವೆಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು)

## ಸರ್ಕಾರಿ ಆಸ್ಪತ್ರೆಗಳ ಶೌಚಾಲಯ ಮತ್ತು ಆವರಣಗಳ ಸ್ವಚ್ಛತೆಯ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೧೪ (೨೭೧೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿನ ಶೌಚಾಲಯಗಳು ಹಾಗೂ ಆಸ್ಪತ್ರೆಯ ಆವರಣಗಳು ಸ್ವಚ್ಛತೆಯ ಕೊರತೆಯಿಂದ ಸೊಳ್ಳೆಗಳ ಆವಾಸ ಸ್ಥಾನವಾಗಿ ಸಾಂಕ್ರಾಮಿಕ ರೋಗಗಳಿಗೆ ಕಾರಣವಾಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದರೆ, ಇದರ ನಿರ್ವಹಣೆಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಸರ್ಕಾರಿ ಆಸ್ಪತ್ರೆಗಳಲ್ಲಿನ ಶೌಚಾಲಯಗಳ ಸ್ವಚ್ಚತೆ ಮತ್ತು ಶುಭ್ರತೆಯ ನಿರ್ವಹಣೆ ಮಾಡುವವರು ಯಾರು; ಹಾಗೂ ಯಾರ ಮೇಲ್ವಿಚಾರಣೆಯಲ್ಲಿ ನಡೆಯುವುದು; ಅಶುಚಿತ್ವ ವಾತಾವರಣಕ್ಕೆ ಜವಾಬ್ದಾರರು ಯಾರು; (ಪ್ರಕ್ರಿಯೆಯ ಪೂರ್ಣ ವಿವರ ನೀಡುವುದು)

(ಈ) ಸರ್ಕಾರಿ ಆಸ್ಪತ್ರೆಗಳ ಸ್ವಚ್ಚತೆಯ ನಿರ್ವಹಣೆಗೆ ಸರ್ಕಾರ ನಿಗಧಿಪಡಿಸಿರುವ ಅನುದಾನವೆಷ್ಟು; ಯಾವ ಹೆಡ್ ಆಫ್ ಅಕೌಂಟ್‌ನಿಂದ ಹಣ ಬಿಡುಗಡೆ ಮಾಡಲಾಗುವುದು ;

(ಉ) ೨೦೧೪-೧೫, ೨೦೧೫-೧೬ನೇ ಸಾಲಿನಲ್ಲಿ ಬಿಡುಗಡೆಯಾದ ಅನುದಾನವೆಷ್ಟು; ೨೦೧೬-೧೭ನೇ ಸಾಲಿಗೆ ನಿಗಧಿಪಡಿಸಿರುವ ಅನುದಾನವೆಷ್ಟು? (ಜಿಲ್ಲಾವಾರು ವಿವರ ನೀಡುವುದು)

## ಉತ್ತರ ಕರ್ನಾಟಕ ಪ್ರವಾಸಿ ತಾಣಗಳಿಗೆ ಮೂಲ ಸೌಕರ್ಯ ಒದಗಿಸುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೫೧೫ (೨೭೧೮) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಉತ್ತರ ಕರ್ನಾಟಕ ಭಾಗದ ಪ್ರವಾಸಿ ತಾಣಗಳಲ್ಲಿ ಮೂಲಭೂತ ಸೌಕರ್ಯಗಳಿಲ್ಲದಿರುವ ಆ ಭಾಗದಲ್ಲಿ ಪ್ರವಾಸಿಗರ ಸಂಖ್ಯೆ ಕಡಿಮೆಯಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಉತ್ತರ ಕರ್ನಾಟಕ ಭಾಗದ ಪ್ರೇಕ್ಷಣೀಯ ಪ್ರವಾಸಿ ತಾಣಗಳಿಗೆ ಸರ್ಕಾರವು ೨೦೧೩–೧೪ ೨೦೧೪–೧೫, ೨೦೧೫–೧೬ನೇ ಸಾಲಿನಲ್ಲಿ ಕೈಗೊಂಡ ಮೂಲಭೂತ ಅಭಿವೃದ್ಧಿ ಕಾಮಗಾರಿಗಳು ಯಾವುವು; ಯಾವ ಯಾವ ಪ್ರವಾಸಿ ಸ್ಥಳಗಳಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗಿದೆ ;

(ಇ) ೨೦೧೩–೧೪, ೨೦೧೪–೧೫, ೨೦೧೫–೧೬ನೇ ಸಾಲಿನಲ್ಲಿ ಪ್ರವಾಸಿ ತಾಣಗಳ ಅಭಿವೃದ್ಧಿಗೆ ಬಿಡುಗಡೆ ಮಾಡಿದ ಅನುದಾನವೆಷ್ಟು; ಯಾವ ಯಾವ ಪ್ರವಾಸಿ ತಾಣಗಳಿಗೆ ಎಷ್ಟೆಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ;

(ಈ) ಉತ್ತರ ಕರ್ನಾಟಕ ಭಾಗದ ಪ್ರವಾಸಿ ತಾಣಗಳ ಪರಿಚಯ ಮತ್ತು ಪ್ರಚಾರಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ರಾಜ್ಯದಲ್ಲಿ ವೈದ್ಯಕೀಯ ಕಾಲೇಜುಗಳ ಸ್ಥಾಪನೆ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೧೬ (೨೭೧೯) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಬಡ ಪ್ರತಿಭಾವಂತ ವಿದ್ಯಾರ್ಥಿಗಳ ವೈದ್ಯಕೀಯ ಶಿಕ್ಷಣ ಪಡೆಯಲು ಅನುಕೂಲವಾಗುವಂತೆ ಹೊಸ ಸರ್ಕಾರಿ ವೈದ್ಯಕೀಯ ಶಿಕ್ಷಣ ಕಾಲೇಜುಗಳನ್ನು ಸ್ಥಾಪಿಸುವ ವಿಷಯ ಸರ್ಕಾರದ ಮುಂದಿದೆಯೇ ;

(ಆ) ಹಾಗಿದ್ದಲ್ಲಿ, ೨೦೧೩–೧೪, ೨೦೧೪–೧೫, ಹಾಗೂ ೨೦೧೫–೧೬ನೇ ಸಾಲಿನಲ್ಲಿ ಎಷ್ಟು ಹೊಸ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲಾಗಿದೆ; ಅವುಗಳನ್ನು ಯಾವ ಯಾವ ಸ್ಥಳಗಳಲ್ಲಿ ಪ್ರಾರಂಭಿಸಲಾಗಿದೆ ;

(ಇ) ಗಡಿ ಜಿಲ್ಲೆಯಾದ ಬೆಳಗಾವಿಯ ಚಿಕ್ಕೋಡಿ ಪಟ್ಟಣದಲ್ಲಿ ಸರ್ಕಾರಿ ವೈದ್ಯಕೀಯ ಶಿಕ್ಷಣ ಕಾಲೇಜು ಪ್ರಾರಂಭಿಸುವ ವಿಚಾರ ಸರ್ಕಾರದ ಮುಂದಿದೆಯೇ; ಇದ್ದಲ್ಲಿ ಪ್ರಾರಂಭಿಸಲಾಗುವುದು ಯಾವಾಗ ;

(ಈ) ಚಿಕ್ಕೋಡಿ ಪಟ್ಟಣದಲ್ಲಿ ಸರ್ಕಾರಿ ವೈದ್ಯಕೀಯ ಶಿಕ್ಷಣ ಕಾಲೇಜು ಪ್ರಾರಂಭಿಸಲು ಸ್ಥಳ ಗುರುತಿಸಲಾಗಿದೆಯೇ; ಇದರ ಪ್ರಕ್ರಿಯೆ ಯಾವ ಕಾಲಮಿತಿಯೊಳಗೆ ಪೂರ್ಣಗೊಳ್ಳುವುದು ?

## ನೇಕಾರ ಜನಾಂಗವನ್ನು ಗುರುತು ಮಾಡಿರುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೨೫೧೭ (೨೭೫೯) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರದ ಆದೇಶದ ಪ್ರಕಾರ ನೇಕಾರ ಜನಾಂಗದಲ್ಲಿ ಬರುವ ಒಳ ಪಂಗಡಗಳು ಯಾವುವು ;

(ಆ) ಇತ್ತೀಚಿನ ಜನಗಣತಿಯಲ್ಲಿ ಎಷ್ಟು ನೇಕಾರ ಪಂಗಡಗಳನ್ನು ಗುರುತಿಸಲಾಗಿದೆ ;

(ಇ) ಕಳೆದ ವರ್ಷ ನಡೆದ ಜನಗಣತಿಯ ಪೂರ್ಣ ವಿವರವನ್ನು ಯಾವಾಗ ಪ್ರಕಟಿಸಲಾಗುವುದು?

## ಹಿಂದುಳಿದ ವರ್ಗಗಳ ಮಾನದಂಡದ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೨೫೧೮ (೨೭೫೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದುಳಿದ ವರ್ಗಗಳಿಗೆ ಯಾವ ಯಾವ ಜನಾಂಗ ಸೇರಿವೆ ;

(ಆ) ಹಿಂದುಳಿದ ವರ್ಗಗಳಿಗೆ ಸೇರಿಸಲು ಯಾವ ಮಾನದಂಡ ಅನುಸರಿಸಲಾಗುತ್ತದೆ ;

(ಇ) ಯಾವ ಯಾವ ಜನಾಂಗ ಹಿಂದುಳಿದ ವರ್ಗಗಳಿಗೆ ಸೇರಿಸಲು ಅರ್ಜಿ ಸಲ್ಲಿಸಿದೆ ?

## ತುರುವೇಕೆರೆ ಕ್ಷೇತ್ರದಲ್ಲಿ ಪಡಿತರ ಚೀಟಿ ನೀಡುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೨೫೧೯ (೨೭೬೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುರುವೇಕೆರೆ ಕ್ಷೇತ್ರದಲ್ಲಿರುವ ಕುಟುಂಬಗಳೆಷ್ಟು ;

(ಆ) ಸರ್ಕಾರ ಇದುವರೆವಿಗೆ ವಿವಿಧ ಪಡಿತರ ಚೀಟಿ ನೀಡಿರುವ ಕುಟುಂಬಗಳೆಷ್ಟು; (ವಿವರ ನೀಡುವುದು)

(ಇ) ಈಗಲೂ ಬೇಡಿಕೆ ಇಟ್ಟಿರುವ ಕುಟುಂಬಗಳೆಷ್ಟು ;

(ಈ) ಪಡಿತರ ಚೀಟಿ ನೀಡಲು ಸರ್ಕಾರ ನಿಗಧಿ ಮಾಡಲಾದ ಮಾನದಂಡವೇನು ;

(ಉ) ಎಷ್ಟು ದಿನಗಳಲ್ಲಿ ಬೇಡಿಕೆಗೆ ತಕ್ಕಂತೆ ನೀಡಲಾಗುವುದು ?

## ತುಮಕೂರು ಜಿಲ್ಲೆಗೆ ಪ್ರವಾಸೋದ್ಯಮ ಇಲಾಖಾ ಸೌಲಭ್ಯಗಳ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೨೫೨೦ (೨೭೬೨) ಮಾನ್ಯ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಪ್ರವಾಸೋದ್ಯಮ ಇಲಾಖೆ ತೆಗೆದುಕೊಂಡಿರುವ ವಿವಿಧ ಕಾರ್ಯಕ್ರಮಗಳೇನು; ಅವು ಯಾವುವು ;

(ಆ) ಕಳೆದ ಎರಡು ವರ್ಷಗಳಿಂದ ಪ್ರವಾಸೋದ್ಯಮ ಇಲಾಖೆಗೆ ವಿವಿಧ ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ ಬಂದಿರುವ ಬೇಡಿಕೆಗಳಾವುವು; (ತಾಲ್ಲೂಕುವಾರು ವಿವರ ಕೊಡುವುದು)

(ಇ) ಬೇಡಿಕೆಗೆ ತಕ್ಕಂತೆ ಮಂಜೂರು ಮಾಡಲಾದ ಕಾರ್ಯಕ್ರಮಗಳಾವುವು ;

(ಈ) ಇಲ್ಲದಿದ್ದಲ್ಲಿ, ಯಾವಾಗ ಮಂಜೂರು ಮಾಡಲಾಗುವುದು ?

## ರಾಜ್ಯಕ್ಕೆ ಕೇಂದ್ರದಿಂದ ಬಿಡುಗಡೆಯಾದ ಅನುದಾನದ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೨೫೨೧ (೨೭೬೦) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳ ಕೇಂದ್ರ ಸರ್ಕಾರ ಕರ್ನಾಟಕದ ಅನೇಕ ವಿವಿಧ ಲೆಕ್ಕಶೀರ್ಷಿಕೆಗಳಲ್ಲಿ ಯಾವ ಯಾವ ಕಾರ್ಯಕ್ರಮಗಳಿಗೆ ಎಷ್ಟೆಷ್ಟು ಹಣ ಬಿಡುಗಡೆ ಮಾಡಲಾಗಿದೆ ;

(ಆ) ಹಾಗಿದ್ದಲ್ಲಿ, ನಗರ ಪ್ರದೇಶ ಹೊರತುಪಡಿಸಿ ಗ್ರಾಮೀಣ ಪ್ರದೇಶಗಳಿಗೆ ಯಾವ ಯಾವ ಯೋಜನೆ ದೊರಕಿದೆ ;

(ಇ) ಮುಂದಿನ ದಿನಗಳಲ್ಲಿ ದೊರಕಬಹುದಾದ ಹೊಸ ಯೋಜನೆಗಳ ಪ್ರಸ್ತಾವನೆಗಳಾವುವು ?

## ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನೌಕರರು ನಕಲಿ ಪ್ರಮಾಣ ಪತ್ರಗಳನ್ನು ಸೃಜಿಸಿ ದುರುಪಯೋಗ ಪಡಿಸಿಕೊಂಡಿರುವ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು):–**

೨೫೨೨ (೨೭೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಐದು ವರ್ಷಗಳಲ್ಲಿ ಸರ್ಕಾರಿ ಅಧಿಕಾರಿಗಳು ಮತ್ತು ನೌಕರರು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಕಲಿ ಪ್ರಮಾಣ ಪತ್ರಗಳನ್ನು ಸೃಜಿಸಿ ದುರುಪಯೋಗಪಡಿಸಿಕೊಂಡಿರುವ ಪ್ರಕರಣಗಳು ಎಷ್ಟು; ಮತ್ತು ಯಾವುವು; (ಜಿಲ್ಲಾವಾರು ಪ್ರಕರಣವಾರು ವರ್ಷವಾರು ವಿವರ ನೀಡುವುದು)

(ಆ) ಮೇಲಿನ ಪ್ರಕರಣಗಳಲ್ಲಿ ಶಿಕ್ಷೆಯಾಗಿರುವ ಪ್ರಕರಣಗಳೆಷ್ಟು; ಪ್ರಸ್ತುತ ವಿಚಾರಣೆ ನಡೆಯುತ್ತಿರುವ ಪ್ರಕರಣಗಳೆಷ್ಟು; ಪ್ರಸ್ತುತ ವಿಚಾರಣೆಗೆ ಬಾಕಿ ಇರುವ ಪ್ರಕರಣಗಳೆಷ್ಟು; (ಜಿಲ್ಲಾವಾರು, ವರ್ಷವಾರು ಪ್ರಕರಣವಾರು ವಿವರ ನೀಡುವುದು)

(ಇ) ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಕಲಿ ಪ್ರಮಾಣ ಪತ್ರಗಳನ್ನು ಸೃಜಿಸಿ ದುರುಪಯೋಗಪಡಿಸಿಕೊಂಡ ಅಧಿಕಾರಿಗಳು ಹಾಗೂ ನೌಕರರ ಮೇಲೆ ಸರ್ಕಾರ ಕೈಗೊಳ್ಳುವ ತುರ್ತು ಕಾನೂನು ಕ್ರಮಗಳೇನು ?

## ಕೇಂದ್ರ ಸರ್ಕಾರದ ಅನುದಾನದ ಕುರಿತು

**ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೨೩ (೨೬೪೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಸರ್ಕಾರದಿಂದ ಕಳೆದ ೩ ವರ್ಷದಲ್ಲಿ ಸಮಾಜ ಕಲ್ಯಾಣ ಇಲಾಖೆಗೆ ನೀಡಿರುವ ಅನುದಾನವೆಷ್ಟು; ಯಾವ ಯಾವ ಯೋಜನೆಗಳಿಗೆ ಎಷ್ಟೆಷ್ಟು ಅನುದಾನ ನೀಡಲಾಗಿದೆ ; (ವರ್ಷಾವಾರು ಮಾಹಿತಿ ನೀಡುವುದು)

(ಆ) ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಅನುದಾನದಲ್ಲಿ ಎಷ್ಟು ಹಣವನ್ನು ವಿನಿಯೋಗಿಸಲಾಗಿದೆ; ರಾಜ್ಯ ಸರ್ಕಾರವು ಇದನ್ನು ಯಾವ ಯಾವ ಯೋಜನೆಗಳಿಗೆ ಬಳಸಿಕೊಂಡಿದೆ ; ಅನುದಾನ ಬಳಕೆಯಾಗದಿದ್ದಲ್ಲಿ, ಕಾರಣಗಳೇನು ;

(ಇ) ಖರ್ಚಾಗದೇ ಉಳಿದ ಅನುದಾನವನ್ನು ಕೇಂದ್ರ ಸರ್ಕಾರಕ್ಕೆ ಹಿಂದಿರುಗಿಸಲಾಗಿದೆಯೇ ? (ವರ್ಷಾವಾರು ಮಾಹಿತಿ ನೀಡುವುದು)

## ಹಾಸ್ಟೆಲ್‌ಗಳಲ್ಲಿನ ಎಲ್ಲಾ ವಿಧದ ವ್ಯವಸ್ಥೆಯ ಕುರಿತು

**ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೨೪ (೨೬೪೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರದ ಎಲ್ಲಾ ವಿಧದ ಹಾಸ್ಟೆಲ್‌ಗಳಲ್ಲಿ ಪ್ರತಿಯೊಬ್ಬ ವಿದ್ಯಾರ್ಥಿಯ ಪ್ರತಿದಿನದ ಊಟದ ವ್ಯವಸ್ಥೆಗೆ ಸರ್ಕಾರ ವಿನಿಯೋಗಿಸುತ್ತಿರುವ ಮೊತ್ತವೆಷ್ಟು ಕಳೆದ ೩ ವರ್ಷದಲ್ಲಿ ಇದಕ್ಕಾಗಿ ಬಳಸಿದ ಅನುದಾನವೆಷ್ಟು ;

(ಆ) ವಿದ್ಯಾರ್ಥಿಗಳ ಸಂಖ್ಯೆಗನುಗುಣವಾಗಿ ಊಟದ ವ್ಯವಸ್ಥೆಯನ್ನು ಮಾಡಲು ಪ್ರತಿ ವಿದ್ಯಾರ್ಥಿನಿಲಯಗಳಿಗೆ ಈಗ ನೀಡುತ್ತಿರುವ ಮೊತ್ತವು ಸಾಕಾಗುವುದೇ; ಇಲ್ಲದಿದ್ದಲಿ, ಇದಕ್ಕಾಗಿ ಹೆಚ್ಚಿನ ಅನುದಾನವನ್ನು ವಿನಿಯೋಗಿಸುವ ಬಗ್ಗೆ ಸರ್ಕಾರ ಚಿಂತಿಸಿದೆಯೇ ;

(ಇ) ವಿದ್ಯಾರ್ಥಿನಿಲಯಗಳಲ್ಲಿ ಅಡುಗೆಗೆ ಸಮರ್ಪಕವಾದ ಆಹಾರ ಪದಾರ್ಥಗಳನ್ನು ಬಳಕೆ ಮಾಡದೇ, ವಿದ್ಯಾರ್ಥಿಗಳ ಆರೋಗ್ಯದ ಮೇಲೆ ಪರಿಣಾಮ ಬೀರಿರುವ ಬಗ್ಗೆ ಯಾವುದಾದರೂ ದೂರುಗಳು ಬಂದಿವೆಯೇ; ಬಂದಿದ್ದರೆ, ಅಂತಹವರ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ವಸತಿ ನಿಲಯಗಳಿಗೆ ಅಗತ್ಯ ವಸ್ತುಗಳ ಪೂರೈಸುವ ಟೆಂಡರ್ ಬಗ್ಗೆ

**ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೨೫ (೨೬೪೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಸತಿ ಶಾಲೆ ಮತ್ತು ವಸತಿ ನಿಲಯಗಳಿಗೆ ಅಗತ್ಯ ವಸ್ತುಗಳನ್ನು ಪೂರೈಸಲು ಟೆಂಡರ್ ಅನ್ನು ಜಿಲ್ಲಾ ಮಟ್ಟದಲ್ಲಿ ಅಥವಾ ರಾಜ್ಯ ಮಟ್ಟದಲ್ಲಿ ಕರೆಯಲಾಗುತ್ತಿದೆಯೇ ;

(ಆ) ಜಿಲ್ಲಾ ಮಟ್ಟದಲ್ಲಿ ಟೆಂಡರ್ ಅನ್ನು ಅಂತಿಮಗೊಳಿಸಿದ್ದಲ್ಲಿ, ಅದನ್ನು ಪುನಃ ರಾಜ್ಯ ಮಟ್ಟದಲ್ಲಿ ಅನುಮೋದನೆ ಪಡೆಯಬೇಕೆ; ಬೇಕಿದ್ದಲ್ಲಿ, ಕಾರಣಗಳೇನು ;

(ಇ) ವಸತಿ ಶಾಲೆ ಮತ್ತು ವಸತಿ ನಿಲಯಗಳಿಗೆ ಆಹಾರ ಪದಾರ್ಥಗಳನ್ನು ಪೂರೈಸಲು ಯಾವ ರೀತಿಯ ಟೆಂಡರ್ ಪ್ರಕ್ರಿಯೆಯನ್ನು ಅಳವಡಿಸಿಕೊಳ್ಳಲಾಗಿದೆ; ಕಳೆದ ಮೂರು ವರ್ಷಗಳಲ್ಲಿ ಯಾವ, ಆಹಾರ ಪದಾರ್ಥಗಳನ್ನು ಪೂರೈಸಲು ಟೆಂಡರ್ ಕರೆಯಲಾಗಿದೆ; (ವರ್ಷವಾರು ಮಾಹಿತಿ ನೀಡುವುದು)

(ಈ) ವರ್ಷದಿಂದ ವರ್ಷಕ್ಕೆ ಆಹಾರ ಪದಾರ್ಥಗಳ ಬೆಲೆ ಏರಿಕೆಯಾದಾಗ ವ್ಯತ್ಯಾಸದ ಹಣವನ್ನು ಸರಿದೂಗಿಸಲು ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಉ) ಕಳೆದ ೩ ವರ್ಷಗಳಲ್ಲಿ ಆಹಾರ ಪದಾರ್ಥಗಳ ಖರೀದಿಗೆ ವಿನಿಯೋಗಿಸಿರುವ ಅನುದಾನವೆಷ್ಟು? (ಜಿಲ್ಲಾವಾರು, ವರ್ಷಾವಾರು ಮಾಹಿತಿ ನೀಡುವುದು)

## ಪ್ರವಾಸ ತಾಣಗಳ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೨೬ (೨೬೪೪) ಮಾನ್ಯ ಮಾಹಿತಿ ತಂತ್ರಜ್ಞಾನ ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿರುವ ಪ್ರವಾಸಿ ತಾಣಗಳ ಸಂಖ್ಯೆ ಎಷ್ಟು ಅವು ಯಾವುವು ;

(ಆ) ಈ ಪ್ರವಾಸಿ ತಾಣಗಳಿಗೆ ಪ್ರತಿ ವರ್ಷ ಸರಾಸರಿ ಎಷ್ಟು ಪ್ರವಾಸಿಗರು ಭೇಟಿ ನೀಡುತ್ತಾರೆ ;

(ಇ) ಪ್ರವಾಸಿ ತಾಣಗಳಲ್ಲಿ ಪ್ರವಾಸಿಗರಿಗೆ ಅನುಕೂಲವಾಗುವಂತೆ ಸೂಕ್ತ ಮೂಲಸೌಕರ್ಯಗಳನ್ನು ಕಲ್ಪಿಸಲಾಗಿದೆಯೇ ;

(ಈ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಪ್ರವಾಸೋದ್ಯಮ ನೀತಿ ರೂಪಿಸುವ ಅಗತ್ಯವಿರುವುದು ಸರ್ಕಾರದ ಗಮನದಲ್ಲಿದೆಯೇ; ಹಾಗಿದ್ದಲ್ಲಿ, ಜಿಲ್ಲೆಯಲ್ಲಿ ಪ್ರವಾಸೋದ್ಯಮ ನೀತಿ ಜಾರಿಗೊಳಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ವಿವರ ನೀಡುವುದು)

## ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಮಂಜೂರಾದ ಪಡಿತರ ಚೀಟಿಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೨೭ (೨೬೮೯) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಪ್ರತಿ ತಾಲ್ಲೂಕಿಗೆ ಮಂಜೂರಾದ ಪಡಿತರ ಚೀಟಿಗಳ ಸಂಖ್ಯೆ ಎಷ್ಟು; ಪಡಿತರ ಚೀಟಿಗಾಗಿ ಬೇಡಿಕೆ ಇರುವ ಅರ್ಜಿಗಳ ಸಂಖ್ಯೆ ಎಷ್ಟು; ಈ ಬೇಡಿಕೆಯನ್ನು ಪೂರೈಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಪಡಿತರ ಚೀಟಿ ವಿತರಣಾ ಕೇಂದ್ರಗಳಲ್ಲಿ ಸರ್ವರ್ ಸಮಸ್ಯೆಯಿಂದಾಗಿ ಪಡಿತರ ಚೀಟಿ ಮುದ್ರಣಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಸಮಸ್ಯೆ ನಿವಾರಣೆಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಇಲ್ಲವಾದಲ್ಲಿ ಇದಕ್ಕೆ ಕಾರಣವೇನು;

(ಇ) ಕಳೆದ ಮೂರು ವರ್ಷಗಳಲ್ಲಿ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಪಡಿತರ ಚೀಟಿ ಮುದ್ರಣಕ್ಕಾಗಿ ಗ್ರಾಮ ಪಂಚಾಯತ್ ಮತ್ತು ತಾಲ್ಲೂಕು ಕಛೇರಿಗಳಲ್ಲಿ ಪಡೆಯಲಾದ ಒಟ್ಟು ಮೊತ್ತವೆಷ್ಟು? (ತಾಲ್ಲೂಕುವಾರು ವಿವರ ನೀಡುವುದು)

## ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಮುಚ್ಚಲ್ಪಟಿರುವ ಹಾಸ್ಟೆಲ್‌ಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೨೮ (೨೬೮೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಮೂಲಭೂತ ಅವಶ್ಯಕತೆಗಳೆಲ್ಲವನ್ನು ಹೊಂದಿಯೂ ಮುಚ್ಚಲ್ಪಟ್ಟಿರುವ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವ್ಯಾಪ್ತಿಗೊಳಪಟ್ಟ ಹಾಸ್ಟೆಲ್‌ಗಳು ಯಾವುವು; ಇವುಗಳನ್ನು ಮುಚ್ಚಲು ಕಾರಣಗಳೇನು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ರೀತಿ ಮುಚ್ಚಲ್ಪಟ್ಟಿರುವ ಹಾಸ್ಟೆಲ್‌ಗಳನ್ನು ಸದ್ಬಳಕೆ ಮಾಡಲು ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು; ಇಲ್ಲವಾದಲ್ಲಿ ಇವುಗಳು ಸೂಕ್ತ ಸುಧಾರಣೆ ಹಾಗೂ ನಿರ್ವಹಣೆ ಇಲ್ಲದೆ ಶಿಥಿಲಗೊಂಡು ಬಿದ್ದು ಹೋಗುವ ಸಾಧ್ಯತೆಗಳಿಲ್ಲವೇ ;

(ಇ) ಈ ರೀತಿ ಮುಚ್ಚಲ್ಪಟ್ಟಿರುವ ಹಾಸ್ಟೆಲ್‌ಗಳ ನಿರ್ವಹಣೆಯ ಹೊಣೆ ಹಾಗೂ ಬಳಕೆಯನ್ನು ಗ್ರಾಮ ಪಂಚಾಯತುಗಳಿಗೆ ನೀಡುವ ಯೋಜನೆ ಸರ್ಕಾರಕ್ಕಿದೆಯೇ; ಇದ್ದಲ್ಲಿ, ಏನು ಕ್ರಮ ಕೈಗೊಳ್ಳಲಾಗುವುದು; ಇಲ್ಲವಾದಲ್ಲಿ ಕಾರಣವೇನು ?

## ದಕ್ಷಿಣ ಕನ್ನಡ ಜಿಲ್ಲೆಯ ಕಡಬದಲ್ಲಿನ ಸಮುದಾಯ ಆರೋಗ್ಯ ಕೇಂದ್ರ ಕಟ್ಟಡ ಕಾಮಗಾರಿ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೨೯ (೨೬೮೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲ್ಲೂಕಿನ ಸುಳ್ಯ ವಿಧಾನಸಭಾ ಕ್ಷೇತ್ರದ ಕಡಬದಲ್ಲಿನ ಸಮುದಾಯ ಆರೋಗ್ಯ ಕೇಂದ್ರಕ್ಕೆ ಮಂಜೂರಾದ ಹುದ್ದೆಗಳೆಷ್ಟು; ಆ ಪೈಕಿ ಖಾಲಿ ಇರುವ ಹುದ್ದೆಗಳೆಷ್ಟು; ಈ ಹುದ್ದೆಗಳನ್ನು ತುಂಬಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಕಡಬದಲ್ಲಿನ ಸಮುದಾಯ ಆರೋಗ್ಯ ಕೇಂದ್ರಕ್ಕೆ ನೂತನ ಕಟ್ಟಡ ನಿರ್ಮಾಣಕ್ಕೆ ಟೆಂಡರ್ ಕರೆಯಲಾಗಿದೆಯೇ ಮತ್ತು ಕಟ್ಟಡ ನಿರ್ಮಾಣಕ್ಕೆ ಮಂಜೂರಾದ ಅನುದಾನವೆಷ್ಟು; ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು ಕಾಮಗಾರಿಯನ್ನು ಯಾವಾಗ ಪೂರ್ಣಗೊಳಿಸಲಾಗುವುದು ;

(ಇ) ಸಮುದಾಯ ಆರೋಗ್ಯ ಕೇಂದ್ರಗಳ ಕಟ್ಟಡ ಕಾಮಗಾರಿಗಳ ಟೆಂಡರನ್ನು ಕೇಂದ್ರಿಕೃತವಾಗಿ ಕರೆಯುವ ಉದ್ದೇಶವೇನು; ಇದರಿಂದ ಟೆಂಡರ್‌ನ ಯಾವುದೇ ಮಾಹಿತಿ ಗ್ರಾಮ ಪಂಚಾಯತ್, ತಾಲ್ಲೂಕು ಪಂಚಾಯತ್ ಹಾಗೂ ಜಿಲ್ಲಾ ಪಂಚಾಯತ್‌ಗಳಿಗೆ ದೊರೆಯದಿರುವುದನ್ನು ಸರ್ಕಾರ ಗಮನಿಸಿದೆಯೇ ; ಗಮನಿಸಿದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು ?

## ರಾಜ್ಯದ ಮಾಲ್‌ಗಳಲ್ಲಿ ಅವಧಿ ಮೀರಿದ ವಸ್ತುಗಳ ಮಾರಾಟದ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೩೦ (೨೬೮೮) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವ್ಯಾಪಾರ ವಹಿವಾಟುಗಳನ್ನು ನಡೆಸುತ್ತಿರುವ ಖಾಸಗಿಯವರ ಮಾಲ್‌ಗಳಲ್ಲಿ ಅವಧಿ ಮೀರಿದ ವಸ್ತುಗಳು ವ್ಯಾಪಕವಾಗಿ ಮಾರಾಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಇಂತಹ ಮಾಲ್‌ಗಳ ಮೇಲೆ ಸರ್ಕಾರಕ್ಕಿರುವ ನಿಯಂತ್ರಣಗಳೇನು ;

(ಇ) ಕಳೆದ ಎರಡು ವರ್ಷಗಳಲ್ಲಿ ಮಾಲ್‌ಗಳಲ್ಲಿನ ಮಾರಾಟ ವಸ್ತುಗಳ ಪರಿವೀಕ್ಷಣೆಗಾಗಿ ಎಷ್ಟು ಭಾರಿ ಇಲಾಖಾಧಿಕಾರಿಗಳು ಭೇಟಿ ನೀಡಿದ್ದಾರೆ ಮತ್ತು ಅವಧಿ ಮೀರಿದ ವಸ್ತುಗಳ ಮಾರಾಟದ ವಿರುದ್ಧ ಮಾಲ್‌ಗಳ ಮೇಲೆ ತೆಗೆದುಕೊಂಡ ಕ್ರಮಗಳೇನು? (ವರ್ಷವಾರು, ಮಾಲ್‌ವಾರು ವಿವರ ನೀಡುವುದು)

## ರಾಜ್ಯದಲ್ಲಿನ ಪ್ರವಾಸೋದ್ಯಮವನ್ನು ಅಭಿವೃದ್ಧಿ ಪಡಿಸುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೩೧ (೨೬೮೭) ಮಾನ್ಯ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕವನ್ನು ಕೇರಳ ಮತ್ತು ಗೋವಾ ರಾಜ್ಯಗಳ ಮಾದರಿ ಪ್ರವಾಸಿಗರ ಆಕರ್ಷಣೆಯ ಸ್ಥಳವನ್ನಾಗಿಸಲು ಸಾಧ್ಯವಾಗದಿರಲು ಕಾರಣಗಳೇನು ; ಈ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು ;

(ಆ) ಕರ್ನಾಟಕ ಕರಾವಳಿಯಲ್ಲಿ ಪ್ರವಾಸೋದ್ಯಮಕ್ಕೆ ವಿಫಲವಾದ ಅವಕಾಶಗಳಿದ್ದರೂ ಸಹ ಅವುಗಳನ್ನು ಬಳಸದೇ ಇರಲು ಕಾರಣಗಳೇನು ;

(ಇ) ಕರ್ನಾಟಕ ಕರಾವಳಿಯುಲ್ಲಿ ನಡೆಸಲು ಉದ್ದೇಶಿಸಿರುವ ಹೆಲಿಟ್ಯೂರಿಸಂ ಯಾವ ಹಂತದಲ್ಲಿದೆ ?

## ಹೊರಗುತ್ತಿಗೆ ನೌಕರರನ್ನು ಒಳಗುತ್ತಿಗೆ ನೌಕರರಾಗಿ ಪರಿವರ್ತಿಸುವ ಬಗ್ಗೆ

**ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೩೨ (೨೭೩೦) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿವಮೊಗ್ಗ ನಗರದ ವೈದ್ಯಕೀಯ ಕಾಲೇಜು/ಮಗ್ಗಾನ್ ಆಸ್ಪತ್ರೆಯಲ್ಲಿ ಕಳೆದ ೧೦ ವರ್ಷಗಳಿಂದ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಲ್ಯಾಬ್ ಅಸಿಸ್ಟೆಂಟ್‌ಗಳ ಸಂಖ್ಯೆ ಎಷ್ಟು ;

(ಆ) ಸದರಿಯವರಿಗೆ ನಿಗಧಿಗೊಳಿಸಲಾಗಿರುವ ವೇತನ ಮತ್ತು ಇತರ ಭತ್ಯೆಗಳು ಯಾವುವು ;

(ಇ) ಕೇಂದ್ರ ಸರ್ಕಾರದ ಆದೇಶದನ್ವಯ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಸದರಿ ನೌಕರರನ್ನು ಒಳಗುತ್ತಿಗೆ ನೌಕರರನ್ನಾಗಿ ಪರಿವರ್ತಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದ ಅಧಿಕಾರಿಗಳಿಗೆ ಬಡ್ತಿಯಲ್ಲಿ ಕೈ ತಪ್ಪುತ್ತಿರುವುದರ ಬಗ್ಗೆ

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

*೨೫೩೩ (೨೬೪೯)* ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸರ್ಕಾರದ ಆಡಳಿತ ವ್ಯವಸ್ಥೆಯಲ್ಲಿ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದ ಅಧಿಕಾರಿಗಳಿಗೆ ಬಡ್ತಿ/ಇತರೆ ಸೌಲಭ್ಯಗಳು ಸಿಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದ ಅಧಿಕಾರಿ/ನೌಕರರಿಗೆ ಬಡ್ತಿ ಮತ್ತು ಇತರೆ ಸೌಲಭ್ಯಗಳನ್ನು ಒದಗಿಸುವುದಕ್ಕಾಗಿ ಸರ್ಕಾರವು ಯಾವುದಾದರೂ ಸಭೆ ನಡೆಸಲಾಗಿದೆಯೇ ; ನಡೆಸಿದ್ದಲ್ಲಿ, ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಸುಮಾರು ಇಲಾಖೆಗಳಲ್ಲಿ ಪರಿಶಿಷ್ಠರಿಗೆ ಇದ್ದ ಹುದ್ದೆಗಳನ್ನು ರದ್ದು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕಾರಣಗಳೇನು ; (ವಿವರ ನೀಡುವುದು)

(ಈ) ಹಾಗೆ ಸುಮಾರು ಇಲಾಖೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜಾತಿಯವರಿಗಿದ್ದ ಹುದ್ದೆಗಳನ್ನು ಬೇರೆ ಜಾತಿಯವರಿಗೆ ನೀಡಲಾಗಿದೆಯೇ ; (ಮಾಹಿತಿ ಒದಗಿಸುವುದು)

(ಉ) ಸರ್ಕಾರವು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಜನಾಂಗದ ಅಧಿಕಾರಿ/ನೌಕರರಿಗೆ ಬಡ್ತಿ ನೀಡಲಾಗಿದೆಯೇ ? (ಇಲಾಖಾವಾರು ಸಿಬ್ಬಂದಿಗಳವಾರು ಸಂಪೂರ್ಣ ಮಾಹಿತಿ ನೀಡುವುದು)

## ಮಹಿಳೆ ಮತ್ತು ಮಕ್ಕಳ ಮೇಲಿನ ದೌರ್ಜನ್ಯಗಳ ಬಗ್ಗೆ

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೨೫೩೪ (೨೬೪೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮಹಿಳೆಯರು ಮತ್ತು ಮಕ್ಕಳ ಮೇಲೆ ನಡೆಯುತ್ತಿರುವ ಲೈಂಗಿಕ ಕಿರುಕುಳ ಹಾಗೂ ದೌರ್ಜನ್ಯ ಪ್ರಕರಣಗಳನ್ನು ತಡೆಯಲು ಸರ್ಕಾರ ಕೈಗೊಂಡಿರುವ ಮಹತ್ವದ ಕ್ರಮಗಳೇನು ;

(ಆ) ಹಾಗಿದ್ದಲ್ಲಿ, ವಿಶೇಷವಾಗಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮಹಿಳೆಯರ ಮೇಲಿನ ದೌರ್ಜನ್ಯ ತಡೆಯಲು ವಿಶೇಷ ಕಾನೂನನ್ನು ಸರ್ಕಾರ ರೂಪಿಸಿದೆಯೇ ? (ಮಾಹಿತಿ ನೀಡುವುದು)

## ಹೈದ್ರಾಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಅನುದಾನ

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೨೫೩೫ (೨೬೪೧) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದ್ರಾಬಾದ್-ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯು ಸ್ಥಾಪನೆಯಾದಾಗಿನಿಂದ ಈವರೆಗೆ ಬೀದರ್ ಜಿಲ್ಲೆಗೆ ಬಿಡುಗಡೆಯಾದ ವಾರ್ಷಿಕ ಅನುದಾನವೆಷ್ಟು ;

(ಆ) ಹಾಗಿದ್ದಲ್ಲಿ, ಪ್ರತಿ ವಿಧಾನಸಭೆ ಕ್ಷೇತ್ರವಾರು ಹಂಚಿಕೆ ಮಾಡಲಾದ ಅನುದಾನವೆಷ್ಟು ; ಬಳಕೆಯಾದ ಅನುದಾನವೆಷ್ಟು ;

(ಇ) ಮಂಡಳಿಯಿಂದ ಕೈಗೊಂಡ ಕಾಮಗಾರಿಗಳು ವಿಳಂಬವಾಗಲು ಕಾರಣಗಳೇನು ; (ಮತಕ್ಷೇತ್ರವಾರು, ವರ್ಷವಾರು, ಕಾಮಗಾರಿವಾರು ತಗುಲಿದ ಮೊತ್ತದೊಂದಿಗೆ ಸಂಪೂರ್ಣ ವಿವರ ನೀಡುವುದು)

## ಅನ್ನಭಾಗ್ಯ ಹಾಗೂ ಅಂತ್ಯೋದಯ ಯೋಜನೆಗಳ ಸೌಲಭ್ಯದ ಬಗ್ಗೆ

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೨೫೩೬ (೨೬೪೨) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅನ್ನಭಾಗ್ಯ ಹಾಗೂ ಅಂತ್ಯೋದಯ ಯೋಜನೆಗಳ ಸೌಲಭ್ಯ ಪಡೆಯಲು ಕಳೆದ ೨ ವರ್ಷಗಳ ಅವಧಿಯಲ್ಲಿ ಅರ್ಹರಿದ್ದ ಫಲಾನುಭವಿಗಳ ಒಟ್ಟು ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ಅನ್ನಭಾಗ್ಯ ಹಾಗೂ ಅಂತ್ಯೋದಯ ಯೋಜನೆಗಳಡಿ, ಕಳೆದ ಎರಡು ವರ್ಷಗಳಲ್ಲಿ ಎಷ್ಟು ಸೌಲಭ್ಯ ಪಡೆದ ವಾಸ್ತವಿಕ ಫಲಾನುಭವಿಗಳ ಒಟ್ಟು ಸಂಖ್ಯೆ ಎಷ್ಟು ; (ತಾಲ್ಲೂಕುವಾರು, ಫಲಾನುಭವಿಗಳವಾರು ವಿವರ ನೀಡುವುದು)

(ಇ) ಒಟ್ಟಾರೆ ಅರ್ಹ ಫಲಾನುಭವಿಗಳು ಅನ್ನಭಾಗ್ಯ ಹಾಗೂ ಅಂತ್ಯೋದಯ ಯೋಜನೆಯಡಿ ಸಂಪೂರ್ಣವಾಗಿ ಸೌಲಭ್ಯಗಳನ್ನು ಪಡೆಯದೇ ಇರಲು ಕಾರಣವೇನು ;

(ಈ) ಸರ್ಕಾರದ ಯೋಜನೆಗಳು ರಾಜ್ಯದ ಎಲ್ಲಾ ನಾಗರಿಕರಿಗೂ ಯಾವುದೇ ಅಡೆತಡೆಯಿಲ್ಲದೆ ತಲುಪಲು ಸರ್ಕಾರ ಕೈಗೊಳ್ಳಲಾಗುತ್ತಿರುವ ಕ್ರಮಗಳೇನು ? (ಸಂಪೂರ್ಣ ವಿವರ ಒದಗಿಸುವುದು)

## ಸಮಾಜ ಕಲ್ಯಾಣ ಇಲಾಖೆಯ ಅನುಷ್ಠಾನಗೊಳಿಸುವ ಕಾರ್ಯಕ್ರಮಗಳ ಬಗ್ಗೆ

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೨೫೩೭ (೨೬೪೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ವತಿಯಿಂದ ಅನುಷ್ಠಾನಗೊಳಿಸುವ ಕಾರ್ಯ ಕ್ರಮಗಳು ಯಾವುವು ; (ಸಂಪೂರ್ಣ ವಿವರ ಒದಗಿಸುವುದು)

(ಆ) ಈ ಇಲಾಖೆಗಳಲ್ಲಿ ಯೋಜನೆಗಳು, ಕಾರ್ಯಕ್ರಮದ ವಿವರ ಶೇಕಡಾವಾರು/ಸಹಾಯಧನವಾರು, ಕೇಂದ್ರವಲಯ/ ರಾಜ್ಯವಲಯದ ಯೋಜನೆಗಳನ್ನು ಅನುಷ್ಠಾನಗೊಳಿಸುವಲ್ಲಿ ಕಾರ್ಯಕ್ರಮಗಳ ವಿವರವನ್ನು ನೀಡುವುದು ?

## ಔಷಧ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೨೫೩೮ (೨೬೯೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಔಷಧ ನಿಯಂತ್ರಣ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ಅವು ಯಾವುವು ;

(ಆ) ಇನ್ನಷ್ಟು ಹೆಚ್ಚು ಔಷಧ ನಿಯಂತ್ರಕರನ್ನು ನೇಮಿಸಿಕೊಂಡು ನಕಲಿ ಔಷಧ ನಿಯಂತ್ರಣವನ್ನು ಸಮರ್ಪಕ ರೀತಿಯಲ್ಲಿ ಮಾಡಲು ಸಾಧ್ಯವಿಲ್ಲವೇ ; ಈ ಕುರಿತು ಸರ್ಕಾರದ ನಿಲುವೇನು ;

(ಇ) ಖಾಲಿ ಇರುವ ಹುದ್ದೆಗಳನ್ನು ತುಂಬಲು ಸರ್ಕಾರ ಏನು ಕ್ರಮ ಕೈಗೊಳ್ಳುವುದು ?

## ಇ–ಸಿಗರೇಟ್ ಮಾರಾಟ ನಿಷೇಧ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೨೫೪೦ (೨೬೯೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಇಂಟರ್‌ನೆಟ್ ಮೂಲಕ ಇ–ಸಿಗರೇಟ್ ಮಾರಾಟ ನಿಷೇಧವಾಗಿರುವುದು ನಿಜವೇ ;

(ಆ) ಇ–ಸಿಗರೇಟ್ ಎನ್ನುವ ಬಗ್ಗೆ ಮತ್ತು ಇದರಿಂದ ಆರೋಗ್ಯಕ್ಕೆ ಹಾನಿ ಉಂಟಾಗುವ ಬಗ್ಗೆ ವಿವರ ನೀಡುವುದು ;

(ಇ) ನಿಷೇಧವಾಗಿದ್ದರೂ, ಇ–ಸಿಗರೇಟ್ ಮಾರಾಟ ಯಾವುದೇ ಅಡೆತಡೆ ಇಲ್ಲದೆ ಸಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದರ ನಿಯಂತ್ರಣಕ್ಕೆ ಯಾವ ರೀತಿ ಕ್ರಮ ಕೈಗೊಳ್ಳಲಾಗಿದೆ ?

## ರೋಗ ಪತ್ತೆಯಚ್ಚುವ ಕಿಟ್ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೨೫೪೧ (೨೬೯೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಹೆಚ್.ಐ.ವಿ ರೋಗ ಪತ್ತೆ ಹಚ್ಚುವ ಕಿಟ್‌ಗೆ ವರ್ಷಕ್ಕೆ ಅಂದಾಜು ಎಷ್ಟು ಹಣ ಬೇಕಾಗುತ್ತದೆ ; ಈ ಕಿಟ್‌ನ್ನು ಯಾವ ಯಾವ ಸಂದರ್ಭಗಳಲ್ಲಿ ಯಾವ ಯಾವ ಕಾರಣಗಳಿಗೆ ಉಪಯೋಗಿಸಲಾಗುತ್ತದೆ ;

(ಆ) ರಾಮನಗರ, ಮೈಸೂರು, ಚಿಕ್ಕಬಳ್ಳಾಪುರ, ಕೋಲಾರ, ಬೆಂಗಳೂರು ನಗರ ಸೇರಿದಂತೆ ಹಲವು ಜಿಲ್ಲೆಗಳ ಸರ್ಕಾರಿ ಆಸ್ಪತ್ರೆಗಳಲ್ಲಿ ಸದರಿ ಕಿಟ್ ಲಭ್ಯವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ರೀತಿಯ ಕೊರತೆ ಕಾಣಿಸಿಕೊಳ್ಳಲು ಕಾರಣವೇನು ;

(ಈ) ಈ ಸಂಬಂಧ ಸದರಿ ಕಿಟ್‌ನ್ನು ಜರೂರು ಒದಗಿಸಲು ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ?

## ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನ ಯೋಜನೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೨೫೪೨ (೨೭೦೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯಕ್ಕೆ ಕಳೆದ ವರ್ಷ ರಾಷ್ಟ್ರೀಯ ಆರೋಗ್ಯ ಅಭಿಯಾನದ ಮೂಲಕ ಕೇಂದ್ರ ಸರ್ಕಾರದಿಂದ ಮಂಜೂರಾದ ಹಣ ಎಷ್ಟು ;

(ಆ) ಈ ಹಣವನ್ನು ಯಾವ ಯಾವುದಕ್ಕೆ ಖರ್ಚು ಮಾಡಬಹುದಾಗಿರುತ್ತದೆ ;

(ಇ) ಈ ಅನುದಾನದಲ್ಲಿ, ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಸಮುದಾಯ ಆರೋಗ್ಯ ಕೇಂದ್ರಗಳು ಹಾಗೂ ಸರ್ಕಾರದ ರೆಫರಲ್ ಆಸ್ಪತ್ರೆಯ ರೋಗಿಗಳಿಗೆ ಚಿಕಿತ್ಸಾ ಸಾಮಗ್ರಿಗೆ ಮತ್ತು ಔಷಧಿಗೆ ಬಳಕೆ ಮಾಡಲಾಗಿದೆಯೇ ; ಮಾಡಿದ್ದಲ್ಲಿ ವಿವರ ನೀಡುವುದು ;

(ಈ) ಖರೀದಿ ಮಾಡಿರುವ ಔಷಧಿಗಳಲ್ಲಿ ಪ್ರಮುಖ ಆಂಟಿಬಯಾಟಿಕ್ ಮಾತ್ರೆಗಳ ಕಂಪನಿ ಹೆಸರು ಜೆನರಿಕ್ ಆಗಿದ್ದಲ್ಲಿ, ವಿವರ ಹಾಗೂ ಖರೀದಿ ದರದ ವಿವರ ನೀಡುವುದು ?

## ೨೦೧೪-೧೫ ಮತ್ತು ೨೦೧೫-೧೬ನೇ ಸಾಲಿನಲ್ಲಿ ಪರಿಶಿಷ್ಠ ಜಾತಿ/ ಪರಿಶಿಷ್ಠ ಪಂಗಡದ ಅನುದಾನ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು)**

೨೫೪೩ (೨೬೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೪-೧೫ ಮತ್ತು ೨೦೧೫-೧೬ನೇ ಸಾಲಿನಲ್ಲಿ ಪರಿಶಿಷ್ಠ ಜಾತಿ, ಪರಿಶಿಷ್ಠ ಪಂಗಡದವರ ಕಲ್ಯಾಣಕ್ಕೆ ಎಷ್ಟು ಕೋಟಿ ಹಣವನ್ನು ಮೀಸಲಿಡಲಾಗಿತ್ತು ; (ವರ್ಷವಾರು ಮತ್ತು ಯೋಜನೆಗಳವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಅನುದಾನದಲ್ಲಿ ಬಳಕೆಯಾಗಿದ್ದ ಅನುದಾನವೆಷ್ಟು ; ಬಾಕಿ ಉಳಿದ ಅನುದಾನವೆಷ್ಟು ; ಬಾಕಿ ಉಳಿಯಲು ಕಾರಣವೇನು ; ಆ ಬಾಕಿ ಉಳಿದಿರುವ ಅನುದಾನಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ; (ಯೋಜನಾವಾರು, ವರ್ಷವಾರು ಮಾಹಿತಿ ನೀಡುವುದು)

(ಇ) ಅನುದಾನ ಬಿಡುಗಡೆಯಲ್ಲಿ ತಾರತಮ್ಯ ಹಾಗೂ ಗುತ್ತಿಗೆ ಅವ್ಯವಹಾರ ಹಾಗೂ ಜಿಲ್ಲಾ ಮಟ್ಟದಲ್ಲಿ ಭ್ರಷ್ಟಾಚಾರ ಹೀಗೆ ಹಲವಾರು ಪ್ರಕರಣಗಳು ನಡೆದಿದೆ ಎಂದು ಸಾರ್ವಜನಿಕರ ವಲಯದಲ್ಲಿ ಕೇಳಿ ಬರುತ್ತಿರುವುದು ನಿಜವೇ ; ಇದ್ದರೆ, ಸಂಪೂರ್ಣ ಮಾಹಿತಿ ನೀಡುವುದು ?

## ರಾಜ್ಯದಲ್ಲಿರುವ ಒಟ್ಟು ಅಂಗನವಾಡಿಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು)**

೨೫೪೪ (೨೬೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿರುವ ಒಟ್ಟು ಅಂಗನವಾಡಿ ಕೇಂದ್ರಗಳೆಷ್ಟು ; ಕೆಲಸ ನಿರ್ವಹಿಸುತ್ತಿರುವ ಅಂಗನವಾಡಿ ಸಹಾಯಕರು/ಅಂಗನವಾಡಿ ಕಾರ್ಯಕರ್ತೆಯರ ಸಂಖ್ಯೆ ಎಷ್ಟು ;

(ಆ) ಆ ಪೈಕಿ ಸ್ವಂತ ಕಟ್ಟಡ ಮತ್ತು ಬಾಡಿಗೆ ಕಟ್ಟಡದಲ್ಲಿ ಕಾರ್ಯಾಚರಿಸುತ್ತಿರುವ ಅಂಗನವಾಡಿಗಳೆಷ್ಟು ;

(ಇ) ಹಾವೇರಿ ಜಿಲ್ಲೆಯಲ್ಲಿ ಸ್ವಂತ ಕಟ್ಟಡವಿಲ್ಲದ ಅಂಗನವಾಡಿಗಳನ್ನು ಎಲ್ಲೆಲ್ಲಿ ನಡೆಸಲಾಗುತ್ತಿದೆ ; ಸದರಿ ಅಂಗನವಾಡಿಗಳಲ್ಲಿರುವ ಮಕ್ಕಳ ಸಂಖ್ಯೆ ಎಷ್ಟು ;

(ಈ) ಕಳೆದ ೩ ವರ್ಷಗಳಲ್ಲಿ ಹಾವೇರಿ ಜಿಲ್ಲೆಯಲ್ಲಿ ನಿರ್ಮಿಸಲಾದ ಅಂಗನವಾಡಿಗಳೆಷ್ಟು ; (ವಿವರ ನೀಡುವುದು)

(ಉ) ಕಳೆದ ೩ ವರ್ಷಗಳಲ್ಲಿ ಹಾವೇರಿ ಜಿಲ್ಲಾ ವ್ಯಾಪ್ತಿಯಲ್ಲಿನ ಅಂಗನವಾಡಿಗಳಿಗೆ ಬಿಡುಗಡೆ ಮಾಡಿದ ಅನುದಾನ ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಊ) ರಾಜ್ಯದಲ್ಲಿ ಅಂಗನವಾಡಿಗಳಲ್ಲಿನ ಮಕ್ಕಳಿಗೆ ಸಮರ್ಪಕವಾಗಿ ಪೌಷ್ಠಿಕ ಆಹಾರ ಸಿಗುತ್ತಿಲ್ಲವೆಂಬ ದೂರು ಕೇಳಿ ಬರುತ್ತಿದ್ದು, ಈ ಬಗ್ಗೆ ಯಾವ ಯಾವ ಕಡೆಗಳಲ್ಲಿ ಕ್ರಮ ಕೈಗೊಳ್ಳಲಾಗಿದೆ ; ಸಮರ್ಪಕವಾಗಿ ಮಕ್ಕಳಿಗೆ ಆಹಾರ ಸಿಗುವಂತೆ ಆಗಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ಪರಿಶಿಷ್ಠ ಜಾತಿ ಪರಿಶಿಷ್ಠ ಪಂಗಡದ ಯೋಜನೆಯಡಿ ೨೦೦೮ ರಿಂದ ಇಲ್ಲಿಯವರೆಗೆ ಕೊರೆದ ಕೊಳವೆ ಬಾವಿಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು)**

೨೫೪೫ (೨೯೬೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡದ ಯೋಜನೆಯಡಿ ೨೦೦೮ ರಿಂದ ಇಲ್ಲಿಯವರೆಗೆ ಕೊರೆದ ಕೊಳವೆಬಾವಿಗಳ ಸಂಖ್ಯೆ ಎಷ್ಟು ; (ವರ್ಷವಾರು ಜಿಲ್ಲಾವಾರು ಮಾಹಿತಿ ಒದಿಗಸುವುದು)

(ಆ) ಹಾವೇರಿ ಜಿಲ್ಲೆಯಲ್ಲಿ ೨೦೦೮ ರಿಂದ ಇಲ್ಲಿಯವರೆಗೆ ಕೊರೆದ ಕೊಳವೆ ಬಾವಿಗಳ ಫಲಾನುಭವಿಗಳ ಸಂಖ್ಯೆ ಎಷ್ಟು ; ಕೊರೆದ ಕೊಳವೆ ಬಾವಿಗಳಿಗೆ ಎಷ್ಟು ಫಲಾನುಭವಿಗಳಿಗೆ ಪಂಪ್‌ಸೆಟ್ ಒದಗಿಸಲಾಗಿದೆ ; ಕೊರೆದ ಕೊಳವೆ ಬಾವಿಗಳು ಹಾಗೂ ಪಂಪ್‌ಸೆಟ್ ವಿತರಿಸಿದ ಎಷ್ಟು ಫಲಾನುಭವಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದೆಯೇ ; (ತಾಲ್ಲೂಕುವಾರು ಮತ್ತು ಗ್ರಾಮವಾರು ಮಾಹಿತಿ ನೀಡುವುದು)

(ಇ) ಕೊರೆದ ಕೊಳವೆ ಬಾವಿಗಳಿಗೆ ಇಲ್ಲಿಯವರೆಗೆ ವಿದ್ಯುತ್ ಸಂಪರ್ಕ ನೀಡದಿರಲು ಕಾರಣವೇನು ; ಬಾಕಿಯಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ; (ವರ್ಷವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಕೊರೆದ ಕೊಳವೆ ಬಾವಿಗಳ ಯೋಜನೆಯಡಿಯಲ್ಲಿ ಅವ್ಯವಹಾರ ಆಪಾದನೆಗಳು ಕೇಳಿಬರುತ್ತಿರುವುದು ನಿಜವೇ ; ನಿಜವಾಗಿದ್ದಲ್ಲಿ, ಯಾವ ಜಿಲ್ಲೆಯಲ್ಲಿ ಅವ್ಯವಹಾರ ನಡೆದಿದೆ ಮತ್ತು ಆ ಬಗ್ಗೆ ಏನು ಕ್ರಮ ಕೈಗೊಂಡಿದ್ದೀರಿ ? (ಸಂಪೂರ್ಣ ಮಾಹಿತಿ ಒದಗಿಸುವುದು)

## ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು)**

೨೫೪೬ (೨೬೯೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣಕ್ಕೆ ರಾಜ್ಯ ಸರ್ಕಾರ ಕೈಗೊಂಡಿರುವ ಕಾರ್ಯಕ್ರಮಗಳೇನು ; (ಕೇಂದ್ರ ಸರ್ಕಾರ ಪ್ರಯೋಜಿತ ಮತ್ತು ರಾಜ್ಯ ಸರ್ಕಾರಗಳ ಯೋಜನೆಗಳ ಪ್ರತ್ಯೇಕ ಪಟ್ಟಿ ನೀಡುವುದು)

(ಆ) ರಾಜ್ಯದಲ್ಲಿ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ವಿವಿಧ ಸೌಲಭ್ಯ ಪಡೆಯಲು ಕಳೆದ ಎರಡು ವರ್ಷಗಳಲ್ಲಿ ಸಲ್ಲಿಕೆಯಾದ ಅರ್ಜಿಗಳು ಎಷ್ಟು ; ವಿಲೇವಾರಿಗೆ ಬಾಕಿಯಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ಹಾವೇರಿ ಜಿಲ್ಲೆಯ ತಾಲ್ಲೂಕುವಾರು ವಿವರ ನೀಡುವುದು)

(ಇ) ಹಾವೇರಿ ಜಿಲ್ಲೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವಿ.ಆರ್.ಡಬ್ಲ್ಯೂ ಮತ್ತು ಎಂ.ಆರ್.ಡಬ್ಲ್ಯೂಗಳ ಸಂಖ್ಯೆ ಎಷ್ಟು ; ರಾಜ್ಯದಲ್ಲಿ ಒಟ್ಟು ಇರುವ ವಿ.ಆರ್.ಡಬ್ಲ್ಯೂ ಮತ್ತು ಎಂ.ಆರ್.ಡಬ್ಲ್ಯೂಗಳ ಸಂಖ್ಯೆ ಎಷ್ಟು ; ಸದರಿ ಕಾರ್ಯಕರ್ತರಿಗೆ ನೀಡುತ್ತಿರುವ ಮಾಸಿಕ ವೇತನ ಎಷ್ಟು ; ವಿ.ಆರ್.ಡಬ್ಲ್ಯೂ ಮತ್ತು ಎಂ.ಆರ್.ಡಬ್ಲ್ಯೂಗಳ ವೇತನ ಹೆಚ್ಚಳಕ್ಕೆ ಸರ್ಕಾರದ ನಿಲುವೇನು ?

## ರಾಷ್ಟ್ರೀಯ ಆರೋಗ್ಯ ಮಿಷನ್ ಯೋಜನೆಯ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು)**

೨೫೪೭ (೨೬೯೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಷ್ಟ್ರೀಯ ಆರೋಗ್ಯ ಮಿಷನ್ ಯೋಜನೆಯಡಿ ಕಳೆದ ಎರಡು ವರ್ಷಗಳಲ್ಲಿ ಕೇಂದ್ರ ಸರ್ಕಾರದಿಂದ ಬಿಡುಗಡೆ ಆದ ಅನುದಾನ ಎಷ್ಟು ; ಕೇಂದ್ರ ರಾಷ್ಟ್ರೀಯ ಏಡ್ಸ್ ನಿಯಂತ್ರಣ ಸಂಸ್ಥೆ ಹಾಗೂ ರಾಜ್ಯ ಏಡ್ಸ್ ಪ್ರಿವೆನ್‌ಷನ್ ಸೊಸೈಟಿ ಅಡಿಯಲ್ಲಿ ಬರುವ ರಾಷ್ಟ್ರೀಯ

ಆರೋಗ್ಯ ಮಿಷನ್ ಕೇಂದ್ರಗಳ ಸಂಖ್ಯೆ ಎಷ್ಟು ; ಸದರಿ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಖಾಯಂ ಹಾಗೂ ಗುತ್ತಿಗೆ ನೌಕರರ ವಿವರ ನೀಡುವುದು)

(ಆ) ಇಲಾಖಾಧಿಕಾರಿಗಳ ನಿರ್ಲಕ್ಷದಿಂದ ಏಡ್ಸ್ ಪ್ರಿವೆನ್‌ಷನ್ ಸೊಸೈಟಿಯ ಗುತ್ತಿಗೆ ಸಿಬ್ಬಂದಿಗಳು ಕೆಲಸ ಕಳೆದುಕೊಳ್ಳುವ ಭೀತಿ ಎದುರಿಸುತ್ತಿರುವುದು ನಿಜವೇ ;

(ಇ) ಹೈಕೋರ್ಟ್ ಆದೇಶದ ಹೊರತಾಗಿಯೂ ಸದರಿ ನೌಕರರಿಗೆ ಸೌಲಭ್ಯಗಳು ದೊರಕದೇ ಇರುವುದು ನಿಜವೇ ;

(ಈ) ಹದಿಮೂರು ವರ್ಷಗಳಿಂದ ಹೆಚ್‌ಐವಿ ಸೋಂಕಿತರಿಗಾಗಿ ದುಡಿಯುತ್ತಿರುವ ಸಿಬ್ಬಂದಿಗಳ ಕೆಲಸದ ಭದ್ರತೆಗೆ ಸಕಾಲಕ್ಕೆ ವೇತನ, ಸಹಾಯಧನ, ಇತರೆ ಸೌಲಭ್ಯಗಳನ್ನು ನೀಡುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ಸಂಪೂರ್ಣ ವಿವರ ನೀಡುವುದು)

## ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನ ಯೋಜನೆ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೪೮ (೨೬೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೧೬ನೇ ಸಾಲಿನಲ್ಲಿ ಬಡ ಕುಟುಂಬಗಳ ಆರೋಗ್ಯಕ್ಕಾಗಿ ಜಾರಿಗೊಳಿಸಲಾಗಿರುವ ರಾಷ್ಟ್ರೀಯ ಗ್ರಾಮೀಣ ಮತ್ತು ನಗರ ಆರೋಗ್ಯ ಅಭಿಯಾನದಲ್ಲಿ ರಾಜ್ಯಕ್ಕೆ ಬಿಡುಗಡೆಯಾದ ಅನುದಾನವೆಷ್ಟು ;

(ಆ) ಈ ಅನುದಾನವನ್ನು ಯಾವ ಯಾವ ಉದ್ದೇಶಗಳಿಗೆ ಬಳಸಲಾಗುತ್ತಿದೆ ;

(ಇ) ರಾಷ್ಟ್ರೀಯ ಗ್ರಾಮೀಣ ಮತ್ತು ನಗರ ಆರೋಗ್ಯ ಅಭಿಯಾನದ ಮಾನದಂಡವೇನು ;

(ಈ) ಈ ಅನುದಾನ ಬಳಸಿಕೊಂಡು ಔಷಧಿ ಖರೀದಿಸುವ ಪ್ರಕ್ರಿಯೆಯಲ್ಲಿ ಭಾರಿ ಅವ್ಯವಹಾರ ಹಾಗೂ ಖರೀದಿಯಲ್ಲಿ ೧೩–೨೦ ಪಟ್ಟು ಹೆಚ್ಚಿನ ದರದಲ್ಲಿ ಔಷಧಿ ಖರೀದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದರೆ, ಸರ್ಕಾರ ತೆಗೆದುಕೊಂಡ ಕ್ರಮವೇನು ?

## ರಾಜ್ಯದಲ್ಲಿನ ಆಶ್ರಮ ಶಾಲೆಗಳ ಶಿಕ್ಷಣದ ಗುಣಮಟ್ಟದ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೪೯ (೨೭೦೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ಆಶ್ರಮ ಶಾಲೆಗಳಲ್ಲಿ ವಸತಿ ಸಹಿತ ಉಚಿತ ಶಿಕ್ಷಣ ನೀಡುತ್ತಿದ್ದು, ಉತ್ತಮ ಗುಣಮಟ್ಟದಲ್ಲಿ ಆಶ್ರಮ ಶಾಲೆಗಳು ನಡೆಯುತ್ತಿಲ್ಲದಿರುವುದಕ್ಕೆ ಕಾರಣಗಳೇನು ;

(ಆ) ಆಶ್ರಮ ಶಾಲೆಗಳಲ್ಲಿ ಶಿಕ್ಷಕರ ಕೊರತೆಯಿದ್ದು, ಹುದ್ದೆ ಭರ್ತಿಗೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ಆಶ್ರಮ ಶಾಲೆಗಳಲ್ಲಿ ಉತ್ತಮ ಗುಣಮಟ್ಟದ ಶಿಕ್ಷಣ ಸಿಗುತ್ತಿಲ್ಲ ಎಂಬ ಅಂಶ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ವಸತಿ ನಿಲಯಗಳಲ್ಲಿ ಸ್ವಚ್ಛತೆ ಹಾಗೂ ಮೂಲಭೂತ ಸೌಕರ್ಯಗಳು ಇದ್ದರೂ, ನಿರ್ವಹಣೆ ಮಾಡಲು ನುರಿತ ಶಿಕ್ಷಕರು/ ಮೇಲ್ವಿಚಾರಕರು ಇಲ್ಲದಿರುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಉ) ರಾಜ್ಯದಲ್ಲಿ ಎಷ್ಟು ಆಶ್ರಮ ಶಾಲೆಗಳು ಮುಚ್ಚುವ ಹಂತದಲ್ಲಿದೆ ?

## ಹೆಚ್.ಐ.ವಿ. ನಿಯಂತ್ರಿಸುವ ಕುರಿತು

**ಶ್ರೀ ಎಸ್.ವ್ಹಿ ಸಂಕನೂರ (ಪದವೀಧರರ ಕ್ಷೇತ್ರ):–**

೨೫೫೦ (೨೭೨೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಹೆಚ್.ಐ.ವಿ ರೋಗದಿಂದ ಬಳಲುತ್ತಿರುವ ರೋಗಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಹೆಚ್.ಐ.ವಿ ರೋಗದಿಂದ ಸತ್ತವರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಹೆಚ್.ಐ.ವಿ ರೋಗದಿಂದ ಬಳಲುತ್ತಿರುವ ರೋಗಿಗಳಿಗೆ ಚಿಕಿತ್ಸೆ ನೀಡಲು ಪ್ರಾಥಮಿಕ ಹಾಗೂ ತಾಲ್ಲೂಕು ಆರೋಗ್ಯ ಕೇಂದ್ರಗಳಲ್ಲಿ ಯಾವ ಯಾವ ಸೌಲಭ್ಯ ಒದಗಿಸಲಾಗಿದೆ ; ಹೆಚ್.ಐ.ವಿ ರೋಗ ಗುರುತಿಸಲು ಅನುಸರಿಸುತ್ತಿರುವ ವಿಧಾನಗಳೇನು ;

(ಈ) ಹೆಚ್.ಐ.ವಿ ರೋಗ ನಿಯಂತ್ರಿಸುವಲ್ಲಿ ಯಾವ ಮುಂಜಾಗ್ರತೆ ಕ್ರಮಗಳನ್ನು ಕೈಗೊಂಡಿರುವಿರಿ ? (ವಿವರ ನೀಡುವುದು)

## ಅಂಗನವಾಡಿ ಕೇಂದ್ರಕ್ಕೆ ಮೂಲಭೂತ ಸೌಕರ್ಯ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು):–**

೨೫೫೧ (೨೭೬೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಉತ್ತರ ತಾಲ್ಲೂಕು ಯಲಹಂಕ ಸಮೀಪದ ಮುದುಕದಹಳ್ಳಿ ಗ್ರಾಮದ ಅಂಗನವಾಡಿ ಕೇಂದ್ರದ ಕಟ್ಟಡ ಶಿಥಿಲಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಅಂಗನವಾಡಿ ಕೇಂದ್ರವು ಮೂಲಭೂತ ಸೌಕರ್ಯಗಳ ಕೊರತೆಯನ್ನು ಎದುರಿಸುತ್ತಿರುವುದು ನಿಜವೇ ; ಸದರಿ ಮೂಲಭೂತ ಸೌಕರ್ಯಗಳನ್ನು ಒದಗಿಸಿಕೊಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಅಗ್ನಿ ನಿರೋಧಕ ಸಾಮಗ್ರಿಗಳನ್ನು ಅಳವಡಿಸುವ ಕುರಿತು

**ಶ್ರೀ ಡಿ.ಎಸ್.ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೨೫೫೨ (೨೬೭೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಸರ್ಕಾರಿ ಆಸ್ಪತ್ರೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಆಸ್ಪತ್ರೆಗಳಿಗೆ ಕಳೆದ ೨೦೧೨ ರಿಂದ ಇಲ್ಲಿಯವರೆಗೆ ಫೈಯರ್ ಎಸ್ಟಿಂವಿಷರ್ ಅಳವಡಿಸಲು ಯಾವ ಕಂಪನಿಗೆ ಗುತ್ತಿಗೆ ನೀಡಲಾಗಿದೆ ;

(ಇ) ಗುತ್ತಿಗೆಯ ಷರತ್ತುಗಳನ್ನು ನೀಡುವುದು ಹಾಗೂ ಅಳವಡಿಸಿರುವ ಫೈಯರ್ ಎಸ್ಟಿಂವಿಷರ್ ಸಂಖ್ಯೆ ಎಷ್ಟು ; ಇವು ಯಾವ ಕಂಪನಿಯವು ;

(ಈ) ಒಂದು ಬಾರಿ ತುಂಬಿದ (ರೀಫಿಲ್) ಸಿಲಿಂಡರ್‌ನ ಎಷ್ಟು ದಿನಗಳ ಕಾಲ ಅದನ್ನು ಬದಲಿಸುವ ನಿರ್ಬಂಧವಿರುತ್ತದೆ ;

(ಉ) ಪ್ರತಿ ವರ್ಷ ರೀಫಿಲಿಂಗ್ ಮಾಡಲು ಖರ್ಚಾಗುವ ಹಣವೆಷ್ಟು;

## ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಖಾಲಿ ಇರುವ ಹುದ್ದೆಗಳ ಬಗ್ಗೆ

**ಶ್ರೀ ಡಿ.ಎಸ್.ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೨೫೫೩ (೨೬೬೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಸರ್ಕಾರಿ ಆಸ್ಪತ್ರೆಗಳಲ್ಲಿ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು ; (ತಾಲ್ಲೂಕುವಾರು ಹಾಗೂ ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ೨೦೧೨ ರಿಂದ ೨೦೧೫-೧೬ನೇ ಸಾಲಿನವರೆಗೆ ಸರ್ಕಾರಿ ಆಸ್ಪತ್ರೆಗಳಲ್ಲಿ ಸರಬರಾಜಾದ ಔಷಧಿಗಳ ವಿವರ ನೀಡುವುದು, ಹಾಗೂ ಸಮಯ ಮೀರಿದ (ಎಕ್ಸ್‌ಪೈರಿಯಾದ) ಉಪಯೋಗಿಸದೇ ಉಳಿದ ಔಷಧಿಗಳೆಷ್ಟು ; (ವಿವರ ನೀಡುವುದು)

(ಈ) ಸಮಯ ಮೀರಿದ (ಎಕ್ಸ್‌ಪೈರಿಯಾದ) ಔಷಧಿಗಳ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ?

## ಕಲಾವಿದರಿಗೆ ಪ್ರೋತ್ಸಾಹಧನ ಮಂಜೂರು ಮಾಡುವ ಬಗ್ಗೆ

**ಶ್ರೀ ಡಿ.ಎಸ್.ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):-**

೨೫೫೪ (೨೬೭೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೩-೧೪, ೨೦೧೪-೧೫ನೇ ಸಾಲಿಗೆ ಇಲಾಖೆಗೆ ಬಂದ ಅನುದಾನವೆಷ್ಟು ;

(ಆ) ಇಲಾಖೆಯ ವತಿಯಿಂದ ೨೦೧೫-೧೬ನೇ ಸಾಲಿಗೆ ಸಂಘ ಸಂಸ್ಥೆಗಳಿಗೆ ಬಿಡುಗಡೆಯಾದ ಅನುದಾನದ ಮೊತ್ತವೆಷ್ಟು ; ಅನುದಾನ ಪಡೆದ ಸಂಘ ಸಂಸ್ಥೆಗಳ ಹಾಗೂ ಪದಾಧಿಕಾರಿಗಳ ವಿವರ ನೀಡುವುದು ;

(ಇ) ಅನುದಾನ ಪಡೆದ ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡ, ಹಿಂದುಳಿದ ವರ್ಗ, ಹಾಗೂ ಸಾಮಾನ್ಯ ವರ್ಗದ ಸಂಘ ಸಂಸ್ಥೆಗಳು ಯಾವುವು ; (ಸಂಪೂರ್ಣ ವಿವರ ನೀಡುವುದು)

(ಈ) ಸರ್ಕಾರದಿಂದ ಪ್ರಾಯೋಜನೆಗೊಂಡ ಕಾರ್ಯಕ್ರಮಗಳಲ್ಲಿ ಹಣ ಪಾವತಿಯಾಗದೇ ಬಾಕಿ ಇರುವ ಕಾರ್ಯಕ್ರಮ ಹಾಗೂ ತಂಡಗಳು ಯಾವುವು ; (ವಿವರ ನೀಡುವುದು)

(ಉ) ಈ ಕಲಾವಿದರ ಹಣ ಪಾವತಿಯಾಗಲು ವಿಳಂಬಕ್ಕೆ ಕಾರಣವೇನು, ಇನ್ನೂ ಎಷ್ಟು ದಿನಗಳಲ್ಲಿ ಇವರ ಹಣ ಪಾವತಿ ಮಾಡಲು ಕ್ರಮ ಕೈಗೊಳ್ಳಲಾಗುವುದು ?

## ಎಸ್.ಸಿ.ಪಿ/ಟಿ.ಎಸ್.ಪಿ. ಅಡಿಯಲ್ಲಿ ಪ್ರವಾಸಿ ಟ್ಯಾಕ್ಸಿಗಳನ್ನು ವಿತರಿಸುವ ಕುರಿತು

**ಶ್ರೀ ಡಿ.ಎಸ್.ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೨೫೫೫ (೨೬೬೮) ಮಾನ್ಯ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ನೇ ಸಾಲಿಗೆ ಎಸ್.ಸಿ.ಪಿ/ಟಿ.ಎಸ್.ಪಿ. ಅಡಿಯಲ್ಲಿ ಮೀಸಲಿಟ್ಟ ಹಾಗೂ ಖರ್ಚು ಮಾಡಲಾದ ಮತ್ತು ಬಾಕಿ ಉಳಿದಿರುವ ಹಣ ಎಷ್ಟು ;

(ಆ) ಧನ ಸಹಾಯದಡಿಯಲ್ಲಿ ಟ್ಯಾಕ್ಸಿ ವಿತರಿಸಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಫಲಾನುಭವಿಗಳ ವಿವರ ನೀಡುವುದು)

(ಇ) ೨೦೧೬–೧೭ನೇ ಸಾಲಿಗೆ ಕ್ರಿಯಾ ಯೋಜನೆ ರೂಪಿಸಲಾಗಿದೆಯೇ ? (ರೂಪಿಸಿದ್ದಲ್ಲಿ, ಪ್ರತಿ ನೀಡುವುದು)

## ರಾಜ್ಯದಲ್ಲಿ ಅಪ್ರಾಪ್ತ ವಯಸ್ಸಿನ ಹೆಣ್ಣು ಮಕ್ಕಳಿಗೆ ರಕ್ಷಣೆ ಇಲ್ಲದಿರುವ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೨೫೫೬ (೨೭೦೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ೨ ವರ್ಷಗಳಿಂದ ಅಪ್ರಾಪ್ತ ವಯಸ್ಸಿನ ಹೆಣ್ಣು ಮಕ್ಕಳ ಮೇಲೆ ನಡೆದಿರುವ ಲೈಂಗಿಕ ದೌರ್ಜನ್ಯ ಪ್ರಕರಣಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ದಿನೇ ದಿನೇ ಇಂತಹ ಪ್ರಕರಣಗಳು ಹೆಚ್ಚುತ್ತಿದ್ದು, ಹೆಣ್ಣು ಮಕ್ಕಳ ಸುರಕ್ಷತೆಗೆ ಸರ್ಕಾರ ಕೈಗೊಂಡ ಮುಂಜಾಗ್ರತಾ ಕ್ರಮಗಳೇನು ;

(ಇ) ಬೆಂಗಳೂರು ಸೇರಿದಂತೆ ರಾಜ್ಯದ ಅನೇಕ ನಗರಗಳಲ್ಲಿ ಪುಟ್ಟ ಮುಗ್ಧ ಮಕ್ಕಳನ್ನು ಭಿಕ್ಷಾಟನೆ ದಂಧೆಗೆ ಬಳಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಕಳೆದ ೩ ವರ್ಷಗಳಿಂದ ಇಲಾಖೆ ಇಂತಹ ಎಷ್ಟು ಪ್ರಕರಣಗಳನ್ನು ಪತ್ತೆ ಮಾಡಿದೆ, ಎಷ್ಟು ಮಕ್ಕಳನ್ನು ಈ ದಂಧೆಕೋರರಿಂದ ರಕ್ಷಿಸಲಾಗಿದೆ ;

(ಈ) ಪ್ರತಿ ವರ್ಷ ಎಸ್.ಎಸ್.ಎಲ್.ಸಿ.ಯಲ್ಲಿ ಮೇಲುಗೈ ಸಾಧಿಸುವ ಗ್ರಾಮೀಣ ಪ್ರದೇಶಗಳ ಹೆಣ್ಣು ಮಕ್ಕಳು ಪೋಷಕರ ಒತ್ತಾಯಕ್ಕೆ ಮಣಿದು, ತಮ್ಮ ಮುಂದಿನ ಶೈಕ್ಷಣಿಕ ಭವಿಷ್ಯವನ್ನು ಕಳೆದುಕೊಳ್ಳುತ್ತಿರುವುದನ್ನು ಸರ್ಕಾರ ಮನಗಂಡಿದೆಯೇ ;

(ಉ) ಹಾಗಿದ್ದರೆ, ಗ್ರಾಮೀಣ ಭಾಗದ ಹೆಣ್ಣುಮಕ್ಕಳಿಗೆ ಸುರಕ್ಷೆ ಮತ್ತು ಉನ್ನತ ಶಿಕ್ಷಣ ಕೊಡಿಸಲು ಸರ್ಕಾರ ಹಮ್ಮಿಕೊಂಡಿರುವ ಯೋಜನೆಗಳಾವುವು ? (ವಿವರ ನೀಡುವುದು)

## ಸರ್ಕಾರಿ ಆಸ್ಪತ್ರೆಗಳಲ್ಲಿ ಮೂಲಸೌಕರ್ಯಗಳ ಕೊರತೆ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೨೫೫೭ (೨೭೩೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಮೂಲ ಸೌಕರ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದ ಎಲ್ಲಾ ಜಿಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ರೋಗಿಗಳಿಗೆ ಸಮರ್ಪಕ ಚಿಕಿತ್ಸೆ ಸಿಗದೆ ಪರದಾಡುತ್ತಿರುವುದನ್ನು ಸರ್ಕಾರ ಮನಗಂಡಿದೆಯೇ ;

(ಇ) ತಾಲ್ಲೂಕುಗಳ ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆ ರೋಗಿಗಳಿಗೆ ಹಾಸಿಗೆಗಳ ಕೊರತೆಯಿಂದ ಮತ್ತು ಸರಿಯಾದ ವೈದ್ಯಕೀಯ ಉಪಕರಣಗಳಿಲ್ಲದೆ ಜನ ಪರದಾಡುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ ;

(ಈ) ಜಿಲ್ಲಾ ಮತ್ತು ತಾಲ್ಲೂಕು ಕೇಂದ್ರಗಳ ಆಸ್ಪತ್ರೆಗಳಲ್ಲಿ ವ್ಯಾಪಕ ಭ್ರಷ್ಟಾಚಾರ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಎಲ್ಲಾ ಸಮಸ್ಯೆಗಳನ್ನು ಬಗೆಹರಿಸಲು ರಾಜ್ಯದ ಬಡಜನರಿಗೆ ಸರಿಯಾದ ವೈದ್ಯಕೀಯ ಚಿಕಿತ್ಸೆ ನೀಡಲು ಸರ್ಕಾರ ಯಾವ ರೀತಿಯ ಕ್ರಮ ಕೈಗೊಳ್ಳುವುದು ?

## ಆ್ಯಸಿಡ್ ದಾಳಿ ಸಂತ್ರಸ್ತೆಯರಿಗೆ ಪಿಂಚಣಿ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೨೫೫೮ (೨೭೩೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸ್ಥೈರ್ಯ ಯೋಜನೆ ಅಡಿಯಲ್ಲಿ ಆ್ಯಸಿಡ್ ದಾಳಿಗೆ ತುತ್ತಾದ ಮಹಿಳೆಯರಿಗೆ ಪಿಂಚಣಿ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಹಾಗಿದ್ದರೆ, ಇವರಿಗೆ ಮಾಸಿಕ ನೀಡುವ ಪಿಂಚಣಿಯ ಮೊತ್ತವೆಷ್ಟು ;

(ಇ) ಈ ಸೌಲಭ್ಯವನ್ನು ಪಡೆಯಲು ಅನುಸರಿಸಬೇಕಾದ ಮಾನದಂಡಗಳೇನು ?

## ಬೀದರ್ ಜಿಲ್ಲೆ ಕನ್ನಡ ಭವನ ಕಾಮಗಾರಿಗಳ ಬಗ್ಗೆ

**ಶ್ರೀ ವಿಜಯಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೫೯ (೨೭೧೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗಡಿಭಾಗದ ಬೀದರ್ ಜಿಲ್ಲೆಯಲ್ಲಿ ಕನ್ನಡ ಭವನಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕನ್ನಡ ಭವನಗಳು ಇಲ್ಲದಿರುವ ತಾಲ್ಲೂಕು ಕೇಂದ್ರಗಳಲ್ಲಿ ಕನ್ನಡ ಭವನವನ್ನು ಯಾವಾಗ ಸ್ಥಾಪನೆ ಮಾಡಲಾಗುವುದು ;

(ಇ) ಬೀದರ್ ಜಿಲ್ಲೆಯಲ್ಲಿ ಮಂಜೂರಾಗಿರುವ ಕನ್ನಡ ಭವನ ಕಾಮಗಾರಿ ಯಾವ ಹಂತದಲ್ಲಿದೆ ; ಈ ಕಾಮಗಾರಿಗಳಿಗೆ ಬಿಡುಗಡೆಯಾಗಿರುವ ಅನುದಾನ ಎಷ್ಟು ;

(ಈ) ಗಡಿಭಾಗದ ಔರಾದ್ ತಾಲ್ಲೂಕಿನಲ್ಲಿ ಕನ್ನಡ ಭವನ ನಿರ್ಮಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಬೀದರ್ ಜಿಲ್ಲೆಗೆ ಡಾ॥ ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ನೇರ ಸಾಲದ ಬಗ್ಗೆ

**ಶ್ರೀ ವಿಜಯಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೬೦ (೨೭೧೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಗೆ ಡಾ॥ **ಬಿ.ಆರ್** ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಕಳೆದ ೩ ವರ್ಷಗಳಲ್ಲಿ ಯಾವ ಯಾವ ಉದ್ದೇಶಕ್ಕಾಗಿ ಸಾಲವನ್ನು ವಿತರಿಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಿಂದ ಗಂಗಾ ಕಲ್ಯಾಣ ಯೋಜನೆ ಅಡಿಯಲ್ಲಿ ಕೊರೆದಿರುವ ಮತ್ತು ಕೊರೆಯಲು ಉದ್ದೇಶಿಸಿರುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ

ಇದುವರೆಗೂ ಕೊರೆಯಲಾಗಿರುವ ಕೊಳವೆ ಬಾವಿಗಳೆಷ್ಟು ; ಬಿಡುಗಡೆಯಾಗಿರುವ ಹಣದ ಮೊತ್ತವೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಈ ಜಿಲ್ಲೆಯಲ್ಲಿ ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಸಾಲ ಪಡೆಯಲು ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು ; ಎಷ್ಟು ಸಾಲವನ್ನು ವಿತರಿಸಲಾಗಿದೆ ; ಯಾವ ಉದ್ದೇಶಕ್ಕಾಗಿ ಸಾಲವನ್ನು ನೀಡಲಾಗಿದೆ ? (ತಾಲ್ಲೂಕುವಾರು ವಿವರ ನೀಡುವುದು)

## ಬಿ.ಪಿ.ಎಲ್ ಕಾರ್ಡ್‌ಗಳು ಮತ್ತು ಆಹಾರ ಪದಾರ್ಥಗಳನ್ನು ವಿತರಿಸುವ ಬಗ್ಗೆ

**ಶ್ರೀ ವಿಜಯಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೬೧ (೨೭೧೪) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಬಿ.ಪಿ.ಎಲ್. ಕಾರ್ಡ್ ಕೋರಿ ಬಂದ ಅರ್ಜಿಗಳು ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇದುವರೆಗೆ ತಾಲ್ಲೂಕುವಾರು ವಿತರಿಸಿದ ಬಿ.ಪಿ.ಎಲ್. ಕಾರ್ಡ್‌ಗಳ ಸಂಖ್ಯೆ ಎಷ್ಟು ; ಇನ್ನೂ ವಿತರಣೆಗೆ ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು ;

(ಇ) ಈ ಜಿಲ್ಲೆಯಲ್ಲಿ ಇದುವರೆಗೆ ನೀಡಿರುವ ಬಿ.ಪಿ.ಎಲ್. ಕಾರ್ಡ್‌ಗಳ ಕುಟುಂಬದವರಿಗೆ ಸರಿಯಾಗಿ ಆಹಾರ ಧಾನ್ಯಗಳನ್ನು ವಿತರಿಸಲಾಗುತ್ತಿದೆಯೇ ;

(ಈ) ಆಹಾರ ಧಾನ್ಯವನ್ನು ವಿತರಿಸುವಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೇ, ಇದಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಜಲ ಕ್ರೀಡೆ ಯೋಜನೆ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೬೨ (೨೭೧೫) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರಂಜ ಜಲಾಶಯದ ಬಳಿ ಜಲ ಕ್ರೀಡೆಗಾಗಿ ಪ್ರವಾಸೋದ್ಯಮ ಇಲಾಖೆಯಿಂದ ಯೋಜನೆ ಮಂಜೂರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಜಲ ಕ್ರೀಡೆ ಯೋಜನೆಗಾಗಿ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನ ಎಷ್ಟು; ಬಳಕೆಯಾಗಿರುವ ಅನುದಾನ ಎಷ್ಟು;

(ಇ) ಯಾವ ಸಂಸ್ಥೆಗೆ ಜಲ ಕ್ರೀಡೆಗಾಗಿ ಅನುದಾನ ಬಿಡುಗಡೆಯಾಗಿದೆ ?

## ವಿವಿಧ ಪಡಿತರ ಚೀಟಿದಾರರು ಮತ್ತು ಸೌಲಭ್ಯಗಳು

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು):–**

೨೫೬೩ (೨೬೬೪) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಜನಸಂಖ್ಯೆ ಪ್ರಮಾಣವೆಷ್ಟು; ಒಟ್ಟು ಕುಟುಂಬಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಆ ಕುಟುಂಬಗಳ ಪೈಕಿ ಎಷ್ಟು ಕುಟುಂಬಗಳು ಎ.ಪಿ.ಎಲ್. ಬಿ.ಪಿ.ಎಲ್. ಮತ್ತು ಅಂತ್ಯೋದಯ ವರ್ಗಕ್ಕೆ ಸೇರಿರುತ್ತಾರೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಅವುಗಳಲ್ಲಿ ಪಡಿತರ ಚೀಟಿದಾರರಿಗೆ ಪ್ರತಿ ತಿಂಗಳೂ ನೀಡುವ ಪಡಿತರ ಸೌಲಭ್ಯಗಳೇನು ; ಯಾವ ಪ್ರಮಾಣದಲ್ಲಿ, ಯಾವ ದರದಲ್ಲಿ ಪಡಿತರವನ್ನು ಒದಗಿಸಲಾಗುತ್ತಿದೆ ; (ವಿವರ ನೀಡುವುದು)

(ಈ) ರಾಜ್ಯದಲ್ಲಿ ಖೊಟ್ಟಿ ಪಡಿತರ ಚೀಟಿಗಳನ್ನು ಗುರುತಿಸಲಾಗಿದೆಯೇ ; ಇದ್ದಲ್ಲಿ, ಅವುಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಉ) ಖೊಟ್ಟಿ ಪಡಿತರ ಚೀಟಿ ವಿತರಣೆಗೆ ಕಾರಣಕರ್ತರು ಯಾರು ; ಅವರುಗಳ ಮೇಲೆ ತೆಗೆದುಕೊಂಡಿರುವ ಕ್ರಮಗಳೇನು ?

## ಅಲ್ಟ್ರಾ ಸ್ಕ್ಯಾನಿಂಗ್ ಸೆಂಟರ್‌ಗಳು ಮತ್ತು ಅವುಗಳ ನಿಯಂತ್ರಣ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು):–**

೨೫೬೪ (೨೬೬೧+೨೬೬೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಲ್ಟ್ರಾ ಸ್ಕ್ಯಾನಿಂಗ್ ಸೆಂಟರ್ (Ultra Scanning Centre)ಗಳ ಸಂಖ್ಯೆ ಎಷ್ಟು; ಎಲ್ಲೆಲ್ಲಿ ಕಾರ್ಯನಿರ್ವಹಿಸುತ್ತಿವೆ (ಸರ್ಕಾರಿ/ಖಾಸಗಿ ಮಾಹಿತಿ ನೀಡುವುದು)

(ಆ) ಯಾವ ಯಾವ ಸ್ಕ್ಯಾನಿಂಗ್ ಸೆಂಟರ್‌ನಲ್ಲಿ ಎಷ್ಟೆಷ್ಟು ಸ್ಕ್ಯಾನಿಂಗ್ ಮಷಿನ್‌ಗಳಿವೆ ; (ಸೆಂಟರ್‌ವಾರು ಮಾಹಿತಿ ನೀಡುವುದು)

(ಇ) ಸ್ಕ್ಯಾನಿಂಗ್ ಸೆಂಟರ್‌ಗಳನ್ನು ನಿಯಂತ್ರಿಸುವ ಅಧಿಕಾರ ಯಾರಿಗೆ ನೀಡಲಾಗಿದೆ ;

(ಈ) ಈ ಸ್ಕ್ಯಾನಿಂಗ್ ಸೆಂಟರ್‌ಗಳಲ್ಲಿ ಯಾರು ಮತ್ತು ಯಾವ ಯಾವ ತಪಾಸಣೆ ಮಾಡಲು ಕಾನೂನಿನಲ್ಲಿ ಅವಕಾಶವಿದೆ ;

(ಉ) ನಿಯಮಗಳನ್ನು ಮೀರಿ ನಡೆದುಕೊಳ್ಳುವ ಸ್ಕ್ಯಾನಿಂಗ್ ಸೆಂಟರ್‌ಗಳ ಮೇಲೆ ಕ್ರಮ ಜರುಗಿಸಲು ಯಾರಿಗೆ ಅಧಿಕಾರವಿರುತ್ತದೆ ;

(ಊ) ಯಾವ ಯಾವ ಕೇಂದ್ರಗಳಲ್ಲಿ ಕಾನೂನುಬಾಹಿರ ಕೃತ್ಯವೆಸಗಲಾಗಿದೆ ; ಅವು ಯಾವುವು ; ಅವುಗಳ ಮೇಲೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಲೈಂಗಿಕ ಅಲ್ಪಸಂಖ್ಯಾತರಿಗೆ ಸಾಲ ಸೌಲಭ್ಯಗಳು

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು):–**

೨೫೬೫ (೨೬೬೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಲೈಂಗಿಕ ಅಲ್ಪಸಂಖ್ಯಾತರ ಒಟ್ಟು ಸಂಖ್ಯೆ ಎಷ್ಟು ;

(ಆ) ಯಾವ ಯಾವ ತಾಲ್ಲೂಕಿನಲ್ಲಿ ಎಷ್ಟು ಜನ ಲೈಂಗಿಕ ಅಲ್ಪಸಂಖ್ಯಾತರು ವಾಸಿಸುತ್ತಿದ್ದಾರೆ ;

(ಇ) ಅವರುಗಳಿಗಾಗಿ ಸರ್ಕಾರ ರೂಪಿಸಿರುವ ಕಾರ್ಯಕ್ರಮಗಳು ಯಾವುವು ; (ವಿವರ ನೀಡುವುದು)

(ಈ) ಆ ಕಾರ್ಯಕ್ರಮಗಳಡಿ ಎಷ್ಟು ಜನ ಲೈಂಗಿಕ ಅಲ್ಪಸಂಖ್ಯಾತರಿಗೆ ಸೌಲಭ್ಯಗಳನ್ನು ಒದಗಿಸಲಾಗಿದೆ ? (ವಿವರ ನೀಡುವುದು)

## ಲಿಂಗಾನುಪಾತದ ಸಮತೋಲನ ಕಾಪಾಡುವಿಕೆ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು):–**

೨೫೬೬ (೨೬೬೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಯಾವ ಯಾವ ತಾಲ್ಲೂಕುಗಳಲ್ಲಿ ಲಿಂಗಾನುಪಾತದ ರೀತ್ಯಾ, ಹೆಣ್ಣು ಮತ್ತು ಗಂಡು ಮಕ್ಕಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಹೆಣ್ಣು ಮತ್ತು ಗಂಡಿನ ಲಿಂಗಾನುಪಾತ ಏರು–ಪೇರಾಗಲು ಕಾರಣಗಳೇನು ; ಇದರ ಬಗ್ಗೆ ಅಧ್ಯಯನ ನಡೆಸಲಾಗಿದೆಯೇ ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಲಿಂಗಾನುಪಾತದ ಸಮತೋಲನ ಕಾಪಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಕಲಬುರಗಿ ಜಿಲ್ಲೆಯ ಪ್ರಾಥಮಿಕ ಆರೋಗ್ಯ ಕೇಂದ್ರಗಳು

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು):–**

೨೫೬೭ (೨೬೫೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಜಿಲ್ಲೆಯಲ್ಲಿ ಒಟ್ಟು ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳಿವೆ ; (ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ಇಂತಹ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರುವ ಹುದ್ದೆಗಳು ಎಷ್ಟು; (ವೃಂದವಾರು ಮಾಹಿತಿ ನೀಡುವುದು)

(ಇ) ಖಾಲಿ ಇರುವ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ಒದಗಿಸುವುದು)

## ಕಲಬುರಗಿ ಜಿಲ್ಲೆಯ ಬಿ.ಪಿ.ಎಲ್. ಕಾರ್ಡ್‌ಗಳ ಸಂಬಂಧಿಸಿದಂತೆ

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು):–**

೨೫೬೮ (೨೭೨೯) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಕಲಬುರಗಿ ಜಿಲ್ಲೆಯಲ್ಲಿ ಬಿ.ಪಿ.ಎಲ್ ಕಾರ್ಡ್‌ಗೆ ಕೋರಿ ಬಂದ ಅರ್ಜಿಗಳ ಸಂಖ್ಯೆ ಎಷ್ಟು ;

(ಆ) ಇದುವರೆಗೂ ವಿತರಿಸಿದ ಬಿ.ಪಿ.ಎಲ್ ಕಾರ್ಡ್‌ಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ಒದಗಿಸುವುದು)

(ಇ) ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು; ಸೂಕ್ತ ಕಾರಣ ತಿಳಿಸುವುದು ; ಯಾವ ಕಾಲಮಿತಿಯೊಳಗೆ ಕಾರ್ಡ್‌ಗಳನ್ನು ವಿತರಿಸಲಾಗುವುದು ? (ವಿವರ ನೀಡುವುದು)

## ನ್ಯಾಯಬೆಲೆ ಅಂಗಡಿಗಳು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೮೯ (೨೬೫೫) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ನ್ಯಾಯಬೆಲೆ ಅಂಗಡಿಗಳ ಕೊರತೆಯಿಂದಾಗಿ ಸಾರ್ವಜನಿಕರಿಗೆ ಉಂಟಾಗುತ್ತಿರುವ ತೊಂದರೆಯ ಕುರಿತು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಎಷ್ಟು ನ್ಯಾಯಬೆಲೆ ಅಂಗಡಿಗಳ ಅವಶ್ಯಕತೆ ಇದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಹೊಸ ನ್ಯಾಯಬೆಲೆ ಅಂಗಡಿಗಳನ್ನು ಪ್ರಾರಂಭಿಸಲು ಇರುವ ಮಾನದಂಡಗಳೇನು ; ಈ ಮೂರು ಜಿಲ್ಲೆಗಳಲ್ಲಿ ನ್ಯಾಯಬೆಲೆ ಅಂಗಡಿ ಪ್ರಾರಂಭಕ್ಕೆ ಕೋರಿ ಈವರೆಗೆ ಎಷ್ಟು ಅರ್ಜಿಗಳು ಸ್ವೀಕೃತಿಯಾಗಿವೆ ; (ಅರ್ಜಿದಾರರ ತಾಲ್ಲೂಕುವಾರು ಪೂರ್ಣ ವಿವರ ನೀಡುವುದು)

(ಇ) ಈ ಅರ್ಜಿಗಳು ಹಾಲಿ ಯಾವ ಮಟ್ಟದಲ್ಲಿವೆ ; ಈ ಪ್ರಕ್ರಿಯೆಯನ್ನು ಯಾವಾಗ ಪೂರ್ಣಗೊಳಿಸಲು ಯೋಜಿಸಲಾಗಿದೆ ? (ಪೂರ್ಣ ಮಾಹಿತಿ ನೀಡುವುದು)

## ಸಮಾಜ ಕಲ್ಯಾಣ ಇಲಾಖೆಯ ಸಮುದಾಯ ಭವನಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೭೦ (೨೬೫೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಿಂದ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಯಾವ ಸಮುದಾಯ ಭವನಗಳ ನಿರ್ಮಾಣಕ್ಕೆ ಅನುದಾನ ಬಿಡುಗಡೆ ಮಾಡಲಾಗಿದೆ ; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಆ) ಈ ಜಿಲ್ಲೆಗಳಲ್ಲಿ ಹಣದ ಕೊರತೆಯಿಂದಾಗಿ ಅರ್ಧದಲ್ಲಿಯೇ ಸ್ಥಗಿತಗೊಂಡಿರುವ ಸಮುದಾಯ ಭವನಗಳೆಷ್ಟು ; (ತಾಲ್ಲೂಕುವಾರು ಪೂರ್ಣ ವಿವರ ನೀಡುವುದು)

(ಇ) ಈ ಜಿಲ್ಲೆಗಳಲ್ಲಿ ಸಮುದಾಯ ಭವನ ಪ್ರಾರಂಭವಾಗದೇ ಇರಲು ಕಾರಣಗಳೇನು ; (ತಾಲ್ಲೂಕುವಾರು ಪೂರ್ಣ ವಿವರ ಒದಗಿಸುವುದು)

(ಈ) ಈ ಜಿಲ್ಲೆಗಳಲ್ಲಿ ಅನುದಾನದ ಕೊರತೆಯಿಂದಾಗಿ ಸ್ಥಗಿತಗೊಂಡ ಕಾಮಗಾರಿಗಳಿಗೆ ಅನುದಾನ ನೀಡದೇ ಹೊಸ ಸಮುದಾಯ ಭವನಗಳಿಗೆ ಅನುದಾನ ಮಂಜೂರು ಮಾಡಲಾಗಿದೆಯೇ ; ಇದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕಾಮಗಾರಿಗಳನ್ನು ಪೂರ್ಣಗೊಳಿಸಲು ಸರ್ಕಾರ ಕೈಗೊಂಡಿರುವ ಅಗತ್ಯ ಕ್ರಮಗಳೇನು ? (ಪೂರ್ಣ ಮಾಹಿತಿ ನೀಡುವುದು)

## ಡೆಂಗ್ಯೂ, ಚಿಕನ್‌ಗುನ್ಯ ರೋಗಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೭೧ (೨೬೫೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಡೆಂಗ್ಯೂ, ಚಿಕನ್‌ಗುನ್ಯ ಜ್ವರ ಕಾಣಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಎಷ್ಟು ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ ; ಇವುಗಳಿಗೆ ಚಿಕಿತ್ಸೆ ನೀಡಲು ಕೈಗೊಳ್ಳಲಾಗುವ ಕ್ರಮಗಳೇನು ; (ಪೂರ್ಣ ವಿವರ ನೀಡುವುದು)

(ಆ) ಈ ಜ್ವರಗಳ ಚಿಕಿತ್ಸೆಗೆ ಬೇಕಾಗಿರುವ ಎಲ್ಲಾ ರೀತಿಯ ವ್ಯವಸ್ಥೆ ಹಾಗೂ ಔಷಧಿಗಳು ಸ್ಥಳೀಯವಾಗಿ ಲಭ್ಯತೆ ಇವೆಯೇ ; ಅವುಗಳು ಯಾವುವು ; (ತಾಲ್ಲೂಕುವಾರು ಪೂರ್ಣ ವಿವರ ನೀಡುವುದು)

(ಇ) ಈ ಜಿಲ್ಲೆಗಳ ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರಿಲ್ಲದೆ ಸಾರ್ವಜನಿಕರು ತುಂಬಾ ತೊಂದರೆಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ವೈದ್ಯರುಗಳನ್ನು ತುರ್ತಾಗಿ ನಿಯುಕ್ತಿಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಈ) ಡೆಂಗ್ಯೂ ಜ್ವರ ಅಲ್ಲದೇ ಇನ್ನಿತರ ಮಾರಣಾಂತಿಕ ರೋಗ ಆವರಿಸದಂತೆ ಆರೋಗ್ಯ ಇಲಾಖೆ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಸಮಾಜ ಕಲ್ಯಾಣ ಇಲಾಖಾ ಅಧೀನದ ಶಾಲೆಗಳು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೭೨ (೨೬೫೯) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಸಮಾಜ ಕಲ್ಯಾಣ ಇಲಾಖಾ ಅಧೀನದಲ್ಲಿರುವ ಆಶ್ರಮ ಶಾಲೆಗಳು, ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು, ಅಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆಗಳು, ಏಕಲವ್ಯ ಮಾದರಿ ವಸತಿ ಶಾಲೆಗಳಾವುವು ; (ತಾಲ್ಲೂಕುವಾರು, ವಿಳಾಸವಾರು ಪೂರ್ಣ ಮಾಹಿತಿ ನೀಡುವುದು)

(ಆ) ಆಶ್ರಮ/ಮೊರಾರ್ಜಿ ದೇಸಾಯಿ/ಅಟಲ್ ಬಿಹಾರಿ ವಾಜಪೇಯಿ/ ಏಕಲವ್ಯ ಮಾದರಿ ವಸತಿ ಶಾಲೆಗಳಲ್ಲಿನ ಮಕ್ಕಳಿಗೆ ಎಲ್ಲಾ ಸವಲತ್ತುಗಳನ್ನು ಉಚಿತವಾಗಿ ನೀಡುತ್ತಿದೆಯೇ ; ನೀಡುತ್ತಿದ್ದಲ್ಲಿ, ಆ ಸೌಲಭ್ಯಗಳು ಯಾವುವು ; (ಪೂರ್ಣ ವಿವರ ನೀಡುವುದು)

(ಇ) ಇಲ್ಲವಾದಲ್ಲಿ, ಆ ಸೌಲಭ್ಯಗಳನ್ನು ನೀಡಲು ಈವರೆಗೆ ಕೈಗೊಂಡಿರುವ ಕ್ರಮಗಳೇನು ; ಹಾಗೂ ಇದು ಯಾವಾಗಿನಿಂದ ಜಾರಿಗೆ ಬರುತ್ತದೆ ?

## ಪ್ರವಾಸೋದ್ಯಮ ಸ್ಥಳಗಳು ಹಾಗೂ ಯಾತ್ರಿ ನಿವಾಸಗಳು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೭೩ (೨೬೫೯) ಮಾನ್ಯ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿರುವ ಪ್ರವಾಸೋದ್ಯಮ ಸ್ಥಳಗಳಾವುವು ; ಎಷ್ಟು ಯಾತ್ರಿ ನಿವಾಸಗಳು ಇವೆ ; ಅವುಗಳ ಅಭಿವೃದ್ಧಿಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆಯೇ ; ಅವುಗಳು ಯಾವುದು ; ಯಾವಾಗ ಅಭಿವೃದ್ಧಿ ಕಾರ್ಯಕೈಗೊಳ್ಳಲಾಗುವುದು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಪ್ರವಾಸೋದ್ಯಮ ಸ್ಥಳಗಳಲ್ಲಿ ಸ್ವಚ್ಛತೆ ಕಾಪಾಡಲು ಹಾಗೂ ಸೂಕ್ತ ರಕ್ಷಣೆಗಾಗಿ ಯಾವ ಯಾವ ಕ್ರಮ ಕೈಗೊಳ್ಳಲಾಗಿದೆ ; ಈ ಪ್ರವಾಸಿ ಸ್ಥಳಗಳಲ್ಲಿ ಸಾರ್ವಜನಿಕ ಶೌಚಾಲಯದ ವ್ಯವಸ್ಥೆಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅಂತಹ ಸ್ಥಳಗಳಾವುವು ;

(ಇ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ಅಭಿವೃದ್ಧಿ ಕಾರ್ಯಗಳಿಗೆ ಸಂಬಂಧಿಸಿದಂತೆ ಯಾವ ಯಾವ ಲೆಕ್ಕಶೀರ್ಷಿಕೆಯಡಿಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಅನುಮೋದನೆ ನೀಡಿ ಅನುದಾನ ಬಿಡುಗಡೆ ಮಾಡಲಾಗಿದೆ ; (ವಿವರ ನೀಡುವುದು)

(ಈ) ಈ ಜಿಲ್ಲೆಗಳಲ್ಲಿ ಯಾವ ಯಾವ ಕಾರ್ಯಕ್ರಮಗಳಿಗಾಗಿ ಅನುದಾನ ನಿಗಧಿಪಡಿಸಲಾಗಿದೆ ; ಹಾಗೂ ಅನುಷ್ಠಾನಗೊಳಿಸಿದ ಕಾರ್ಯಕ್ರಮಗಳಾವುವು ? (ತಾಲ್ಲೂಕುವಾರು ಪೂರ್ಣ ವಿವರ ನೀಡುವುದು)

## ಮೈಸೂರಿನಲ್ಲಿ ಜಿಲ್ಲಾ ಆಸ್ಪತ್ರೆಯ ಸ್ಥಾಪನೆ ಬಗ್ಗೆ

**ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೭೪ (೨೭೦೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರಿನಲ್ಲಿ ಜಿಲ್ಲಾ ಆಸ್ಪತ್ರೆ ಸ್ಥಾಪನೆಗೆ ೬೦ ಕೋಟಿ ರೂ. ಒದಗಿಸುವ ಬಗ್ಗೆ ಆಯವ್ಯಯದಲ್ಲಿ ಘೋಷಣೆ ಮಾಡಲಾಗಿದ್ದು, ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು ; ಅನುದಾನ ಬಿಡುಗಡೆ ಆಗಿದೆಯೇ ; ಟೆಂಡರ್ ಕರೆಯಲಾಗಿದೆಯೇ ; (ವಿವರ ಒದಗಿಸುವುದು)

(ಆ) ಈ ಜಿಲ್ಲಾ ಆಸ್ಪತ್ರೆಯ ಸ್ಥಾಪನೆಗೆ ಗುರುತಿಸಿರುವ ಸ್ಥಳ ಯಾವುದು ; ಮೈಸೂರು ದಕ್ಷಿಣ ಭಾಗದಲ್ಲಿ ಒಂದೂ ಸರ್ಕಾರಿ ಆಸ್ಪತ್ರೆಯಿಲ್ಲದೆ ಜನ ಸಾಮಾನ್ಯರಿಗೆ ತೊಂದರೆ ಆಗಿರುವುದರಿಂದ ಈ ಜಿಲ್ಲಾ ಆಸ್ಪತ್ರೆಯನ್ನು ಜೆ.ಪಿ. ನಗರ ಅಥವಾ ಶ್ರೀರಾಮಪುರ ಅಥವಾ ಬೋಗಾದಿ ಕಡೆಯಲ್ಲಿ ಸ್ಥಾಪಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ?

## ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ವೈದ್ಯರ ಕೊರತೆ

**ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೭೫ (೨೭೦೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿರುವ ಜಿಲ್ಲಾ ಆಸ್ಪತ್ರೆಗಳು, ತಾಲ್ಲೂಕು ಆಸ್ಪತ್ರೆಗಳು, ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು; ಈ ಆಸ್ಪತ್ರೆಗಳು ಮತ್ತು ಪಿ.ಎಚ್.ಸಿ.ಗಳಿಗೆ ಮಂಜೂರಾಗಿರುವ ವೈದ್ಯರು, ತಜ್ಞ ವೈದ್ಯರು, ಫಾರ್ಮಾಸಿಸ್ಟ್, ಎ.ಎನ್.ಎಮ್. ಲ್ಯಾಬ್, ಎಕ್ಸರೇ, ಸ್ಕ್ಯಾನಿಂಗ್, ಫಿಜಿಯೋಥೆರಪಿ, ಮೊದಲಾದ ಟೆಕ್ನೀಷಿಯನ್‌ಗಳು, ಆರೋಗ್ಯ ಪರಿವೀಕ್ಷಕರು, ಗ್ರೂಪ್ ಡಿ, ಸ್ವಚ್ಛತಾ ಸಿಬ್ಬಂದಿ ವರ್ಗದ ಸಂಖ್ಯೆ ಎಷ್ಟು; ಈ ಹುದ್ದೆಗಳ ಪೈಕಿ ಭರ್ತಿಯಾಗಿರುವ ಮತ್ತು ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ಈ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡಿರುವ ಕ್ರಮಗಳೇನು ; ಪೂರ್ಣ ಪ್ರಮಾಣದಲ್ಲಿ ಸಿಬ್ಬಂದಿಯನ್ನು ಭರ್ತಿ ಮಾಡಿ ಜನರಿಗೆ ಆರೋಗ್ಯ ಸೇವೆಯನ್ನು ಒದಗಿಸಲು ಕ್ರಮ ಜರುಗಿಸಲಾಗುವುದೇ ;

(ಇ) ಈ ಎಲ್ಲಾ ಆಸ್ಪತ್ರೆಗಳು ಮತ್ತು ಆರೋಗ್ಯ ಕೇಂದ್ರಗಳಿಗೆ ಕಾಲ ಕಾಲಕ್ಕೆ ಅಗತ್ಯವಾದ ಔಷಧ ಸಾಮಗ್ರಿಗಳು ನಿಯಮಿತವಾಗಿ ಸರಬರಾಜಾಗಿ, ಬಡ ರೋಗಿಗಳಿಗೆ ತಲುಪುತ್ತಿದೆಯೇ ; ಎಷ್ಟು ಆಸ್ಪತ್ರೆಗಳಿಂದ ಮತ್ತು ಆರೋಗ್ಯ ಕೇಂದ್ರಗಳಿಂದ ಬೇಡಿಕೆ ಬಂದಿರುತ್ತದೆ ; ಮಾಹಿತಿ ನೀಡುವುದು ?

## ಬಾಲಮಂದಿರ ಮತ್ತು ಉಜ್ವಲ ಕೇಂದ್ರಗಳಲ್ಲಿ ದಾಖಲಾಗಿರುವ ಹೆಣ್ಣು ಮಕ್ಕಳ ಕುರಿತು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು):–**

೨೫೭೬ (೨೭೪೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಬಾಲಕಿಯರ ಬಾಲಮಂದಿರ ಮತ್ತು ಉಜ್ವಲ ಕೇಂದ್ರಗಳಲ್ಲಿ ಪ್ರಸ್ತುತ ದಾಖಲಾಗಿರುವವರ ಸಂಖ್ಯೆ ಎಷ್ಟು ;

(ಆ) ಸದರಿ ಕೇಂದ್ರಗಳಲ್ಲಿ ಹೆಣ್ಣು ಮಕ್ಕಳ ಸುರಕ್ಷತೆಗಾಗಿ ತೆಗೆದುಕೊಂಡಿರುವ ಕ್ರಮಗಳಾವುವು ; (ಸಂಪೂರ್ಣ ವಿವರ ನೀಡುವುದು)

(ಇ) ರಾಜ್ಯದಲ್ಲಿ ಇರುವ ಉಜ್ವಲ ಕೇಂದ್ರಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ಸದರಿ ಬಾಲಮಂದಿರಗಳಿಂದ ಓಡಿಹೋದ ಮಕ್ಕಳ ಸಂಖ್ಯೆ ಎಷ್ಟು ?

## ನಾಪತ್ತೆಯಾದ ಮಹಿಳೆ ಮತ್ತು ಮಕ್ಕಳ ಕುರಿತು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು):–**

೨೫೭೭ (೨೭೪೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ಹತ್ತು ವರ್ಷಗಳಲ್ಲಿ ನಾಪತ್ತೆಯಾದ ಮಹಿಳೆ ಮತ್ತು ಮಕ್ಕಳ ಸಂಖ್ಯೆ ಎಷ್ಟು; (ಜಿಲ್ಲಾವಾರು, ವರ್ಷಾವಾರು ವಿವರ ನೀಡುವುದು)

(ಆ) ಸದರಿ ಮಹಿಳೆಯರಲ್ಲಿ ವೇಶ್ಯಾವಾಟಿಕೆ ಜಾಲಕ್ಕೆ ಬಿದ್ದವರ ಸಂಖ್ಯೆ ಎಷ್ಟು; ಹಾಗೂ ಈ ಮಹಿಳೆಯರಲ್ಲಿ ಎಷ್ಟು ಜನರಿಗೆ ಪುನರ್ವಸತಿ ಕಲ್ಪಿಸಲಾಗಿದೆ ? (ಸಂಪೂರ್ಣ ವಿವರ ನೀಡುವುದು)

## ಬಾಲ್ಯ ವಿವಾಹ ಅತ್ಯಾಚಾರ ಹಾಗೂ ಮಾರಾಟ ಜಾಲಕ್ಕೆ ಸಿಲುಕಿದ ಮಹಿಳೆಯರ ಕುರಿತು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು):–**

೨೫೭೮ (೨೭೪೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಬಾಲ್ಯ ವಿವಾಹ, ಅತ್ಯಾಚಾರ ಹಾಗೂ ಮಾರಾಟ ಜಾಲಕ್ಕೆ ಸಿಲುಕಿ ವಾಪಸ್ಸಾದ ಮಹಿಳೆಯರ ಪ್ರಕರಣಗಳೆಷ್ಟು; (ಜಿಲ್ಲಾವಾರು ವರ್ಷಾವಾರು ವಿವರ ನೀಡುವುದು)

(ಆ) ಸದರಿ ಪ್ರಕರಣಗಳಲ್ಲಿ ಎಷ್ಟು ಜನರಿಗೆ ಪುರ್ನವಸತಿ ಕಲ್ಪಿಸಲಾಗಿದೆ ; (ಜಿಲ್ಲಾವಾರು ವರ್ಷಾವಾರು ವಿವರ ನೀಡುವುದು)

(ಇ) ಕರ್ನಾಟಕ ರಾಜ್ಯದಲ್ಲಿ ಕಳೆದ ೧೦ ವರ್ಷಗಳಲ್ಲಿ ಎಷ್ಟು ಬಾಲ್ಯ ವಿವಾಹಗಳು ನಡೆದಿವೆ; ಹಾಗೂ ಬಾಲ್ಯ ವಿವಾಹದ ಎಷ್ಟು ಪ್ರಕರಣಗಳು ದಾಖಲಾಗಿವೆ ;

(ಈ) ಇದರಲ್ಲಿ ಎಷ್ಟು ಜನರಿಗೆ ಶಿಕ್ಷೆಯಾಗಿದೆ ; ಮತ್ತು ಈ ಸಂಬಂಧ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಸಾಂತ್ವನ ಕೇಂದ್ರಗಳಲ್ಲಿ ನೆರವು ಕೋರಿ ಬಂದ ಅರ್ಜಿಗಳು ಹಾಗೂ ಆಸಿಡ್ ದಾಳಿಗೊಳಗಾದ ಮಹಿಳೆಯರ ಕುರಿತು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು):–**

೨೫೭೯ (೨೭೪೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಸಾಂತ್ವನ ಕೇಂದ್ರಗಳಲ್ಲಿ ವೇಶ್ಯಾವಾಟಿಕೆ ಹಾಗೂ ಮಾರಾಟ ಜಾಲಕ್ಕೆ ಸಿಲುಕಿ, ನೆರವು ಕೋರಿ ಬಂದ ಅರ್ಜಿಗಳೆಷ್ಟು; ಹಾಗೂ ಸದರಿ ಅರ್ಜಿದಾರರಲ್ಲಿ ಎಷ್ಟು ಜನರಿಗೆ ಯಾವ ರೀತಿಯ ನೆರವು ನೀಡಲಾಗಿದೆ ; (ಜಿಲ್ಲಾವಾರು, ವರ್ಷವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಆಸಿಡ್ ದಾಳಿಗೆ ಒಳಗಾಗಿರುವ ಮಹಿಳೆಯರೆಷ್ಟು; ಅವರಲ್ಲಿ ಎಷ್ಟು ಜನರಿಗೆ ಯಾವ ರೀತಿಯಾಗಿ ಪುನರ್ವಸತಿ ಕಲ್ಪಿಸಲಾಗಿದೆ ? (ಸಂಪೂರ್ಣ ವಿವರ ನೀಡುವುದು)

## ರಾಜ್ಯದಲ್ಲಿರುವ ದತ್ತು ಕೇಂದ್ರಗಳು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು):–**

೨೫೮೦ (೨೭೪೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ರಾಜ್ಯದಲ್ಲಿ ದಾಖಲಾದ ದತ್ತು ಕೇಂದ್ರಗಳೆಷ್ಟು; ಇದುವರೆಗೆ ಎಷ್ಟು ಮಕ್ಕಳನ್ನು ಕಾನೂನುಬದ್ಧವಾಗಿ ದತ್ತು ನೀಡಲಾಗಿದೆ ? (ಸಂಪೂರ್ಣ ವಿವರ ನೀಡುವುದು)

## ಸಾಂಕ್ರಾಮಿಕ ರೋಗದ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೮೧ (೨೭೫೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮಳೆಗಾಲ ಪ್ರಾರಂಭವಾಗುತ್ತಿದ್ದಂತೆ ಮಲೇರಿಯಾ ಡೆಂಗ್ಯೂ ಚಿಕುನ್‌ಗುನ್ಯಾ ಕಾಲರಾ ಕಾಣಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ವಿವರ ನೀಡುವುದು ;

(ಆ) ಉದ್ಯಾನನಗರಿ ಬೆಂಗಳೂರಿನಲ್ಲಿ ಕಸದ ರಾಶಿಯಲ್ಲಿ ಮಳೆ ನೀರು ನಿಂತು ಗಬ್ಬುವಾಸನೆ, ಗಲೀಜು ಉಂಟಾಗಿ, ಈ ರೋಗಗಳು ಹರಡಲು ಮುಖ್ಯ ಕಾರಣವಾಗಿರುವುದು ನಿಜವೇ ; ಇದನ್ನು ತಡೆಯಲು ಸರ್ಕಾರ ಕೈಗೊಂಡ ಕ್ರಮವೇನು ;

(ಇ) ಈ ಸಾಂಕ್ರಾಮಿಕ ರೋಗಗಳ ಲಕ್ಷಣವೇನು ; ಇದನ್ನು ಸಾರ್ವಜನಿಕರಿಗೆ ಮನವರಿಕೆ ಮಾಡಿ ಕೊಡಲು ಸರ್ಕಾರ ಕೈಗೊಂಡ ಕ್ರಮವೇನು ;

(ಈ) ಈ ರೋಗಗಳನ್ನು ತಡೆಗಟ್ಟಲು ಜಿಲ್ಲಾ ಮತ್ತು ತಾಲ್ಲೂಕು ಸರ್ಕಾರಿ ಆಸ್ಪತ್ರೆಗಳಲ್ಲಿ ಸೂಕ್ತ ವ್ಯವಸ್ಥೆ ಕಲ್ಪಿಸಲಾಗಿದೆಯೇ ; (ವಿವರ ನೀಡುವುದು)

(ಉ) ರಾಜ್ಯದಲ್ಲಿ ಈ ವರ್ಷ ಈ ರೋಗಗಳಿಗೆ ತುತ್ತಾಗಿ ಮೃತಪಟ್ಟವರ ಸಂಖ್ಯೆ ಎಷ್ಟು ? (ಜಿಲ್ಲಾವಾರು ವಿವರ ನೀಡುವುದು)

## ಹಾಸ್ಟೆಲ್‌ಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೮೨ (೨೭೫೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ಬಾಲಕ/ಬಾಲಕಿಯರ ಒಟ್ಟು ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು; ಇವುಗಳಲ್ಲಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು;

(ಆ) ಈ ಪೈಕಿ ಎಷ್ಟು ಹಾಸ್ಟೆಲ್‌ಗಳು ಸ್ವಂತ ಕಟ್ಟಡದಲ್ಲಿ ಮತ್ತು ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿವೆ;

(ಇ) ಬಾಡಿಗೆ ನೀಡದೇ ಸ್ಥಳಾಂತರವಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು;

(ಈ) ವಿದ್ಯಾರ್ಥಿಗಳಿಗೆ ಸಮರ್ಪಕ ಮೂಲ ಸೌಕರ್ಯ ಹಾಗೂ ವಿದ್ಯಾರ್ಥಿಗಳ ಆರೋಗ್ಯ ವೃದ್ಧಿಗಾಗಿ ಸರ್ಕಾರ ಕೈಗೊಂಡಿರುವ ಕ್ರಮವೇನು;

(ಉ) ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿರುವ ಹಾಸ್ಟೆಲ್‌ಗಳಿಗೆ ಸ್ವಂತ ಕಟ್ಟಡ ನಿರ್ಮಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ತುಮಕೂರು ಜಿಲ್ಲೆಗೆ ಪ್ರವಾಸೋದ್ಯಮ ಇಲಾಖೆಯಿಂದ ಮಂಜೂರಾಗಿರುವ ಅನುದಾನ

**ಶ್ರೀ ಕಾಂತರಾಜು (ಬಿಎಂಎಲ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೮೩ (೨೬೬೫) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೧೬ನೇ ಸಾಲಿನಲ್ಲಿ ತುಮಕೂರು ಜಿಲ್ಲೆಗೆ ಪ್ರವಾಸೋದ್ಯಮ ಅಭಿವೃದ್ಧಿಗಾಗಿ ಮಾಡಿರುವ ಅನುದಾನವೆಷ್ಟು;

(ಆ) ಮಂಜೂರಾದ ಅನುದಾನದಲ್ಲಿ ತುಮಕೂರು ಜಿಲ್ಲೆಯಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಂಡು ಯಾವ ಯಾವ ಸ್ಥಳಗಳನ್ನು ಅಭಿವೃದ್ಧಿಪಡಿಸಲಾಗಿದೆ ; ಹಾಗೂ ಈ ಕಾಮಗಾರಿಗಳಿಗೆ ವಿನಿಯೋಗಿಸಿರುವ ಹಣವೆಷ್ಟು; (ವಿವರ ನೀಡುವುದು)

(ಇ) ಕಳೆದ ಸಾಲಿನಲ್ಲಿ ಬಂದ ಅನುದಾನದಲ್ಲಿ ಬಾಕಿ ಇರುವ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆಯೇ ; ಇಲ್ಲದಿದ್ದಲ್ಲಿ, ಕಾರಣವೇನು ; (ವಿವರ ನೀಡುವುದು)

(ಈ) ೨೦೧೬-೧೭ನೇ ಸಾಲಿನಲ್ಲಿ ಪ್ರವಾಸೋದ್ಯಮ ಸ್ಥಳಗಳನ್ನು ಅಭಿವೃದ್ಧಿಪಡಿಸಲು ಕಾಯ್ದಿರಿಸುವ ಅನುದಾನವೆಷ್ಟು ; ಈ ಅನುದಾನ ಯಾವ ಯಾವ ಜಿಲ್ಲೆಗಳಿಗೆ ಎಷ್ಟು ಅನುದಾನವನ್ನು ನಿಗಧಿ ಮಾಡಲಾಗಿದೆ ; (ವಿವರ ನೀಡುವುದು)

(ಉ) ತುಮಕೂರು ಜಿಲ್ಲೆಯ ಪ್ರವಾಸಿ ತಾಣಗಳಿಗೆ ಮತ್ತು ದೇವಸ್ಥಾನಗಳಿಗೆ ೨೦೧೬-೧೭ನೇ ಸಾಲಿನಲ್ಲಿ ಬಿಡುಗಡೆ ಮಾಡಿರುವ ಅನುದಾನವೆಷ್ಟು; ಈ ಅನುದಾನದಲ್ಲಿ ಕೈಗೊಂಡಿರುವ ಹಾಗೂ ಕೈಗೊಳ್ಳಬೇಕಾಗಿರುವ ಕಾಮಗಾರಿಗಳು ಯಾವುವು ? (ತಾಲ್ಲೂಕುವಾರು ವಿವರ ನೀಡುವುದು)

## ಸಾಂಕ್ರಾಮಿಕ ರೋಗಗಳು ಹರಡುತ್ತಿರುವ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೫೮೪ (೨೬೬೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ತುಮಕೂರು ಜಿಲ್ಲೆಯಲ್ಲಿ ಯಾವ ಯಾವ ತಾಲ್ಲೂಕುಗಳಲ್ಲಿ ಸಾಂಕ್ರಾಮಿಕ ರೋಗ ಹರಡಿರುವ ಬಗ್ಗೆ ವರದಿಯಾಗಿದೆ ; (ವಿವರ ನೀಡುವುದು)

(ಆ) ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಬೆನಕಕಟ್ಟೆ ಗ್ರಾಮದಲ್ಲಿ ರಸ್ತೆಯ ಮೇಲೆ ಹರಿಯುತ್ತಿರುವ ಕೊಳಚೆ, ನೀರಿನಿಂದಾಗಿ ಸಾಂಕ್ರಾಮಿಕ ರೋಗ ಹರಡಲು ಸೃಷ್ಟಿಯಾಗಿರುವ ಲಾರ್ವಾ ವಾತಾವರಣದ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿಲ್ಲವೇ ;

(ಇ) ಬಂದಿದ್ದಲ್ಲಿ, ಸರ್ಕಾರ ಮುಂಜಾಗ್ರತಾ ಕ್ರಮವಾಗಿ ಯಾವ ಯಾವ ಕ್ರಮವನ್ನು ತೆಗೆದುಕೊಳ್ಳಲಾಗಿದೆ ; (ವಿವರ ನೀಡುವುದು)

(ಈ) ಈ ಗ್ರಾಮದ ಕುಡಿಯುವ ನೀರಿಗೆ ಅಳವಡಿಸಿರುವ ತೊಟ್ಟಿ ಕಲ್ಯಾಣಿ ಪಕ್ಕದಲ್ಲೆ ಇದ್ದು, ನೀರು ಸೋರಿ, ಪಾಚಿ, ಕಳೆ ಬೆಳೆದು, ಸೊಳ್ಳೆಗಳು ಉತ್ಪತ್ತಿಯಾಗಿ, ಚಿಕನ್‌ಗುನ್ಯಾ ಮತ್ತಿತರ ರೋಗಗಳು ಉಲ್ಬಣಿಸುತ್ತಿರುವ ಬಗ್ಗೆ ವರದಿಯಾಗಿಲ್ಲವೇ ;

(ಉ) ಪತ್ರಿಕೆಗಳಲ್ಲಿ ವರದಿಯಾಗಿದ್ದರೂ ಸಹ ಈ ಸಾಂಕ್ರಾಮಿಕ ಮತ್ತು ಇತರೆ ರೋಗಗಳು ಬೇರೆ ಬೇರೆ ಕಡೆ ಹರಡದಂತೆ ಸರ್ಕಾರ ವಹಿಸಿರುವ ಕ್ರಮಗಳೇನು ? (ವಿವರ ನೀಡುವುದು)

**ಶ್ರೀನಿವಾಸ್**
ಕಾರ್ಯದರ್ಶಿ (I/c)
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0111/800 ಪ್ರತಿಗಳು/12–07–2016